ಸಂಪಾದಕರು: ರವಿಕುಮಾರ್ ಸಿ.ಹೆಚ್.

RNI: KARKAN/2021/80805

ಓದುಗರ ನೆಚ್ಚಿನ ಕನ್ನಡ ದಿನಪತ್ರಿಕೆ

ಸೂರ್ಯ ಪ್ರಗತಿ

SURYA PRAGATHI Kannada daily

ಡಿಜಿಟಲ್ ನ್ಯೂಸ್ ಕಹಾನಿ

ಪ್ರತಿ ಸುದ್ಧಿಯ ಧ್ವನಿ

suryapragathidailynews@gmail.com 9901010109 L2/RNP-1285/TMR/2025-27

Volume: 05 ಸಂಪುಟ: 05 | Issue:219 ಸಂಚಿಕೆ: 219 | Date:23-09-2026 Wednesday | RNI NO : KARKAN/2021/80805 | L2/RNP-1285/TMR/2025-27 | Page :4 ಪುಟ : 4 | Price: 1.00 ಬೆಲೆ: 1.00 ರೂ

ಸಣ್ ಸುದ್ದಿ

ವಿದ್ಯುತ್ ಶಾರ್ಟ್ ಸರ್ಕ್ಯೂಟ್

ದವಸ ಧಾನ್ಯ, ಹಣ, ದಾಖಲೆ ಪತ್ರಗಳು ಸುಟ್ಟು ಭಸ್ಮ

ಸೂರ್ಯಪ್ರಗತಿನ್ಯೂಸ್.ಕಾಂ

ಪಾವಗಡ: ವಿದ್ಯುತ್ ಶಾರ್ಟ್ ಸರ್ಕ್ಯೂಟ್‌ನಿಂದ ತೆಂಗಿನ ಗರಿ ಹಾಗೂ ಮೇಲ್ಚಾವಣಿ ಶೀಟ್‌ನ ಗುಡಿಸಲಿಗೆ ಬೆಂಕಿ ಹೊತ್ತಿಕೊಂಡು ದವಸ ಧಾನ್ಯ, ಹಣ, ದಾಖಲೆ ಪತ್ರಗಳು ಸೇರಿದಂತೆ ಮನೆಯಲ್ಲಿದ್ದ ವಸ್ತುಗಳು ಸುಟ್ಟು ನಾಶವಾಗಿರುವ ಘಟನೆ ತಾಲ್ಲೂಕಿನ ದವಡಬೆಟ್ಟ ಗ್ರಾಮದಲ್ಲಿ ನಡೆದಿದೆ. ಗ್ರಾಮದ ನಿವಾಸಿ ಚಿಕ್ಕಣ್ಣ (80) ಅವರ ಗುಡಿಸಲಿಗೆ ವಿದ್ಯುತ್ ಶಾರ್ಟ್ ಸರ್ಕ್ಯೂಟ್‌ನಿಂದ ಬೆಂಕಿ ಹೊತ್ತಿಕೊಂಡಿದೆ. ಚಿಕ್ಕಣ್ಣ ಅವರು ಒಂಟಿಯಾಗಿ ವಾಸವಾಗಿದ್ದು, ಜೀವನೋಪಾಯಕ್ಕಾಗಿ ಸುಮಾರು 10 ಮೇಕೆಗಳನ್ನು ಸಾಕಿಕೊಂಡಿದ್ದರು. ಅವರ ಮಕ್ಕಳು ಜೀವನೋಪಾಯಕ್ಕಾಗಿ ಬೆಂಗಳೂರಿಗೆ ತೆರಳಿದ್ದಾರೆ.

ಸೋಮವಾರ ಬೆಳಿಗ್ಗೆ ಮೇಕೆಗಳನ್ನು ಮೇಯಿಸಲು ತೆರಳಿದ್ದ ಚಿಕ್ಕಣ್ಣ ಅವರು ಮಧ್ಯಾಹ್ನ ಮನೆಗೆ ಹಿಂದಿರುಗುವಷ್ಟರಲ್ಲಿ ಗುಡಿಸಲಿಗೆ ಬೆಂಕಿ ಹೊತ್ತಿಕೊಂಡಿತ್ತು. ಬೆಂಕಿಯಿಂದ ಮನೆಯಲ್ಲಿದ್ದ ಹಣ, ದವಸ ಧಾನ್ಯ, ಆಧಾರ್ ಸೇರಿದಂತೆ ಪ್ರಮುಖ ದಾಖಲೆಗಳು, ಜಮೀನಿಗೆ ಸಂಬಂಧಿಸಿದ ದಾಖಲೆಗಳು ಹಾಗೂ ಗೃಹೋಪಯೋಗಿ ವಸ್ತುಗಳು ಸುಟ್ಟು ನಾಶವಾಗಿವೆ. ಘಟನೆಯಲ್ಲಿ ಎರಡು ಮೇಕೆಗಳು ಸುಟ್ಟು ಮೃತಪಟ್ಟಿವೆ. ನಾನು ಒಬ್ಬನೇ ವಾಸವಾಗಿದ್ದೇನೆ. ಬೆಂಕಿ ಬಿದ್ದು ಮನೆಯಲ್ಲಿದ್ದ ಎಲ್ಲವೂ ನಾಶವಾಗಿದೆ. ಜೀವನ ನಡೆಸುವುದೇ ಕಷ್ಟವಾಗಿದೆ' ಎಂದು ಚಿಕ್ಕಣ್ಣ ನೊಂದಿದ್ದಾರೆ. ಸ್ಥಳೀಯ ಮುಖಂಡ ತಿಮ್ಮಣ್ಣ ಮಾತನಾಡಿ ಸಂಬಂಧಪಟ್ಟ ಅಧಿಕಾರಿಗಳು ಕೂಡಲೇ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿ, ಸರ್ಕಾರದಿಂದ ದೊರೆಯುವ ಪರಿಹಾರ ಹಾಗೂ ಅಗತ್ಯ ನೆರವು ಕಲ್ಪಿಸಬೇಕು' ಎಂದು ಮನವಿ ಮಾಡಿದರು. ಘಟನಾ ಸ್ಥಳಕ್ಕೆ ಕಂದಾಯ ಇಲಾಖೆಯ ಆರ್‌ಐ ಸುದರ್ಶನ್ ಹಾಗೂ ಪಶುಪಾಲನಾ ಇಲಾಖೆಯ ಅಧಿಕಾರಿ ಗೌತಮಿ ಮತ್ತು ಸಿಬ್ಬಂದಿ ಶ್ರೀನಿವಾಸ್ ಭೇಟಿ ನೀಡಿ ಪರಿಶೀಲನೆ ನಡೆಸಿದರು.

ಈ ಸಂದರ್ಭದಲ್ಲಿ ಸ್ಥಳೀಯರಾದ ಕೃಷ್ಣನಾಯಕ, ಹನುಮಂತ್ರಾಯ, ನಿಂಗಪ್ಪ, ಗಂಗಮ್ಮ, ಸುಶೀಲಮ್ಮ, ಲಕ್ಷ್ಮೀದೇವಮ್ಮ ಸೇರಿದಂತೆ ಹಲವರು ಉಪಸ್ಥಿತರಿದ್ದರು.

ಸೂರ್ಯ ಪ್ರಗತಿ ಕನ್ನಡ ದಿನ ಪತ್ರಿಕೆ

ಗಣೇಶ ಮೆರವಣಿಗೆ ವೇಳೆ ಗುಂಪುಗಳ ನಡುವೆ ಮಾರಾಮಾರಿ

30 ಜನರ ವಿರುದ್ಧ ದೂರು

ತುಮಕೂರು : ಜಿಲ್ಲೆಯ ಪಾವಗಡ ತಾಲೂಕಿನ ಕೆ.ಸೇವಾಲಾಲ್ ಪುರ ತಾಂಡಾದಲ್ಲಿ ಸೆಪ್ಟೆಂಬರ್ 20ರಂದು ಗಣೇಶ ಮೂರ್ತಿಯ ಮೆರವಣಿಗೆಯ ಸಂದರ್ಭದಲ್ಲಿ ಭೀಕರ ಗಲಾಟೆ ಸಂಭವಿಸಿದೆ. ಮೆರವಣಿಗೆ ಮತ್ತು ಪ್ರತಿಷ್ಠಾಪನೆಯ ಮುನ್ನ ತಮ್ಮ ಗಮನಕ್ಕೆ ತಂದಿಲ್ಲ ಎಂಬ ಕಾರಣವನ್ನಿಟ್ಟುಕೊಂಡು ವೆಂಕಟೇಶ್ ನಾಯ್ಕ್ ಎಂಬ ವ್ಯಕ್ತಿ ಜಗಳ ಆರಂಭಿಸಿದ್ದನು.

ಈ ವೇಳೆ ಪರಿಸ್ಥಿತಿ ವಿಕೋಪಕ್ಕೆ ತಿರುಗಿ, ಇಪ್ಪತ್ತಕ್ಕೂ ಹೆಚ್ಚು ಜನರಿದ್ದ ಗುಂಪು ಹರಿತವಾದ ಮಾರಕ ಆಯುಧಗಳು ಹಾಗೂ ದೊಣ್ಣೆಗಳಿಂದ ಹಲ್ಲೆ ನಡೆಸಿದೆ. ಈ ದಾಳಿಯಲ್ಲಿ ಮಹಿಳೆಯರು ಮತ್ತು ಮಕ್ಕಳು ಎನ್ನದೆ ಪ್ರತಿಯೊಬ್ಬರ ಮೇಲೆಯೂ ಮನಬಂದಂತೆ ಹಲ್ಲೆ ಮಾಡಲಾಗಿದೆ. ಈ ಘಟನೆಗೆ ಸಂಬಂಧಿಸಿದಂತೆ ಪಾವಗಡ ಪೊಲೀಸ್ ಠಾಣೆಯಲ್ಲಿ ಪರಸ್ಪರ ದೂರುಗಳು ಸಲ್ಲಿಕೆಯಾಗಿದ್ದು, ಒಟ್ಟು ಎರಡು ಪ್ರತ್ಯೇಕ ಎಫ್‌ಐಆರ್‌ಗಳನ್ನು ದಾಖಲಿಸಿಕೊಳ್ಳಲಾಗಿದೆ. ವೆಂಕಟೇಶನಾಯ್ಕ್ ಕೆ.ವಿ, ಮಲ್ಲಿಕಾರ್ಜುನ ನಾಯ್ಕ್, ಪವನ್‌ಕುಮಾರ್ ಹಾಗೂ ಸಂತೋಷ್ ಸೇರಿದಂತೆ ಒಂದು ಗುಂಪಿನ 17 ಜನರ ಮೇಲೆ ಹಾಗೂ ಇನ್ನೊಂದು ಕಡೆಯ 13 ಜನರ ಮೇಲೆ ಪ್ರಕರಣ ದಾಖಲಾಗಿದೆ. ಒಟ್ಟಾರೆಯಾಗಿ 30 ಆರೋಪಿಗಳ ವಿರುದ್ಧ ಕೇಸ್ ಹೂಡಲಾಗಿದ್ದು, ಇದರಲ್ಲಿ ಒಂದು ಪೋಕ್ಸೊ ಪ್ರಕರಣವೂ ಸೇರಿದೆ.

ಕೇಂದ್ರದ ಮಾರ್ಗ ಸೂಚಿಯಂತೆಯೇ ಬರ ಘೋಷಣೆ; ಬರಪೀಡಿತ ತಾಲೂಕುಗಳ ಸಂಖ್ಯೆ 177ಕ್ಕೆ ಏರಿಕೆ

ಪರಿಸ್ಥಿತಿಗೆ ಅನುಗುಣವಾಗಿ ಮತ್ತಷ್ಟು ತಾಲೂಕುಗಳ ಸೇರ್ಪ;ಪರಮೇಶ್ವರ

ಸೂರ್ಯಪ್ರಗತಿನ್ಯೂಸ್.ಕಾಂ

ಬೆಂಗಳೂರು, : ಕಸ್ತೂರಿ ರಂಗನ್ ವರದಿ ಹಾಗೂ ರಾಜ್ಯದಲ್ಲಿ ಉಂಟಾಗಿರುವ ಗಂಭೀರ ಬರ ಪರಿಸ್ಥಿತಿಯ ಕುರಿತು ವಿಧಾನಮಂಡಲದಲ್ಲಿ ಪಕ್ಷಾತೀತವಾಗಿ ಸಮಗ್ರ ಚರ್ಚೆ ನಡೆಸಿ, ರಾಜ್ಯದ ಹಿತಾಸಕ್ತಿಗೆ ಪೂರಕವಾದ ಒಮ್ಮತದ ನಿರ್ಣಯ ಕೈಗೊಳ್ಳಬೇಕಿದೆ ಎಂದು ಉಪಮುಖ್ಯಮಂತ್ರಿಗಳು ಹಾಗೂ ಕಂದಾಯ ಸಚಿವರಾದ ಡಾ. ಜಿ. ಪರಮೇಶ್ವರ ಅವರು ಹೇಳಿದರು. ವಿಧಾನಪರಿಷತ್‌ನಲ್ಲಿ ಮಾತನಾಡಿದ ಅವರು, ಕಸ್ತೂರಿ ರಂಗನ್ ವರದಿಯ 7ನೇ ಕರಡು ಪ್ರತಿಗೆ ಸಂಬಂಧಿಸಿದಂತೆ ರಾಜ್ಯ ಸರ್ಕಾರವು ನಿಗದಿತ ಅವಧಿಯೊಳಗೆ ತನ್ನ ಅಭಿಪ್ರಾಯವನ್ನು ಕೇಂದ್ರ ಸರ್ಕಾರಕ್ಕೆ ತಿಳಿಸಬೇಕಿದೆ. ಸರ್ಕಾರದ ಅಭಿಪ್ರಾಯವನ್ನಷ್ಟೇ ಏಕಪಕ್ಷೀಯವಾಗಿ ಸಲ್ಲಿಸುವ ಬದಲು, ಸದನದಲ್ಲಿ ಆಡಳಿತ ಮತ್ತು ವಿರೋಧ ಪಕ್ಷಗಳ ಸದಸ್ಯರು ಮುಕ್ತವಾಗಿ ಚರ್ಚಿಸಿ, ರಾಜ್ಯದ ಹಿತದೃಷ್ಟಿಯಿಂದ ಒಮ್ಮತದ ನಿಲುವನ್ನು ಕೇಂದ್ರಕ್ಕೆ ತಿಳಿಸುವುದು ಸೂಕ್ತ ಎಂಬ ಉದ್ದೇಶದಿಂದ ಈ ವಿಷಯವನ್ನು ಚರ್ಚೆಗೆ ತೆಗೆದುಕೊಳ್ಳಲಾಗಿದೆ ಎಂದು ತಿಳಿಸಿದರು.

ರಾಜ್ಯಾದ್ಯಂತ ಗಂಭೀರ ಬರ ಪರಿಸ್ಥಿತಿ : ರಾಜ್ಯದಲ್ಲಿ ಈ ಬಾರಿ ಬರ ಪರಿಸ್ಥಿತಿ ಅತ್ಯಂತ ಗಂಭೀರವಾಗಿದೆ. ಇದು ಕೆಲವೇ ತಾಲೂಕುಗಳಿಗೆ ಸೀಮಿತವಾಗಿಲ್ಲ. ರಾಜ್ಯದ ಬಹುತೇಕ ಭಾಗಗಳಲ್ಲಿ ಮಳೆಯ ತೀವ್ರ ಕೊರತೆ ಕಂಡುಬಂದಿದ್ದು, ಕೃಷಿ ಚಟುವಟಿಕೆ ಮತ್ತು ರೈತರ ಬದುಕಿನ ಮೇಲೆ ಗಂಭೀರ ಪರಿಣಾಮ ಬೀರಿದೆ ಎಂದು ವಿವರಿಸಿದರು.

ಹಿಂದಿನ ತೀವ್ರ ಬರ ಪರಿಸ್ಥಿತಿಗಳೊಂದಿಗೆ ಈ ವರ್ಷದ ಅಂಕಿ–ಅಂಶಗಳನ್ನು ಹೋಲಿಕೆ ಮಾಡಲಾಗುತ್ತಿದ್ದು, ಪ್ರಸ್ತುತ ಪರಿಸ್ಥಿತಿಯ ತೀವ್ರತೆಯನ್ನು ಸರ್ಕಾರ ಗಂಭೀರವಾಗಿ ಪರಿಗಣಿಸಿದೆ. ಪೆಸಿಫಿಕ್ ಸಾಗರದ ಮೇಲ್ಮೈ ನೀರಿನ ತಾಪಮಾನ ಹೆಚ್ಚಳದಿಂದ ಉಂಟಾಗುವ ಎಲ್ ನಿನೋ ಪ್ರಕ್ರಿಯೆಯೂ ಮಳೆ ಕೊರತೆಗೆ ಕಾರಣವಾಗಿದ್ದು, ಈ ಬಾರಿ ಅದರ ತೀವ್ರತೆ ಹೆಚ್ಚಿದೆ ಎಂದರು. ರಾಜ್ಯದಲ್ಲಿ ವಾಡಿಕೆಯಂತೆ

ಸುಮಾರು 852 ಮಿ.ಮೀ. ಮಳೆಯಾಗಬೇಕಿತ್ತು, ಆದರೆ 642 ಮಿ.ಮೀ. ಮಳೆಯಷ್ಟೇ ದಾಖಲಾಗಿದೆ. ಜೂನ್‌ನಿಂದ ಸೆಪ್ಟೆಂಬರ್ 26ರವರೆಗಿನ ಅವಧಿಯಲ್ಲಿ ವಿವಿಧ ಪ್ರದೇಶಗಳಲ್ಲಿ ತೀವ್ರ ಮಳೆ ಕೊರತೆ ಉಂಟಾಗಿದೆ ಎಂದು ಸದನದ ಗಮನಕ್ಕೆ ತಂದರು.

ರಾಜ್ಯದ ಸರಾಸರಿ ಮಳೆ ಕೊರತೆ ಶೇ.36ರಷ್ಟಿದ್ದು, ದಕ್ಷಿಣ ಒಳನಾಡಿನಲ್ಲಿ ಶೇ.46, ಉತ್ತರ ಒಳನಾಡಿನಲ್ಲಿ ಶೇ.44, ಮಲೆನಾಡಿನಲ್ಲಿ ಶೇ.38 ಹಾಗೂ ಕರಾವಳಿ ಭಾಗದಲ್ಲಿ ಶೇ.28ರಷ್ಟು ಮಳೆ ಕೊರತೆ ದಾಖಲಾಗಿದೆ ಎಂದು ವಿವರಿಸಿದರು.

ಮಳೆ ಆರಂಭವಾದ ಸಂದರ್ಭದಲ್ಲಿ ರೈತರು ಬಿತ್ತನೆ ಕೈಗೊಂಡಿದ್ದರು. ಆದರೆ ಕೆಲವೇ ದಿನಗಳಲ್ಲಿ ಮಳೆ ಕೈಕೊಟ್ಟ ಪರಿಣಾಮ ಮೊಳಕೆಯೊಡೆದ ಬೆಳೆಗಳು ಒಣಗಿವೆ. ನಂತರ ಮಳೆಯಾದಾಗ ಎರಡನೇ ಬಾರಿ ಬಿತ್ತನೆ ಮಾಡಿದ ಬೆಳೆಗಳಿಗೂ ಹಾನಿಯಾಗಿದೆ. ಹಲವು ಪ್ರದೇಶಗಳಲ್ಲಿ ಬೆಳೆ ಹಾನಿ ತೀವ್ರವಾಗಿದ್ದು, ರೈತರು ಸಂಕಷ್ಟಕ್ಕೆ ಸಿಲುಕಿದ್ದಾರೆ ಎಂದು ಹೇಳಿದರು.

177 ತಾಲೂಕುಗಳು ಬರಪೀಡಿತ ಪಟ್ಟಿಗೆ : ಕೇಂದ್ರ ಸರ್ಕಾರವು 2020ರಲ್ಲಿ ರೂಪಿಸಿರುವ ಬರ ಘೋಷಣೆಯ ಮಾರ್ಗಸೂಚಿಗಳ ಪ್ರಕಾರವೇ ತಾಲೂಕುಗಳನ್ನು ಬರಪೀಡಿತ ಎಂದು ಘೋಷಿಸಬೇಕಾಗುತ್ತದೆ. ಆ ಮಾನದಂಡಗಳನ್ನು

ಕುಡಿಯುವ ನೀರಿನ ಸಮಸ್ಯೆ ಪರಿಹಾರಕ್ಕೆ ಅಧಿಕಾರಿಗಳ ನಿರ್ಲಕ್ಷ್ಯ ಸಹಿಸಲ್ಲ: ಶುಭ ಕಲ್ಯಾಣ್ ಎಚ್ಚರಿಕೆ

ಬಲ್ಲೇನಹಳ್ಳಿಯಲ್ಲಿ ಬೋರ್ವೆಲ್ ನಲ್ಲಿ ನೀರು ಬರುವವರೆಗೂ ಒಂದು ಗಂಟೆ ಸ್ಥಳದಲ್ಲಿ ಕುಳಿತ ಜಿಲ್ಲಾಧಿಕಾರಿಗಳು

ಸೂರ್ಯಪ್ರಗತಿನ್ಯೂಸ್.ಕಾಂ ವರದಿ;ಲೋಕಣ್ಣ

ಚಿಕ್ಕನಾಯಕನಹಳ್ಳಿ: ತಾಲೂಕಿನಲ್ಲಿ ತೀವ್ರ ಬರ ಪರಿಸ್ಥಿತಿ ತಲೆದೋರಿರುವುದರಿಂದ ಗ್ರಾಮೀಣ ಭಾಗದಲ್ಲಿ ಕುಡಿಯುವ ನೀರಿನ ಸಮಸ್ಯೆ ಉಲ್ಬಣಿಸದಂತೆ ಸ್ಥಳೀಯ ಆಡಳಿತ ತಕ್ಷಣವೇ ಯುದ್ಧೋಪಾದಿಯಲ್ಲಿ ಕ್ರಮ ಕೈಗೊಳ್ಳಬೇಕು. ಯಾವುದೇ ಕಾರಣಕ್ಕೂ ಸಾರ್ವಜನಿಕರಿಗೆ ನೀರಿನ ಸಮಸ್ಯೆ ಎದುರಾಗಲು ಬಿಡುವುದಿಲ್ಲ, ಅಧಿಕಾರಿಗಳು ಸೂಕ್ತ ಕ್ರಮ ಕೈಗೊಳ್ಳಬೇಕು ಎಂದು ಜಿಲ್ಲಾಧಿಕಾರಿ ಶುಭ ಕಲ್ಯಾಣ್ ಅಧಿಕಾರಿಗಳಿಗೆ ಖಡಕ್ ಸೂಚನೆ ನೀಡಿದರು.

ತಾಲೂಕಿನ ಶೆಟ್ಟಿಕೆರೆ ಹೋಬಳಿಯ ತರಬೇನಹಳ್ಳಿ , ಬಲ್ಲೇನಹಳ್ಳಿ ಸೇರಿದಂತೆ ಹಲವು ಗ್ರಾಮಗಳಿಗೆ ಭೇಟಿ ನೀಡಿದ ಜಿಲ್ಲಾಧಿಕಾರಿಗಳು, ನೀರಿನ ಸಮಸ್ಯೆ ಮತ್ತು ಬರ ಪರಿಸ್ಥಿತಿಯ ವಾಸ್ತವ ವೀಕ್ಷಣೆ ನಡೆಸಿದರು. ಸ್ವತಃ ಅರ್ಧ ಕಿಲೋ ಮೀಟರ್‌ಗೂ ಹೆಚ್ಚು ದೂರ ಕಾಲ್ನಡಿಗೆಯಲ್ಲೇ ತೆರಳಿ ಬೋರ್ವೆಲ್ ಗಳು, ಇತರ ಸಮಸ್ಯೆಗಳನ್ನು ಮತ್ತು ಗ್ರಾಮಸ್ಥರ ಅಹವಾಲುಗಳನ್ನು ಆಲಿಸಿದರು.

ಬೋರ್‌ವೆಲ್‌ಗಳ ಪುನಶ್ಚೇತನಕ್ಕೆ ಸೂಚನೆ: ಬರ ನಿರ್ವಹಣೆಯ ಪರಿಶೀಲನೆ ವೇಳೆ ಮಾತನಾಡಿದ ಜಿಲ್ಲಾ ಧಿಕಾರಿಗಳು, "ಎಲ್ಲೆಲ್ಲಿ ಬೋರ್‌ವೆಲ್‌ಗಳು ವಿಫಲವಾಗಿವೆ ಹಾಗೂ ಹೊಸದಾಗಿ ಕೊರೆಸಿದ ಕೊಳವೆ ಬಾವಿಗಳಿಗೆ ವಿದ್ಯುತ್ ಸಂಪರ್ಕ ಸಿಕ್ಕಿದೆಯೇ ಎಂಬುದನ್ನು

ಖುದ್ದಾಗಿ ಪರಿಶೀಲಿಸಲಾಗುತ್ತಿದೆ. ತರಬೇನಹಳ್ಳಿಯಲ್ಲಿ ಹೊಸ' ಬೋರ್ ವೆಲ್ ವಿಫಲವಾಗಿರುವುದರಿಂದ, ಎತ್ತಿನ' ಹೊಳೆ ಕಾಮಗಾರಿ ಭಾಗದಲ್ಲಿದ್ದ 2.5 ಇಂಚು ಇಳುವರಿ ಇರುವ ಕೊಳವೆಬಾವಿಯಿಂದ 1 ಕಿ.ಮೀ ಪೈಪ್ ಲೈನ್ ಅಳವಡಿಸಿ ತಕ್ಷಣವೇ ನೀರು ಪೂರೈಸಲು ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ (RDW&S) ಅಧಿಕಾರಿಗಳಿಗೆ ಗಡುವು ನೀಡಲಾಗಿದೆ. ಈಗಾಗ'ಲೇ ಸರಿಯಾಗಿ ಸ್ಪಂದಿಸದ ಅಧಿಕಾರಿಗಳಿಗೆ ನೋಟಿಸ್ ಜಾರಿ ಮಾಡಿದ್ದು, ಜವಾಬ್ದಾರಿಯಿಂದ ಕೆಲಸ ಮಾಡದಿದ್ದರೆ ಶಿಸ್ತುಕ್ರಮ ಕೈಗೊಳ್ಳಲಾಗುವುದು" ಎಂದು ಎಚ್ಚರಿಸಿದರು.

ಬಲ್ಲೇನಳ್ಳಿಯಲ್ಲಿ ಒಂದು ಗಂಟೆ ಸ್ಥಳದಲ್ಲಿ ಕುಳಿತ ಜಿಲ್ಲಾಧಿಕಾರಿಗಳು

ಬೋರ್ ವೆಲ್ ಕೊರೆದಿದ್ದು ಅದರಲ್ಲಿ ಸಂಪೂರ್ಣವಾಗಿ ನೀರು ಇದೆ ಎಂದು ಜಿಲ್ಲಾಧಿಕಾರಿಗಳಿಗೆ ಮಾಹಿತಿ ನೀಡಿ ಸ್ಥಳಕ್ಕೆ ಕರೆದು ಕೊಂಡು ಬಂದಿದ್ದು ಪಿ ಡಿ ಓ. ಆದರೆ ಡಿ ಸಿ ಅವರು ಬಂದು ನೋಡಿದರೆ ಆ ಬೋರ್ ವೆಲ್ ಗೆ ವಿದ್ಯುತ್ ಸಂಪರ್ಕವೇ ಕೊಟ್ಟಿರಲಿಲ್ಲ ಅದಕ್ಕೆ ಆಕ್ರೋಶ ವ್ಯಕ್ತಪಡಿಸಿದ ಜಿಲ್ಲಾಧಿಕಾರಿಗಳು ಸ್ಥಳದಲ್ಲಿಯೇ ಒಂದು ಗಂಟೆಗಳ ಕಾಲ ಕುಳಿತು ಆ ಬೋರ್ವೆಲ್‌ಗೆ ವಿದ್ಯುತ್ ಸಂಪರ್ಕ ಕೊಡಿಸಿ ಬೋರ್ವೆಲ್ ನಲ್ಲಿ ನೀರು ಬರುವುದನ್ನು ಕಾತರಿ ಪಡಿಸಿಕೊಂಡು ಸಂಬಂಧಪಟ್ಟ ಅಧಿಕಾರಿಗಳ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದರು.

ಜಿಲ್ಲೆಗೆ 15 ಕೋಟಿ ರೂ. ಅನುದಾನ:

"ಜಿಲ್ಲೆಯಲ್ಲಿ ಕುಡಿಯುವ ನೀರಿನ ಪರಿಹಾರ ಕಾಮಗಾರಿಗಳಿಗಾಗಿ ಸರ್ಕಾರದಿಂದ ಈಗಾಗಲೇ 15 ಕೋಟಿ ಅನುದಾನ ಬಿಡುಗಡೆಯಾಗಿದೆ. ತಹಶೀಲ್ದಾರ್ ಹಾಗೂ ತಾಲೂಕು ಪಂಚಾಯತ್ ಇಒಗಳು ಪಿಡಿಒಗಳ ಜೊತೆ ನಿರಂತರ ಸಂಪರ್ಕದಲ್ಲಿದ್ದು, ನೀರಿನ ಸಮಸ್ಯೆಗಳಿಗೆ ಸ್ಥಳದಲ್ಲೇ ಪರಿಹಾರ ರೂಪಿಸಬೇಕು. ನೆಪ ಹೇಳಿಕೊಂಡು ಕೂರದೆ ತಕ್ಷಣವೇ ಬೋರ್‌ವೆಲ್‌ಗಳನ್ನು ಸುಸ್ಥಿತಿಗೆ ತಂದು ಜನರಿಗೆ ನೀರು ಒದಗಿಸಬೇಕು" ಎಂದರು.

ಡಿಸೆಂಬರ್ ವೇಳೆಗೆ ಆಶ್ರಯ ನಿವೇಶನ ಹಂಚಿಕೆ:

ಸರ್ಕಾರದ ಮಹತ್ವಾಕಾಂಕ್ಷಿ ಯೋಜನೆಯಡಿ ಡಿಸೆಂಬರ್ ಮೊದಲ ವಾರದೊಳಗೆ ಅರ್ಹ ಫಲಾನುಭವಿಗಳಿಗೆ ನಿವೇಶನ ಹಂಚಿಕೆ ಮಾಡಲು ಜಿಲ್ಲಾಡಳಿತ ಎಲ್ಲ ಸಿದ್ಧತೆಗಳನ್ನು ಕೈಗೊಂಡಿದೆ. "ಜಿಲ್ಲೆಯಲ್ಲಿ ಸುಮಾರು 1,400 ಎಕರೆ ಜಮೀನನ್ನು ಗುರುತಿಸಿ ಗ್ರಾ.ಪಂ.ಗಳಿಗೆ ಹಸ್ತಾಂತರಿಸಲಾಗಿದೆ. 30,000ಕ್ಕೂ ಹೆಚ್ಚು ನಿವೇಶನ ರಹಿತರಿದ್ದು, ಅರ್ಹರನ್ನು ಪಾರದರ್ಶಕವಾಗಿ ಆಯ್ಕೆ ಮಾಡಿ ನಿವೇಶನ ನೀಡಲಾಗುವುದು. ಗ್ರಾಮಗಳಲ್ಲಿ ಸ್ಮಶಾನ ಜಾಗದ ಸಮಸ್ಯೆಗಳನ್ನೂ ಗಂಭೀರವಾಗಿ ಪರಿಗಣಿಸಿದ್ದು, ಶೀಘ್ರವೇ ಪರಿಹರಿಸಲಾಗುವುದು" ಎಂದು ತಿಳಿಸಿದರು.

ಮೇವು ಕೊರತೆಗೆ ಪರ್ಯಾಯ ಕ್ರಮ:

4ನೇ ಪುಟಕ್ಕೆ

ಪಾಠದ ಜೊತೆ ಜೊತೆಗೆ ಕ್ರೀಡೆಯಲ್ಲಿ ವಿದ್ಯಾರ್ಥಿಗಳು ಭಾಗವಹಿಸಿ ಆರೋಗ್ಯವಂತರಾಗಿ

ಸೂರ್ಯಪ್ರಗತಿನ್ಯೂಸ್.ಕಾಂ

ಕುಣಿಗಲ್ ; ಪಾಠದ ಜೊತೆ ಜೊತೆಗೆ ಪಠ್ಯೇತರ ಚಟುವಟಿಕೆಗಳಾದ ಕ್ರೀಡೆಯಲ್ಲಿ ವಿದ್ಯಾರ್ಥಿಗಳು ಭಾಗವಹಿಸುವ ಮೂಲಕ ಆರೋಗ್ಯವಂತ ದೃಢಕಾಯ ಶರೀರವುಳ್ಳ ಸದೃಢ ವಿದ್ಯಾರ್ಥಿಗಳಾಗಬೇಕೆಂದು ಶಾಸಕ ಡಾ. ಹೆಚ್ .ಡಿ. ರಂಗನಾಥ್ ತಿಳಿಸಿದರು. ಪಟ್ಟಣದ ಜಿ.ಕೆ.ಬಿ.ಎಂ.ಎಸ್ ಶಾಲಾಕ್ರೀಡಾಂಗಣದಲ್ಲಿ ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಾರ್ಯಾಲಯ ಶಾಲಾ ಶಿಕ್ಷಣ ಇಲಾಖೆ ಹಾಗೂ ದೈಹಿಕ ಶಿಕ್ಷಣ ಶಿಕ್ಷಕರ ಸಂಘ' ಇವರ ಸಂಯುಕ್ತ ಆಶಯದಲ್ಲಿ ಬಾಲಕ ಬಾಲಕಿಯರ ತಾಲೂಕು ಮಟ್ಟದ ಕ್ರೀಡಾಕೂಟ

2026–27 ಉದ್ಘಾಟಿಸಿ ಮಾತನಾಡಿದರು. ಮೂರು ದಿನಗಳ ಕಾಲ ನಡೆಯುವ ಈ ಕ್ರೀಡಾ ಕೂಟದಲ್ಲಿ 14 /17ರ ವಯೋಮಿತಿ ಉಳ್ಳ ಬಾಲಕ ಬಾಲಕಿಯರು ಭಾಗವಹಿಸುತ್ತಿದ್ದು ಕ್ರೀಡೆಯಲ್ಲಿ ಭಾಗವಹಿಸುವುದು ಪ್ರತಿಯೊಬ್ಬ ಮನುಷ್ಯ ಆರೋಗ್ಯವಂತನಾಗಿ ಹೆಚ್ಚಿನ ಚಟುವಟಿಕೆಯಿಂದ ಸದಾ ಇರಬೇಕಾದರೆ ಕ್ರೀಡೆ ಸಹಕಾರಿಯಾಗುತ್ತದೆ ಎಂದ ಅವರು ಪಾಠ ಪ್ರವಚನದ ಜೊತೆಗೆ ಕ್ರೀಡೆಯಲ್ಲಿ ತೊಡಗುವುದರೊಂದಿಗೆ ದೇಹ ಮತ್ತು ಜ್ಞಾನ ಬೆಳವಣಿಗೆ ಆಗುವುದರೊಂದಿಗೆ ಜೀವನಪೂರ್ತಿ ಉತ್ತಮ ಬದುಕು ರೂಪಿಸಿಕೊಳ್ಳಬಹುದೆಂದರು.

ಕ್ಷೇತ್ರ ಶಿಕ್ಷಣಾಧಿಕಾರಿ ಮಮತಾಮಣಿ ಅಧ್ಯಕ್ಷತೆ ವಹಿಸಿ ಮಾತನಾಡುತ್ತಾ ಈ ಕ್ರೀಡಾಕೂಟವು ಈಗಾಗಲೇ ಆರು ಹೋಬಳಿಗಳಿಂದ ಪ್ರಾಥಮಿಕ ಹಾಗೂ ಪ್ರೌಢ ಶಾಲಾ ಶಿಕ್ಷಣ ವತಿಯಿಂದ ಈ ಬಾರಿಂಯ ಕ್ರೀಡಾಕೂಟದಲ್ಲಿ 2ನೇ ಪುಟಕ್ಕೆ

ತೋಟದಲ್ಲಿ 8 ಅಡಿ ಎತ್ತರದ ಗಾಂಜಾ ಗಿಡ ಪತ್ತೆ

ವರದಿ ಗುಬ್ಬಿ ಭರತ್

ಗುಬ್ಬಿ: ತೋಟದಲ್ಲಿ ಗಾಂಜಾ ಗಿಡವನ್ನು ಬೆಳೆಸಿದ್ದ ಆರೋಪದ ಮೇರೆಗೆ ಚೇಳೂರು ಪೊಲೀಸರು ದಾಳಿ ನಡೆಸಿ, ಸುಮಾರು 8 ಅಡಿ ಎತ್ತರದ ಗಾಂಜಾ ಗಿಡ ಹಾಗೂ ಅಂದಾಜು 950 ಗ್ರಾಂ ತೂಕದ ಗಾಂಜಾ ಸೊಪ್ಪನ್ನು ವಶಕ್ಕೆ ಪಡೆದು, ತೋಟದ ಮಾಲೀಕನ ಮಗನನ್ನು ಬಂಧಿಸಿರುವ ಘಟನೆ ಭಾನುವಾರ ಗುಡ್ಡದಹಳ್ಳಿ ಹಟ್ಟಿ ಗ್ರಾಮದಲ್ಲಿ ನಡೆದಿದೆ.



ಚೇಳೂರು ಪೊಲೀಸ್ ಠಾಣಾ ವ್ಯಾಪ್ತಿಯ ಗುಡ್ಡದಹಳ್ಳಿ ಹಟ್ಟಿ ಗ್ರಾಮದ ನಿವಾಸಿ ಹಿತೇಂದ್ರ ಬಂಧಿತ ಆರೋಪಿ. ಈತ ಪೊಲೀಸ್ ಸಿಬ್ಬಂದಿಯೊಬ್ಬರ ಮಗ ಎಂದು ತಿಳಿದುಬಂದಿದೆ. ಖಚಿತ ಮಾಹಿತಿ ಆಧರಿಸಿ ಗುಬ್ಬಿ ಸಿಪಿಐ ರಾಘವೇಂದ್ರ ಅವರ ನೇತೃತ್ವದಲ್ಲಿ ಚೇಳೂರು ಪಿಎಸ್‌ಐ ಮಾಳಪ್ಪ.ಎನ್ ಹಾಗೂ ಸಿಬ್ಬಂದಿ ತೋಟದ ಮೇಲೆ ದಾಳಿ ನಡೆಸಿದ್ದಾರೆ. ಈ ವೇಳೆ ಅಗಸೆ ಗಿಡಗಳ ನಡುವೆ ಸುಮಾರು 8 ಅಡಿ ಎತ್ತರದ ಗಾಂಜಾ ಗಿಡ ಬೆಳೆದಿರುವುದು ಪತ್ತೆಯಾಗಿದೆ.

ತೋಟಕ್ಕೆ ನೀರುಣಿಸುವ ಕೆಲಸ ಮಾಡುತ್ತಿದ್ದ ಮಹೇಶ್ ಎಂಬಾತನನ್ನು ಪೊಲೀಸರು ವಶಕ್ಕೆ ಪಡೆದು ವಿಚಾರಣೆ ನಡೆಸಿದಾಗ, ತೋಟದ ಮಾಲೀಕನ ಮಗ ಹಿತೇಂದ್ರ ಗಾಂಜಾ ಗಿಡ ಬೆಳೆಸಿರುವ ಬಗ್ಗೆ ಮಾಹಿತಿ ಲಭ್ಯವಾಗಿದೆ ಎನ್ನಲಾಗಿದೆ. ಬಳಿಕ ಹಿತೇಂದ್ರನನ್ನು ವಶಕ್ಕೆ ಪಡೆದು ವಿಚಾರಣೆ ನಡೆಸಿದಾಗ, ಗಿಡವನ್ನು ತಾನೇ ಬೆಳೆಸಿರುವುದಾಗಿ ಒಪ್ಪಿಕೊಂಡಿದ್ದಾನೆ ಎಂದು ಪೊಲೀಸರು ತಿಳಿಸಿದ್ದಾರೆ.

ಪೊಲೀಸರ ಪ್ರಕಾರ, ಸುಮಾರು 8 ಅಡಿ ಎತ್ತರದ ಒಂದೇ ಗಾಂಜಾ ಗಿಡದಿಂದ ಅಂದಾಜು 950 ಗ್ರಾಂ ಗಾಂಜಾ ಸೊಪ್ಪನ್ನು ವಶಪಡಿಸಿಕೊಳ್ಳಲಾಗಿದೆ. ಗಾಂಜಾ ಬೆಳೆಸಲು ಕಾರಣವೇನು ಹಾಗೂ ಇದರ ಹಿಂದೆ ಬೇರೆ ಯಾರಾದರೂ ಭಾಗಿಯಾಗಿದ್ದಾರೆಯೇ ಎಂಬ ಬಗ್ಗೆ ಪೊಲೀಸರು ತನಿಖೆ ಮುಂದುವರಿಸಿದ್ದಾರೆ. ಚೇಳೂರು ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ಬಂಧಿತ ಆರೋಪಿಯ ವಿರುದ್ಧ ಕಾನೂನು ಕ್ರಮ ಕೈಗೊಳ್ಳಲಾಗಿದೆ.

ಇದೇ ವೇಳೆ, ಚೇಳೂರು ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಗಾಂಜಾ ಪ್ರಕರಣ ದಾಖಲಾಗಿರುವ ಸಂದರ್ಭದಲ್ಲೇ, ಅದೇ ಠಾಣೆಯಲ್ಲಿ ಹೆಡ್ ಕಾನ್ಸ್ಟೇಬಲ್ ಆಗಿ ಕರ್ತವ್ಯ ನಿರ್ವಹಿಸುತ್ತಿರುವ ಸಿಬ್ಬಂದಿಯ ಮಗನೇ ಗಾಂಜಾ ಬೆಳೆಸಿದ ಆರೋಪದಲ್ಲಿ ಬಂಧನಕ್ಕೊಳಗಾಗಿರುವುದು ಸ್ಥಳೀಯವಾಗಿ ಚರ್ಚೆಗೆ ಗ್ರಾಸವಾಗಿದೆ.

ಸೂರ್ಯ ಪ್ರಗತಿ ಕನ್ನಡ ದಿನ ಪತ್ರಿಕೆ

ಹೊಳವನಹಳ್ಳಿ ಆಸ್ಪತ್ರೆಗೆ ಮತ್ತೆ 108 ಅಂಬುಲೆನ್ಸ್ ಬರ

ಜನರ ಆರೋಗ್ಯ ದೃಷ್ಟಿಯಿಂದ ಹೋರಾಟ ಮಾಡಿ ತಂದಿದ್ದ ಸೇವೆ ಕೆಲವೇ ದಿನಕ್ಕೆ ಸ್ಥಗಿತ

ಸೂರ್ಯಪ್ರಗತಿನ್ಯೂಸ್.ಕಾಂ

ಸತೀಶ್ ಎಸ್.ಅಗ್ರಹಾರ......

ಕೊರಟಗೆರೆ: ಹೋಬಳಿ ಕೇಂದ್ರ ಹೊಳವನಹಳ್ಳಿ ಸರ್ಕಾರಿ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ 108 ಅಂಬುಲೆನ್ಸ್ ಸೇವೆ ಇಲ್ಲದೆ ಗಡಿಭಾಗದ ಸಾವಿರಾರು ಜನರು ಸಂಕಷ್ಟಕ್ಕೆ ಸಿಲುಕಿದ್ದಾರೆ.

ಹೊಳವನಹಳ್ಳಿ ಹೋಬಳಿ ವ್ಯಾಪ್ತಿಯಲ್ಲಿ 30ಕ್ಕೂ ಹೆಚ್ಚು ಗ್ರಾಮಗಳಿದ್ದು, ಹೋಬಳಿ ಕೇಂದ್ರದಲ್ಲಿ ಪಿಎಚ್‌ಸಿ ಇದ್ದರೂ ತುರ್ತುವಾಹನದ ವ್ಯವಸ್ಥೆ ಇಲ್ಲದಂತಾಗಿದೆ. ತುರ್ತು ಚಿಕಿತ್ಸೆ ಬೇಕಾದರೆ ಕೊರಟಗೆರೆಯಿಂದ ಅಂಬುಲೆನ್ಸ್ ಬರಬೇಕಿದ್ದು, ಗಡಿಭಾಗದ ಅರಸಾಪುರ, ಬೈರೇನಹಳ್ಳಿ ಮತ್ತು ದೊಡ್ಡಬಳ್ಳಾಪುರ ಗಡಿಯ ಅಕ್ಕಾಜಹಳ್ಳಿ, ದೊಡ್ಡಸಾಗ್ಗೆರೆ* ಗ್ರಾಮಗಳಿಗೆ 25 ರಿಂದ



30 ಕಿ.ಮೀ ಕ್ರಮಿಸಬೇಕಾಗುತ್ತದೆ. ಇದರಿಂದ ಒಂದು ಗಂಟೆಗೂ ಹೆಚ್ಚು ಸಮಯ ವ್ಯರ್ಥವಾಗುತ್ತಿದ್ದು, ರೋಗಿಗಳಿಗೆ ಗೋಲ್ಡನ್ ಅವರ್ ನಲ್ಲಿ ಚಿಕಿತ್ಸೆ ಸಿಗದಂತಾಗಿದೆ. ಹೊಳವನಹಳ್ಳಿಯಲ್ಲೇ ಅಂಬುಲೆನ್ಸ್ ಇದ್ದರೆ ಕೇವಲ 10–15 ಕಿ.ಮೀ ನಲ್ಲಿ ಸೇವೆ ಸಿಗುತ್ತದೆ.



ಈ ಹಿಂದೆ ನಾವು ಸಹ ಸಿದ್ದಲಿಂಗೇ ಗೌಡರ ಜೊತೆ ಕೈ ಜೋಡಿಸಿ ಉಪವಾಸ ಸತ್ಯಾಗ್ರಹ ಮಾಡಿ ಹೊಳವನಹಳ್ಳಿ ಪ್ರಾಥಮಿಕ ಆರೋಗ್ಯ ಕೇಂದ್ರಕ್ಕೆ ಅಂಬುಲೆನ್ಸ್ ಸೇವೆ ಒದಗಿಸಲು ಮನವಿ ಮಾಡಿದ್ದೇವು ಅದು ಹೆಚ್ಚು ದಿನ ಉಳಿಯಲಿಲ್ಲ ಅಂಬುಲೆನ್ಸ್ ಹಿಂಪಡದರು. ಈಗ ಮತ್ತೆ ಅಂಬುಲೆನ್ಸ್ ಸೇವೆ ಒದಗಿಸಲು ಮಾನ್ಯ ಉಪ ಮುಖ್ಯಮಂತ್ರಿ ಡಾ ಜಿ ಪರಮೇಶ್ವರ್ ರವರಲ್ಲಿ ನಾವು ಮನವಿಮಾಡುತ್ತೇವೆ.

ನರಸಿಂಹಮೂರ್ತಿ

(ರಾಜ್ ಕುಮಾರ್)ಹೊಳವನಹಳ್ಳಿ

ಹೋರಾಟದ ಫಲವಾಗಿದ್ದ ಸೇವೆ ಕೆಲವೇ ದಿನಕ್ಕೆ ಮಾಯ:

ಈ ಸಮಸ್ಯೆ ಬಗ್ಗೆ ಈ ಹಿಂದೆ ವಿಶ್ವ ಮಾನವ ಹಕ್ಕುಗಳ ಆಯೋಗದ ಅಧ್ಯಕ್ಷ ಸಿದ್ದಲಿಂಗೌಡ ಅವರು ಹೊಳವನಹಳ್ಳಿ ಆರೋಗ್ಯ ಕೇಂದ್ರಕ್ಕೆ ಅಂಬುಲೆನ್ಸ್ ಒದಗಿಸುವಂತೆ ಆಗ್ರಹಿಸಿ ಉಪವಾಸ ಸತ್ಯಾಗ್ರಹ ನಡೆಸಿದ್ದರು. ಸಾರ್ವಜನಿಕರ ಹೋರಾಟಕ್ಕೆ ಮಣಿದ ಇಲಾಖೆ ತಾತ್ಕಾಲಿಕವಾಗಿ ಅಂಬುಲೆನ್ಸ್ ಸೇವೆ ಒದಗಿಸಿತ್ತು. ಆದರೆ ಆ ಸೇವೆ ಹೆಚ್ಚು ದಿನ ಉಳಿಯಲಿಲ್ಲ, ಕೆಲವೇ ದಿನಗಳಲ್ಲಿ ವಾಹನವನ್ನು ವಾಪಸ್ ಪಡೆಯಲಾಗಿದ್ದು, ಈಗ ಮತ್ತೆ ಆಸ್ಪತ್ರೆ ಅಂಬುಲೆನ್ಸ್ ಇಲ್ಲದೆ ಬರಿದಾಗಿದೆ.

ಬಾಣಂತಿಯರು, ವೃದ್ಧರು, ಅಪಘಾತ ಸಂತ್ರಸ್ತರು ತುರ್ತು ಸಂದರ್ಭದಲ್ಲಿ ಖಾಸಗಿ ವಾಹನಗಳನ್ನೇ ಅವಲಂಬಿಸುವಂತಾಗಿದೆ. ಬಡ ಜನರು ಹೆಚ್ಚಿರುವ ಈ ಭಾಗದಲ್ಲಿ ಹಣ ಕೊಟ್ಟು ಖಾಸಗಿ ಅಂಬುಲೆನ್ಸ್ ಮಾಡಲು ಸಾಧ್ಯವಾಗುತ್ತಿಲ್ಲ. ಆದ್ದರಿಂದ ಜಿಲ್ಲಾಧಿಕಾರಿಗಳು, ಜಿಲ್ಲಾ ಆರೋಗ್ಯಾಧಿಕಾರಿಗಳು ಕೂಡಲೇ ಎಚ್ಚೆತ್ತು, ಹೊಳವನಹಳ್ಳಿ ಪಿಎಚ್‌ಸಿಗೆ ಶಾಶ್ವತವಾಗಿ 108 ಅಂಬುಲೆನ್ಸ್ ಸೇವೆ ಕಲ್ಪಿಸಬೇಕು ಎಂದು ಹೋಬಳಿಯ ಸಾರ್ವಜನಿಕರು ಒತ್ತಾಯಿಸಿದ್ದಾರೆ.



ಮಾನ್ಯ ಉಪಮುಖ್ಯಮಂತ್ರಿ ಡಾ ಜಿ ಪರಮೇಶ್ವರ್ ತಾಲ್ಲೂಕಿನ ಅಭಿವೃದ್ಧಿ ಹಾಗೂ ವಿದ್ಯಾಭ್ಯಾಸದ ಕಡೆ ಹೆಚ್ಚು ಒತ್ತು ನೀಡಿ ಅಭಿವೃದ್ಧಿ ಪಡಿಸುವಲ್ಲಿ ಯಶಸ್ವಿಯಾಗಿದ್ದಾರೆ ಅದರಂತೆ ಹೊಳವನಹಳ್ಳಿ ಆರೋಗ್ಯ ಕೇಂದ್ರದ ಕಡೆ ಗಮನ ಹರಿಸಿ ಹೋಬಳಿ ಜನರ ಆರೋಗ್ಯ ದೃಷ್ಟಿಯಿಂದ ಅಂಬುಲೆನ್ಸ್ ಸೇವೆ ಒದಗಿಸಲಿ....

ನರಸಿಂಹಮೂರ್ತಿ

ಮಾಜಿ ಸೈನಿಕ ಹೊಳವನಹಳ್ಳಿ...

ಸಣ್ ಸುದ್ದಿ

ಸೆ.26ರಂದು ಊರ್ಡಿಗೆರೆ ಗ್ರಾಮದಲ್ಲಿ 'ಪ್ರಜಾ ಸೇವಾ ಆಂದೋಲನ'

ತುಮಕೂರು: ತಾಲ್ಲೂಕಿನ ಊರ್ಡಿಗೆರೆ ಗ್ರಾಮದ ಸೆಂಟ್ರಲ್ ಸ್ಕೂಲ್ ಆವರಣದಲ್ಲಿ ಸೆಪ್ಟೆಂಬರ್ 26ರಂದು ಶನಿವಾರ ಬೆಳಗ್ಗೆ 10 ಗಂಟೆಗೆ ಸಾರ್ವಜನಿಕರ ಕುಂದು-ಕೊರತೆಗಳನ್ನು ಆಲಿಸಿ ಸ್ಥಳದಲ್ಲಿಯೇ ಪರಿಹಾರ ಒದಗಿಸುವ ಉದ್ದೇಶದಿಂದ 'ಪ್ರಜಾ ಸೇವಾ ಆಂದೋಲನ' ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ ಎಂದು ತಹಶೀಲ್ದಾರ್ ರಾಜೇಶ್ವರಿ ತಿಳಿಸಿದ್ದಾರೆ.

ಕಾರ್ಯಕ್ರಮವು ಶಾಸಕ ಬಿ. ಸುರೇಶ್ ಗೌಡ ಅವರ ಅಧ್ಯಕ್ಷತೆಯಲ್ಲಿ ನಡೆಯಲಿದ್ದು, ವಿವಿಧ ಇಲಾಖಾಧಿಕಾರಿಗಳು ಭಾಗವಹಿಸಿ, ಸರ್ಕಾರಿ ಯೋಜನೆ ಹಾಗೂ ಸೌಲಭ್ಯಗಳ ಕುರಿತು ಮಾಹಿತಿ ನೀಡಲಿದ್ದಾರೆ. ಸಾರ್ವಜನಿಕರಿಂದ ಸ್ವೀಕರಿಸುವ ಅಹವಾಲು ಅರ್ಜಿ/ಕುಂದು-ಕೊರತೆಗಳನ್ನು ಖಕಲುಖಖ ಪೋರ್ಟಲ್‌ನಲ್ಲಿ ಸ್ಥಳದಲ್ಲಿಯೇ ನೋಂದಾಯಿಸಿ ಸ್ವೀಕೃತಿ ನೀಡಲಾಗುವುದು. ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಕಾರ್ಯಕ್ರಮದ ಸದುಪಯೋಗ ಪಡೆದುಕೊಳ್ಳುವಂತೆ ಅವರು ಕೋರಿದ್ದಾರೆ.

ದಸರಾ ಉತ್ಸವ :

ಆಹಾರ ಮಳಿಗೆಗಾಗಿ ಅರ್ಜಿ ಆಹ್ವಾನ

ತುಮಕೂರು: ಜಿಲ್ಲಾಡಳಿತದ ವತಿಯಿಂದ ತುಮಕೂರು ದಸರಾ ಉತ್ಸವದ ಪ್ರಯುಕ್ತ ನಗರದ ಸರ್ಕಾರಿ ಜ್ಯೂನಿಯರ್ ಕಾಲೇಜು ಮೈದಾನದಲ್ಲಿ ಅಕ್ಟೋಬರ್ 17 ರಿಂದ 21ರವರೆಗೆ "ಆಹಾರ ಮೇಳ"ವನ್ನು ಆಯೋಜಿಸಲಾಗಿದ್ದು, ಈ ಆಹಾರ ಮೇಳದಲ್ಲಿ ಮಳಿಗೆಯನ್ನು ತೆರೆಯಲಿಚ್ಛಿಸುವವರಿಂದ ಅರ್ಜಿ ಆಹ್ವಾನಿಸಲಾಗಿದೆ. ಆಸಕ್ತರು ಅರ್ಜಿಯನ್ನು ಜಂಟಿ ನಿರ್ದೇಶಕರು ಮತ್ತು ಸದಸ್ಯ ಕಾರ್ಯದರ್ಶಿ, ಆಹಾರ ಮೇಳ ಉಪ ಸಮಿತಿ, ತುಮಕೂರು ದಸರಾ ಮಹೋತ್ಸವ, ಆಹಾರ ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆ ಇವರ ಕಾರ್ಯಾಲಯ, ಕೊ.ಸಂಖ್ಯೆ: 205, 2ನೇ ಮಹಡಿ, ಜಿಲ್ಲಾಧಿಕಾರಿಗಳ ಕಚೇರಿ, ತುಮಕೂರು ಇವರ ಕಚೇರಿಯಲ್ಲಿ ಪಡೆದು ಭರ್ತಿ ಮಾಡಿದ ಅರ್ಜಿಯನ್ನು ಅಕ್ಟೋಬರ್ 5ರೊಳಗೆ ಸಲ್ಲಿಸತಕ್ಕದ್ದು.

ಹೆಚ್ಚಿನ ಮಾಹಿತಿಗಾಗಿ ಇ-ಮೇಲ್ **ddfoodtumkur@gmail.com** ಅಥವಾ **ddfcs.tmkr-ka@nic.in** ಅಥವಾ ದೂ.ವಾ.0816-2278348ನ್ನು ಸಂಪರ್ಕಿಸಬಹುದಾಗಿದೆ ಎಂದು ಪ್ರಕಟಣೆ ತಿಳಿಸಿದೆ.

ಸೂರ್ಯ ಪ್ರಗತಿ ಕನ್ನಡ ದಿನ ಪತ್ರಿಕೆ
ಜಾಹೀರಾತಿಗಾಗಿ ಸಂಪರ್ಕಿಸಿ: 9901010109

ಪಿಎಂ ಕಿಸಾನ್ ಯೋಜನೆಯ ಹಣ ಪಡೆಯಲು ರೈತರು

E-KYC ಮಾಡಿಸುವುದು ಕಡ್ಡಾಯ

ಮಧುಗಿರಿ ..ಪಿಎಂ ಕಿಸಾನ್ ಯೋಜನೆಯ ಹಣ ಪಡೆಯಲು ಅರ್ಹ ರೈತರು ಬಯೋಮೆಟ್ರಿಕ್ ಆಧಾರಿತ ಈ ಕೆ ವೈ ಸಿ ಮಾಡಿಸುವುದು ಕಡ್ಡಾಯವಾಗಿರುತ್ತದೆ ಇಂದು ಕೃಷಿ ಇಲಾಖೆಯ ಸಹಾಯಕ ನಿರ್ದೇಶಕ ಚನ್ನಕೇಶವ ಮೂರ್ತಿದ್ದಾರೆ ಈ ಕೆ ವೈ ಸಿ ಮಾಡಿಸಿಕೊಳ್ಳಲು ಎರಡು ವಿಧಾನದಲ್ಲಿ ಅವಕಾಶ ಇರುತ್ತದೆ ಮೊದಲನೆಯದಾಗಿ ರೈತರು ಬಯೋಮೆಟ್ರಿಕ್ ಈ ಕೆ ವೈ ಸಿ ಮಾಡಿಸಿಕೊಳ್ಳಬಹುದು ಬಯೋಮೆಟ್ರಿಕ್ ಆಧಾರಿತ ಈ ಕೆ ವೈ ಸಿ ಸಾಮಾನ್ಯ ಸೇವಾ ಕೇಂದ್ರ ಕರ್ನಾಟಕ ಗ್ರಾಮ ಒನ್ .ಪಂಚಾಯಿತಿಗಳಲ್ಲಿ ನಿಯೋಜನೆ ಆಗಿರುವ ಕೃಷಿ ಸಖಿಯರು ಹಾಗೂ ಹೋಬಳಿಗಳ ರೈತ ಸಂಪರ್ಕ ಕೇಂದ್ರಗಳಲ್ಲಿ ಮಾಡಿಸಿಕೊಳ್ಳಬಹುದು .ಈ ಕೆ ವೈ ಸಿ ಮಾಡಿಸದ ಫಲಾನುಭವಿಗಳಿಗೆ ಕಂತಿನ ಹಣ ಜಮೆಯಾಗುವಲ್ಲಿ ಅಡೆಚಣೆಯಾಗುವ ಸಾಧ್ಯತೆ ಇದೆ ಪಿ ಎಂ ಕಿಸಾನ್ ಯೋಜನೆಯ 24ನೇ ಕಂತು ಸಪ್ಟಂಬರ್ ನಲ್ಲಿ ಬಿಡುಗಡೆಯಾಗುವ ನಿರೀಕ್ಷೆ ಇದೆ ಎಂದು ತಿಳಿಸಿದ ಅವರು ಎರಡನೆಯದಾಗಿ ರೈತರು ಸ್ವತಃ ಮೊಬೈಲ್ ಮೂಲಕ ಈ ಕೆ ವೈ ಸಿ ಮಾಡಿಸಿಕೊಳ್ಳಬಹುದು ಗೂಗಲ್ ಪ್ಲೇ ಸ್ಟೋರ್‌ನಿಂದ ಪಿಎಂ ಕಿಸಾನ್ ಮೊಬೈಲ್ ಆಪ್ ಡೌನ್ಲೋಡ್ ಮಾಡಿಕೊಂಡು ನೊಂದಾಯಿತ ಮೊಬೈಲ್ ಸಂಖ್ಯೆ ಮೂಲಕ ಲಾಗಿನ್ ಮಾಡಬೇಕು ಬಳಿಕ ಆಧಾರ್ ಸಂಖ್ಯೆ ನಮೂದಿಸಿದರೆ ಈ ಕೆ ವೈ ಸಿ ಪೂರ್ಣಗೊಳ್ಳುತ್ತದೆ ಎಂದು ತಿಳಿಸಿದ್ದಾರೆ.

ಅಡ್ಡಿ, ಅಪಚಾರ ಮಾಡದೆ ಗಣೇಶೋತ್ಸವಕ್ಕೆ ಅವಕಾಶ ನೀಡಿ

ರಾಷ್ಟ್ರೀಯ ಉತ್ಸವವೆಂದು ಘೋಷಿಸಿ ಸರ್ಕಾರವೇ ಆಚರಿಸಲು ಒತ್ತಾಯ

ಸೂರ್ಯಪ್ರಗತಿನ್ಯೂಸ್.ಕಾಂ

ತುಮಕೂರು: ದೇಶದ ಸ್ವಾತಂತ್ರ್ಯ ಹೋರಾಟಕ್ಕೆ ಕಿಚ್ಚು ಹಚ್ಚಿ ಸ್ವಾತಂತ್ರ್ಯ ದೊರೆಯಲು ಕಾರಣವಾದ ಗಣೇಶ ಉತ್ಸವಕ್ಕೆ ಈಗಿನ ಸರ್ಕಾರ ಹಾಗೂ ಇಲಾಖೆಗಳು ಅಡ್ಡಿಪಡಿಸದೆ, ಅಪಚಾರ ಮಾಡದೆ, ಅಪಪ್ರಚಾರ ಮಾಡದೆ ಸಂಭ್ರಮದಿಂದ ಆಚರಿಲು ಅವಕಾಶ ಮಾಡಿಕೊಡಬೇಕು ಎಂದು ರಾಷ್ಟ್ರೀಯ ಮಾನವ ಪರಿಸರ ಸಂರಕ್ಷಣಾ ಪಡೆ ಅಧ್ಯಕ್ಷ ಜಿ.ಎಸ್. ಬಸವರಾಜು ಒತ್ತಾಯಿಸಿದ್ದಾರೆ.

ಪ್ರತಿ ವರ್ಷ ಬರುವ ಗಣೇಶೋತ್ಸವಗಳಿಗೆ ಸಂಬಂಧಿಸಿದಂತೆ ಬಹು ಸಂಖ್ಯಾತ ಹಿಂದೂ ಸಮಾಜ ಅತ್ಯಂತ ಶ್ರದ್ಧೆ, ಭಕ್ತಿ ಹಾಗೂ ಸಂಭ್ರಮ, ಸಡಗರದಿಂದ ಆಚರಿಸಲು ಸಿದ್ಧವಾಗುತ್ತವೆ. ಈ ಸಂದರ್ಭದಲ್ಲಿ ಶಾಸಕಾಂಗ, ಕಾರ್ಯಾಂಗ, ನ್ಯಾಯಾಂಗಗಳಲ್ಲಿ ಸಂಚಲನ ಉಂಟಾಗಿ, ವರ್ಷದಲ್ಲಿ ಒಂದು ಬಾರಿ ಗಣೇಶನ ಹಬ್ಬ, ಉತ್ಸವ, ಮೆರವಣಿಗೆ ಆಚರಿಸಲು ಇನ್ನಿಲ್ಲದಷ್ಟು ಷರತ್ತು, ನಿರ್ಬಂಧ, ನಿಬಂಧನೆ, ಆದೇಶಗಳು ಪ್ರಕಟವಾಗುತ್ತವೆ. ಬಾಬಾ ಸಾಹೇಬರು ಕೊಟ್ಟಿರುವ ಸಂವಿಧಾನದ ಆಶಯದಂತೆ, ಈ ದೇಶದ ಪ್ರತಿಯೊಬ್ಬ ಪ್ರಜೆಯೂ ಅವರವರ ನಂಬಿಕೆಗಳಿಗೆ ಅನುಗುಣವಾಗಿ, ಧಾರ್ಮಿಕ ಆಚರಣೆಗಳನ್ನು ನಡೆಸುವುದು, ಬದುಕುವುದು ಅವರ ಮೂಲಭೂತ ಹಕ್ಕಾಗಿರುತ್ತದೆ ಎಂದು ಹೇಳಿದ್ದಾರೆ.

ಆದರೆ, ಸಂವಿಧಾನದ ಮೂಲ ಆಶಯುಗಳಿಗೆ ವಿರುದ್ಧವಾಗಿ ಮುಸ್ಲಿಮೇತರ ಧಾರ್ಮಿಕ ನಂಬಿಕೆಗಳನ್ನು ಹತ್ತಿಕುವಂತೆ ಹಾಗೂ ಸರ್ವೋಚ್ಚ ನ್ಯಾಯಾಲಯದ ಆದೇಶವನ್ನು ಧಿಕ್ಕರಿಸಿ ಮುಸಲ್ಮಾನರು ಮೈಕ್ ಬಳಸಿ ಪ್ರತಿ ದಿನ ಆಜಾನ್ ಕೂಗುತ್ತಿರುವುದು, ಮೂಲ ಸಂವಿಧಾನ ಹಾಗೂ ತುರ್ತು ಪರಿಸ್ಥಿತಿಯ ಸಂದರ್ಭದಲ್ಲಿ ಅಸಂವಿಧಾನಿಕವಾಗಿ ಸೃಷ್ಟಿಯಾದ ಜಾತ್ಯತೀತ ಸಂವಿಧಾನಕ್ಕೆ ವಿರುದ್ಧವಾದ ಪ್ರಕ್ರಿಯೆ. ಮುಸ್ಲಿಮೇತರರ ಧಾರ್ಮಿಕ ನಂಬಿಕೆಯ ಹರಣವಾಗಿರುತ್ತದೆ. ಇಂತಹ ಕಾನೂನು ಬಾಹಿರ ಕೃತ್ಯದ ವಿರುದ್ಧ ಕಾನೂನು ಕ್ರಮ ಜರುಗಿಸುವುದರ ಮೂಲಕ, ಮುಸ್ಲಿಮೇತರದ ಧಾರ್ಮಿಕ ನಂಬಿಕೆಯ ಮೇಲೆ ಆಗುತ್ತಿರುವ ಗದಾ ಪ್ರಹಾರವನ್ನು ತಪ್ಪಿಸಿ ನೈಜ ಜಾತ್ಯತೀತತೆಯನ್ನು ಶಾಸಕಾಂಗ, ಕಾರ್ಯಾಂಗ, ನ್ಯಾಯಾಂಗ ಎತ್ತಿ ಹಿಡಿಯಬೇಕಾಗಿದೆ. ಈ ಗಂಭೀರ ಸಮಸ್ಯೆಗೆ ಸಂಬಂಧಿಸಿದಂತೆ, ಶಾಸಕಾಂಗ, ನ್ಯಾಯಾಂಗ, ಕಾರ್ಯಾಂಗ ಮುಖ್ಯಸ್ಥರ ಸಮಕ್ಷಮ ತುರ್ತಾಗಿ ಬಹಿರಂಗಚರ್ಚೆ ಅತ್ಯವಶ್ಯಕ ಎಂದು ತಿಳಿಸಿದ್ದಾರೆ.

ಆದರೆ ಹಿಂದೂಗಳ ಪ್ರಮುಖ ಆಚರಣೆಯಾದ ಗಣೇಶನ ಉತ್ಸವಕ್ಕೆ ಅನಾವಶ್ಯಕವಾಗಿ ಅಡ್ಡಿಪಡಿಸುವುದು ಸ್ವತಂತ್ರ ಭಾರತಕ್ಕೆ ಮಾಡಿದಂತಹ ಅಪಮಾನ ಹಾಗೂ ಅಪಚಾರ. ಇಂಥ ಕೃತ್ಯಗಳನ್ನು ತಡೆಯಲು ಕೇಂದ್ರ ಸರ್ಕಾರ ಶೀಘ್ರ ಗಮನಹರಿಸಿ, ಗಣೇಶ ಉತ್ಸವವನ್ನು ರಾಷ್ಟ್ರೀಯ ಉತ್ಸವವನ್ನಾಗಿ ಘೋಷಣೆ ಮಾಡಿ ಮುಂದಿನ ದಿನಗಳಲ್ಲಿ ಸರ್ಕಾರವೇ ಮುಂದೆ ನಿಂತು ಗಣೇಶೋತ್ಸವವನ್ನು ಶ್ರದ್ಧೆ, ಭಕ್ತಿ, ಸಂಭ್ರಮದಿಂದ ಆಚರಿಸುವ ರಾಷ್ಟ್ರೀಯತೆಯನ್ನು ದೇಶದ ನಾಗರೀಕರಲ್ಲಿ ಜಾಗೃತ ಗೊಳಿಸಬೇಕು ಎಂದು ಜಿ.ಎಸ್. ಬಸವರಾಜು ಒತ್ತಾಯಿಸಿದ್ದಾರೆ.

ಗೃಹಲಕ್ಷ್ಮಿ, ಯುವನಿಧಿ ಉಪಯುಕ್ತ ಯೋಜನೆಗಳು

ಸೂರ್ಯಪ್ರಗತಿನ್ಯೂಸ್.ಕಾಂ

ಮೂರು ವರ್ಷಗಳ ಹಿಂದೆ ರಾಜ್ಯ ಸರ್ಕಾರ ಜಾರಿಗೆ ತಂದ ಗೃಹಲಕ್ಷ್ಮಿ ಯುವನಿಧಿ ಯೋಜನೆಗಳು ಮಹಿಳೆಯರಿಗೆ ಹಾಗೂ ಯುವ ಜನತೆಗೆ ಅತ್ಯಂತ ಉಪಯುಕ್ತವಾದ ಯೋಜನೆಗಳಾಗಿವೆ ಎಂದು ಮಾಜಿ ಅಡ್ವೋಕೇಟ್ ಜನರಲ್ ಪ್ರೊ.ರವಿವರ್ಮ ಕುಮಾರ್ ತಿಳಿಸಿದರು.

ತುಮಕೂರು ನಗರದ ಹೋಟೆಲ್‌ವೊಂದರ ಸಭಾಂಗಣದಲ್ಲಿ ಮಾನವ ಮಂಟಪ ಸಹಕಾರ ಸಂಘ ನಿಯಮಿತದ 8ನೇ ವಾರ್ಷಿಕ ಸರ್ವ ಸದಸ್ಯರ ಮಹಾ ಸಭೆಯಲ್ಲಿ ಭಾಗವಹಿಸಿ ಅವರು ಮಾತನಾಡಿ, ಜಾತ್ಯತೀತತೆಗಾಗಿ ಸಂಘವು ಕೈಗೊಂಡಿರುವ ಕಾರ್ಯ ಶ್ಲಾಘನೀಯ ಎಂದರು.

ಮಹಿ ಳೆಯರಿಗೆ ಸಿಗುತ್ತಿರುವ ಗೃಹಲಕ್ಷ್ಮೀ ಯೋ ೀಜನೆಯ ಮಾಸಿಕ 2000 ರೂ.ಗಳು ಮತ್ತು ಯುವ ಜನತೆಗೆ ಸಿಗುತ್ತಿರುವ ಯುವ ನಿಧಿ ಯೋಜನೆಯ ಮಾಸಿಕ 3000 ರೂ.ಗಳು ಅವರಿಗೆ ಅತ್ಯಂತ ಉಪಯುಕ್ತವಾಗಿದೆ. ಲೋಹಿಯಾ ಸಂಘಕ್ಕೆ ಇತ್ತೀಚೆಗೆ 300 ಮಂದಿ ಯುವನಿಧಿಯನ್ನು ಠೇವಣಿ ಮಾಡುತ್ತಿದ್ದಾರೆ. ಮಾನವ ಮಂಟಪ ಸಹಕಾರ ಸಂಘವೂ ಕೂಡ ಗೃಹಲಕ್ಷ್ಮಿ ಮತ್ತು ಯುವನಿಧಿಯನ್ನು ತಮ್ಮ ಸಂಘದ ಮೂಲಕ ತೆಗೆದುಕೊಳ್ಳುವಂತೆ ಮಾಡಿದರೆ ಸಂಘಕ್ಕೆ ಅನುಕೂಲವಾಗಲಿದೆ. ಠೇವಣಿಯಾಗಿಸಿದರೆ ಅವರಿಗೂ ಅನುಕೂಲ, ಸಂಘಕ್ಕೂ ಅನುಕೂಲವಾಗುತ್ತದೆ. ಇದನ್ನು ಆಡಳಿತ ಮಂಡಳಿ ಕಾರ್ಯರೂಪಕ್ಕೆ ತರಬೇಕು ಎಂದು ಹೇಳಿದರು.

ಚಿಂತಕ ದೊರೈರಾಜ್ ಮಾತನಾಡಿ, ಕಾರ್ಮಿಕರ ಸಂಘ, ಸ್ಲಂ ಸಂಘ ಮತ್ತು ಮಾನವ ಮಂಟಪ ಸಹಕಾರ ಸಂಘ ಇವುಗಳ ಮಾರ್ಗ ಸ್ಪಷ್ಟವಾಗಿದೆ. ಆದರೆ ಇಲ್ಲಿ ಆದರ್ಶ ಮುನ್ನೆಲೆಗೆ ಬಂದು ವಾಸ್ತವ ಮರೆಯುವಂತಾಗಬಾರದು. ಏಕೆಂದರೆ ಆರ್ಥಿಕ ಸಬಲತೆ ಇಲ್ಲದೆ ಏನನ್ನೂ ಸಾಧಿಸಲಾಗದು. ಸಂಘದ ಮುನ್ನಡೆಗೆ ಆರ್ಥಿಕ ಸಬಲತೆ ಮುಖ್ಯವಾದುದು ಎಂದು ಹೇಳಿದರು.

ಮಹಾಸಭೆಯ ಅಧ್ಯಕ್ಷತೆ ವಹಿಸಿ ದ್ದ ಸಂಘದ ಅಧ್ಯಕ್ಷ ಡಾ.ಬಾಲಕೃಷ್ಣಪ್ಪ ಮಾತನಾಡಿ, ಈ ಸಾಲಿನಲ್ಲಿ ಸಂಘ 'ವನ್ನು ಲಾಭ ನಷ್ಟಗಳ ನಡುವೆ ತಂದು ನಿಲ್ಲಿಸಿ ದ್ದೇವೆ. ಮುಂದಿನ ಸಾಲಿಗ ' ಖಂಡಿತ ಲಾಭದತ್ತ ಸಂಘವನ್ನು ಕೊಂಡೊಯ್ಯುತ್ತೇವೆ. ಈ ಬಾರಿ ಪ್ರಪ್ರಥಮವಾಗಿ ಷೇರುದಾರರ ಮಕ್ಕಳಿಗೆ ಪ್ರತಿಭಾ ಪುರಸ್ಕಾರ ಕೈಗೊಂಡಿರುವುದು ನಮ್ಮ ಸಂಘದ ಹೆಗ್ಗಳಿಕೆ ಎಂದರು. ಇದೇ ಸಂದರ್ಭದಲ್ಲಿ ಅಧ್ಯಕ್ಷರು 20 ಸಾವಿರ ರೂ.ಗಳಿದ್ದ ಜಂಟಿ ಸಾಲದ ಮೊತ್ತವನ್ನು ಗರಿಷ್ಠ 50 ಸಾವಿರ ರೂ.ಗಳಿಗೆ ಹೆಚ್ಚಿಸಿ ಸಭೆಯ ಅನುಮೋದನೆ ಪಡೆದರು.

ಸಂಘದ ಉಪಾಧ್ಯಕ್ಷೆ ಕುಮಾರಿ, ಜಿ. ಮಲ್ಲಿಕಾ, ನಿರ್ದೇಶಕರುಗಳಾದ ಮಹಾಲಿಂಗಪ್ಪ, ಚಂದ್ರಕುಮಾರ್, ಪ್ರದೀಪ್, ವಿರೂಪಾಕ್ಷ ಡ್ಯಾಗೇರಹಳ್ಳಿ ಇದ್ದರು.

ಜಿಲ್ಲಾದ್ಯಂತ ಅಕ್ಟೋಬರ್ 2ರವರೆಗೆ ಸ್ವಚ್ಛತಾ ಹೀ ಸೇವಾ ಅಭಿಯಾನ

ಸೂರ್ಯಪ್ರಗತಿನ್ಯೂಸ್.ಕಾಂ

ತುಮಕೂರು: ಗ್ರಾಮೀಣ ನೈರ್ಮಲ್ಯ ಸುಧಾರಣೆ ಹಾಗೂ ಸಾರ್ವಜನಿಕರಲ್ಲಿ ಸ್ವಚ್ಛತೆ ಕುರಿತು ಜಾಗೃತಿ ಮೂಡಿಸುವ ಉದ್ದೇಶದಿಂದ ಜಿಲ್ಲಾ ಪಂಚಾಯತಿ ವತಿಯಿಂದ ಅಕ್ಟೋಬರ್ 2ರವರೆಗೆ ಜಿಲ್ಲಾದ್ಯಂತ ಸ್ವಚ್ಛತಾ ಹೀ ಸೇವಾ ಅಭಿಯಾನವನ್ನು ಹಮ್ಮಿಕೊಳ್ಳಲಾಗಿದೆ ಎಂದು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಬಿ.ವಿ. ಅಶ್ವಿಜ ತಿಳಿಸಿದ್ದಾರೆ.

ಅಭಿಯಾನದಡಿ ಜಿಲ್ಲಾದ್ಯಂತ ಈಗಾಗಲೇ ಸಾರ್ವಜನಿಕ ಸ್ಥಳಗಳನ್ನು ಸ್ವಚ್ಛಗೊಳಿಸಲಾಗುತ್ತಿದೆ. ಜಿಲ್ಲೆಯ ಎಲ್ಲಾ ಗ್ರಾಮ ಪಂಚಾಯತಿಗಳಲ್ಲಿ "ಸ್ವಚ್ಛತೆಯಲ್ಲಿ ಸಹಭಾಗಿತ್ವ-ಸ್ವಚ್ಛ ಭಾರತ ವಿಕಸಿತ ಭಾರ'ತ" ಎಂಬ ಘೋಷ ವಾಕ್ಯದೊಂದಿಗೆ ವಿವಿಧ ' ಸ್ವಚ್ಛತಾ ಚಟುವಟಿಕೆಗಳನ್ನು ಹಮ್ಮಿಕೊಳ್ಳಲಾಗುವುದು. ಗುರುತಿಸಲಾದ ಕಲುಷಿತ ಹಾಗೂ ತ್ಯಾಜ್ಯ ಸಂಗ್ರಹವಾಗಿರುವ ಸಾರ್ವಜನಿಕ ಸ್ಥಳವನ್ನು ಸಾಮೂಹಿಕ ಶ್ರಮದಾನದ ಮೂಲಕ ಸ್ವಚ್ಛಗೊಳಿಸಲಾಗುವುದು. ಶಾಲೆ ಮತ್ತು ಕಾಲೇಜು ವಿದ್ಯಾರ್ಥಿಗಳಿಗಾಗಿ ಸ್ವಚ್ಛತೆ ಕುರಿತು ಜಾಗೃತಿ ಜಾಥಾ, ರಸಪ್ರಶ್ನೆ, ಚಿತ್ರಕಲೆ, ಪ್ರಬಂಧ ಹಾಗೂ ಭಾಷಣ ಸ್ಪರ್ಧೆಗಳನ್ನು ಆಯೋಜಿಸಿ ಶಾಲೆಗಳಲ್ಲಿ ಇಕೋ ಕ್ಲಬ್‌ಗಳ ಸಹಯೋಗದೊಂದಿಗೆ ಪರಿಸರ ಮತ್ತು ಜಲಸಂರಕ್ಷಣೆಗೆ ಸಂಬಂಧಿಸಿದ ಕಾರ್ಯಕ್ರಮಗಳನ್ನು ನಡೆಸಲಾಗುವುದು.

ಪೌರಕಾರ್ಮಿಕರು ಹಾಗೂ ಸ್ವಚ್ಛತಾ ಕಾರ್ಯಕರ್ತರಿಗೆ ಆರೋಗ್ಯ ತಪಾಸಣೆ ಹಾಗೂ ಸುರಕ್ಷತಾ ಸಾಧನಗಳ ಬಳಕೆ ಕುರಿತು ಜಾಗೃತಿ ಮೂಡಿಸಲಾಗುವುದು. ಗ್ರಾಮೀಣ ಪ್ರದೇಶಗಳಲ್ಲಿ ವೈಜ್ಞಾನಿಕ ತ್ಯಾಜ್ಯ ನಿರ್ವಹಣೆ, ಮನೆ ಮಟ್ಟದಲ್ಲಿಯೇ ಹಸಿ ಮತ್ತು ಒಣಕಸ ವಿಂಗಡಣೆ ಹಾಗೂ ಕಸವನ್ನು ಎಲ್ಲೆಂದರಲ್ಲಿ ಎಸೆಯದಂತೆ ಸಾರ್ವಜನಿಕರಲ್ಲಿ ಅರಿವು ಮೂಡಿಸಲಾಗುವುದು.

ಗ್ರಾಮೀಣ ಕ್ರೀಡೆ ಮತ್ತು ಹಬ್ಬಗಳನ್ನು ಪ್ಲಾಸ್ಟಿಕ್ ಹಾಗೂ ತ್ಯಾಜ್ಯ ಮುಕ್ತವಾಗಿ ಆಚರಿಸಲು ಉತ್ತೇಜನ ನೀಡಲಾಗುವುದು. ಪ್ರತಿಯೊಬ್ಬರೂ ತಮ್ಮ ತಾಯಿ ಹೆಸರಿನಲ್ಲಿ ಕನಿಷ್ಠ 1 ಸಸಿ ನೆಟ್ಟು ಪೋಷಿಸುವಂತೆ ಪ್ರೇರೇಪಿಸಲಾಗುವುದು. ವಿಶ್ವ ಪ್ರವಾಸೋದ್ಯಮ ದಿನದ ಅಂಗವಾಗಿ ಸೆಪ್ಟೆಂಬರ್ 27ರಂದು ಜಿಲ್ಲೆಯ ಪ್ರಮುಖ ಪ್ರವಾಸಿ ತಾಣ ಮತ್ತು ಧಾರ್ಮಿಕ ಸ್ಥಳಗಳಲ್ಲಿ ವಿಶೇಷ ಸ್ವಚ್ಛತಾ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುವುದಲ್ಲದೆ, ಅಕ್ಟೋಬರ್ 1ರಂದು "ಒಂದು ದಿನ, ಒಂದು ಗಂಟೆ, ಒಟ್ಟಿಗೆ" ಎಂಬ ಘೋಷ ವಾಕ್ಯದಲ್ಲಿ ಸಾಮೂಹಿಕ ಸ್ವಚ್ಛತಾ ಶ್ರಮದಾನವನ್ನು ಆಯೋಜಿಸಲಾಗುವುದು ಹಾಗೂ ಅಕ್ಟೋಬರ್ 2ರಂದು ಗಾಂಧೀ ಜಯಂತಿ ಪ್ರಯುಕ್ತ ಜಿಲ್ಲೆಯ ಎಲ್ಲಾ ಗ್ರಾಮ ಪಂಚಾಯತಿಗಳಲ್ಲಿ ಸ್ವಚ್ಛ ಭಾರತ ದಿನಾಚರಣೆ ಹಾಗೂ ವಿಶೇಷ ಗ್ರಾಮ ಸಭೆಗಳನ್ನು ನಡೆಸಲಾಗುವುದು.

ಈ ಅಭಿಯಾನದಲ್ಲಿ ಜಿಲ್ಲೆಯ ಜನಪ್ರತಿನಿಧಿಗಳು, ಯುವ ಜನರು, ಮಹಿಳೆಯರು, ಶಾಲಾ-ಕಾಲೇಜು ವಿದ್ಯಾರ್ಥಿಗಳು, ಸ್ವಯಂ ಸೇವಾ ಸಂಸ್ಥೆ, ಸಾರ್ವಜನಿಕರು ಹಾಗೂ ವಿವಿಧ ಸಂಘ ಸಂಸ್ಥೆಗಳು ಸಕ್ರಿಯವಾಗಿ ಪಾಲ್ಗೊಂಡು ಗ್ರಾಮಗಳನ್ನು ಸ್ವಚ್ಛ ಹಾಗೂ ಸುಂದರವಾಗಿಸುವ ಕಾರ್ಯಕ್ಕೆ ಕೈಜೋಡಿಸಬೇಕು ಎಂದು ಅವರು ಮನವಿ ಮಾಡಿದ್ದಾರೆ.

ಜೀವನದಲ್ಲಿ ಅತ್ಯಂತ ಕಷ್ಟಕರವಾದುದು ಯಾವುದು?

ಅಸತ್‌ನ ಜೊತೆಗಿನ ಸಹಪ್ರಯಾಣ
ತಮಸ್ಸಿನ ಜೊತೆಗಿನ ಸಹಪ್ರಯಾಣ
ಮೃತ್ಯುವಿನ ಜೊತೆಗಿನ ಸಹಪಯಣ
ಡಾ. ಶಿವಾನಂದ ಶ್ರೀ ಶ್ರೀ

ಸೂರ್ಯಪ್ರಗತಿನ್ಯೂಸ್.ಕಾಂ

ಅಜ್ಞಾನ, ಅನಕ್ಷರತೆ, ಬಡತನ, ಅನಾರೋಗ್ಯ,
ಉಪೇಕ್ಷೆ, ಉಪಟಳ, ಉಪದ್ರವ,
ಆಲಸ್ಯ, ಅನಾಸಕ್ತಿ ಇವೆಲ್ಲ ಆಮೇಲೆ....!!
ನಿಜಕ್ಕೂ ಹೇಳಬೇಕೆಂದರೆ,
ಜೀವನದಲ್ಲಿ ಅತ್ಯಂತ ಕಷ್ಟಕರವಾದುದು –
ಅಸತ್‌ನ ಜೊತೆಗಿನ ಸಹಪ್ರಯಾಣ
ತಮಸ್ಸಿನ ಜೊತೆಗಿನ ಸಹಪ್ರಯಾಣ
ಮೃತ್ಯುವಿನ ಜೊತೆಗಿನ ಸಹಪಯಣ.....
ಇದೆಲ್ಲ ತುಂಬಾ ತುಂಬಾನೇ ಕಷ್ಟಕರ.
ಆದ್ದರಿಂದಲೇ ನಮ್ಮ ಋಷಿಮುನಿಗಳು
"ಅಸತೋ ಮಾ ಸದ್ಗಮಯ
ತಮಸೋ ಮಾ ಜ್ಯೋತಿರ್ಗಮಯ
ಮೃತ್ಯೋರ್ಮಾ ಅಮೃತಂ ಗಮಯ" –
ಎಂದು ಪ್ರಾರ್ಥಿಸಿಕೊಂಡಿದ್ದು!!
"ಅಸತ್‌ನ ಜೊತೆ ಜೊತೆಯಲ್ಲಿ
ಹೆಜ್ಜೆ ಹಾಕಿಕೊಂಡಿರೋದಕ್ಕೆ,
ನಡೆದುಕೊಂಡಿರೋದಕ್ಕೆ ನನಗೆ ಆಗಲ್ಲ.
ನನ್ನನ್ನು ಸತ್‌ನತ್ತ (ಶಾಶ್ವತದತ್ತ)
ಕರೆದುಕೊಂಡು ಹೋಗು.
ತಮಸ್ಸು, ತಮಂಧಘನದ ಜೊತೆಯಲ್ಲಿ
ತಟ್ಟಾಡಿಕೊಂಡು ನಡೆದುಕೊಂಡಿರೋದಕ್ಕೆ
ನನಗೆ ಆಗ್ತಾ ಇಲ್ಲ.
ನನ್ನನ್ನು ಜ್ಯೋತಿಯತ್ತ,
ಬೆಳಕಿನತ್ತ ಕರೆದುಕೊಂಡು ಹೋಗು.
ಮೃತ್ಯುವಿನ ಜೊತೆಯಲ್ಲಿ ಏಗಿಕೊಂಡು,
ನೀಗಿಕೊಂಡು, ಯಾವಾಗಲೂ
ಭಯದ ನೆರಳಲ್ಲಿ ಉಸಿರು ಬಿಗಿಹಿಡಿದುಕೊಂಡು
ಬದುಕಿಕೊಂಡಿರೋದಕ್ಕೆ ನನಗೆ ಆಗ್ತಾ ಇಲ್ಲ.
ನನ್ನನ್ನು ಅಮೃತದತ್ತ,
ಅಮರತ್ವದತ್ತ ಕರೆದುಕೊಂಡು ಹೋಗು" ಎಂದು.
ಶಾಲಾದಿನಗಳಲ್ಲಿ ಸ್ನೇಹಿತರು,
ದಾಂಪತ್ಯದಲ್ಲಿ ಸಂಗಾತಿ,
ಬದುಕಿನಲ್ಲಿ ಸಹಪ್ರಯಾಣಿಕರು,
ಉದ್ಯೋಗ, ವ್ಯಾಪಾರ, ವಹಿವಾಟುಗಳಲ್ಲಿ
ಸಹೋದ್ಯೋಗಿ, ಸಹವರ್ತಕರುಗಳು
ಸಾಮಾಜಿಕ, ಸಾಂಸ್ಕೃತಿಕ ಬದುಕಿನಲ್ಲಿ ಸಹಚರರು
ಧಾರ್ಮಿಕ, ಆಧ್ಯಾತ್ಮಿಕ ಬದುಕಲ್ಲಿ ಅನುಚರರು
ಚೆನ್ನಾಗಿದ್ದರೆ ಜೀವನ ಖುಷಿ ಖುಷಿಯಾಗಿರುತ್ತದೆ;
ಜೀವನವದು "ವಂದೇ ಭಾರತಮ್" ಟ್ರೇನ್‌ನಂತಿರುತ್ತದೆ.

ಡಾ. ಶಿವಾನಂದ ಶಿವಾಚಾರ್ಯ
ಸುಕ್ಷೇತ್ರ ಹಿರೇಮಠ, ತಪೋವನ, ತುಮಕೂರು

ಯುವಕರು ಸದಾ ಕ್ರೀಡೆ ಮನರಂಜನೆಯಲ್ಲಿ ತೊಡಗಿ

600 ವಿದ್ಯಾರ್ಥಿಗಳು ವಿವಿಧ ಕ್ರೀಡೆಲ್ಲಿ ಭಾಗಮಹಿಸಿದ್ದೀರಾ ಈ ಕ್ರೀಡೆಯಲ್ಲಿ ವಿದ್ಯಾರ್ಥಿಗಳು ಸೋಲು ಗೆಲುವು ಎನ್ನದೆ ದೃಢ ಸಂಕಲ್ಪದಿಂದ ಶರೀರ ಆರೋಗ್ಯ ಕ್ರೀಡಾ ಚಟುವಟಿಕೆಯಿಂದ ದೈಹಿಕ ಮಾನಸಿಕವಾಗಿ ಉತ್ತಮವಾಗಿರುತ್ತದೆ ಯುವಕರು ಸದಾ ಕ್ರೀಡೆ ಮನರಂಜನೆ ಸಾಂಸ್ಕೃತಿಕ ಚಟುವಟಿಕೆಯಲ್ಲಿ ತೊಡಗಿ ಕೊಳ್ಳುವುದರಿಂದ ತಮ್ಮ ಸುಪ್ತ ಚೇತನದಲ್ಲಿ ಅಡಗಿರುವ ಪ್ರತಿಭೆ ಕಾರಂಜಿಯಂತೆ, ತಾಲೂಕಿನಲ್ಲಿ 26 ಸಾವಿರ ಮಕ್ಕಳು ವ್ಯಾಸಂಗ ಮಾಡುತ್ತಿದ್ದು ಇವರಲ್ಲಿ 600 ಮಕ್ಕಳು ಈಗಾಗಲೇ ತಾಲೂಕು ಮಟ್ಟಕ್ಕೆ ಕ್ರೀಡೆಯಲ್ಲಿ ಸಾಧನೆಗೈದು ಆಯ್ಕೆಗೊಂಡಿರುವದೇ ಸಾರ್ಥಕ ಹಾಗೂ ಸ್ಪೂರ್ತಿದಾಯಕವಾಗಿದೆ ಸೋಲು ಗೆಲುವನ್ನು ಸಮಾನವಾಗಿ ಸ್ವೀಕರಿಸಬೇಕೆಂದು ಕಿವಿಮಾತು ಹೇಳಿದರು.

ದೈಹಿಕ ಶಿಕ್ಷಣಾಧಿಕಾರಿ ಮಂಗಳ ಗೌರಿ ಪ್ರಾಸ್ತಾವಿಕ ನುಡಿಗಳನ್ನಾಡಿದರು.

ಬಿ .ಆರ್ .ಸಿ. ಶ್ರೀನಿವಾಸಮೂರ್ತಿ. ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಅಧ್ಯಕ್ಷ ಸಿ. ಶ್ರೀನಿವಾಸ್. ಪ್ರೌಢಶಾಲಾ ಶಿಕ್ಷಕರ ಸಂಘದ ಅಧ್ಯಕ್ಷ ರಮೇಶ್. ಪ್ರಧಾನ ಕಾರ್ಯದರ್ಶಿ ನರಸಿಂಹಮೂರ್ತಿ. ದೈಹಿಕ ಶಿಕ್ಷಕರ ಸಂಘದ ಅಧ್ಯಕ್ಷ ವಿರೇಂದ್ರಕುಮಾರ್. ಗಂಗಾಧರ್, ಶಿಕ್ಷಕ ಪ್ರಮುಖರಾದ, ಗೋವಿಂದರಾಜ್, ನಟರಾಜ್ , ನಂದಿನಿ. ನಿವೃತ್ತ ಜಿಲ್ಲಾ ದೈಹಿಕ ಶಿಕ್ಷಣಾಧಿಕಾರಿ ಗೋಪಾಲಕೃಷ್ಣ ಸೇರಿದಂತೆ ಹಲವರು ಉಪಸ್ಥಿತರಿದ್ದರು.

ಸೂರ್ಯಪ್ರಗತಿನ್ಯೂಸ್.ಕಾಂ

ವಿಬಿಜಿರಾಮ್‌ಜಿ ಯೋಜನೆ ಗ್ರಾಮೀಣ ಕುಟುಂಬಗಳಿಗೆ ಆಸರೆ

ಸೂರ್ಯಪ್ರಗತಿನ್ಯೂಸ್.ಕಾಂ

ತುಮಕೂರು: ವಿಬಿ ಜಿ ರಾಮ್ ಜಿ ಯೋಜನೆಯು ಗ್ರಾಮೀಣ ಕುಟುಂಬಗಳಿಗೆ ಆಸರೆಯಾಗಿದೆ ಎಂದು ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಶಂಕರ್ ಎಸ್. ಅವರು ತಿಳಿಸಿದರು.

ತಾಲ್ಲೂಕಿನ ಹರಳೂರು ಗ್ರಾಮ ಪಂಚಾಯಿತಿ ವ್ಯಾಪ್ತಿಯ ಹರಳೂರು, ಬೈರಸಂದ್ರ ಹಾಗೂ ಕೌತಮರನಹಳ್ಳಿ ಗ್ರಾಮಗಳಲ್ಲಿ ವಿಬಿ ಜಿ ರಾಮ್ ಜಿ ಯೋಜನೆಯ ಮಾಹಿತಿ, ಶಿಕ್ಷಣ ಮತ್ತು ಸಂವಹನ (IEC) ಚಟುವಟಿಕೆಗಳ ಅಂಗವಾಗಿ ಹಮ್ಮಿಕೊಂಡಿದ್ದ ಮಾಹಿತಿ ಮತ್ತು ಪ್ರಚಾರ, ಮನೆ-ಮನೆಗೆ ಭೇಟಿ ಹಾಗೂ ಕೂಲಿ ಆಧಾರಿತ ಕಾಮಗಾರಿಗಳ ಕುರಿತು ಜಾಗೃತಿ ಅಭಿಯಾನಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ಅಭಿಯಾನದ ಸಂದರ್ಭದಲ್ಲಿ ಪಿಡಿಓ ರವರು ಗ್ರಾಮಸ್ಥರಿಗೆ ವಿಬಿ ಜಿ ರಾಮ್ ಜಿ ಯೋಜನೆಯಡಿ ಗ್ರಾಮೀಣ ಕುಟುಂಬಗಳಿಗೆ ದೊರೆಯುವ ಉದ್ಯೋಗಾವಕಾಶಗಳು ಹಾಗೂ ಕೂಲಿ ಆದಾಯದ ಮಹತ್ವವನ್ನು ವಿವರಿಸಿ, ಗ್ರಾಮದಲ್ಲಿಯೇ ಉದ್ಯೋಗ ದೊರೆಯುವುದರಿಂದ ಕೂಲಿ ಕಾರ್ಮಿಕರು ದೂರದ ಪ್ರದೇಶಗಳಿಗೆ ವಲಸೆ ಹೋಗುವುದನ್ನು ತಪ್ಪಿಸಿ, ತಮ್ಮ ಕುಟುಂಬದೊಂದಿಗೆ ಇದ್ದು ಕೊಂಡೇ ಆದಾಯ ಗಳಿಸಲು ಸಾಧ್ಯವಾಗುತ್ತದೆ ಎಂಬುದನ್ನು ತಿಳಿಸಿದರು.

ಯೋಜನೆಯಡಿ ಕೈಗೊಳ್ಳುವ ಕೂಲಿ ಆಧಾರಿತ ಕಾಮಗಾರಿಗಳಲ್ಲಿ ಭಾಗವಹಿಸುವ ಮೂಲಕ ಫಲಾನುಭವಿಗಳು ಪ್ರತಿ ದಿನ 382 ರೂ. ಕೂಲಿ ಪಡೆದು ಕುಟುಂಬದ ದೈನಂದಿನ ಅಗತ್ಯಗಳನ್ನು ಪೂರೈಸಿಕೊಳ್ಳಲು, ಮಕ್ಕಳ ಶಿಕ್ಷಣ, ಆರೋಗ್ಯ ಹಾಗೂ ಇತರೆ ಕುಟುಂಬದ ಖರ್ಚುಗಳನ್ನು ನಿರ್ವಹಿಸಲು ಆರ್ಥಿಕವಾಗಿ ನೆರವಾಗುತ್ತದೆ ಎಂದರು.

ಮನೆ-ಮನೆಗೆ ಭೇಟಿ ನೀಡಿದ ಸಂದರ್ಭದಲ್ಲಿ ಅರ್ಹ ಕುಟುಂಬಗಳಿಗೆ ಯೋಜನೆಯ ಸೌಲಭ್ಯಗಳು, ಉದ್ಯೋಗ ಪಡೆಯುವ ವಿಧಾನ ಹಾಗೂ ಅಗತ್ಯ ಪ್ರಕ್ರಿಯೆಗಳ ಕುರಿತು ಮಾಹಿತಿ ನೀಡಲಾಯಿತು. ಯೋಜನೆಯ ಪ್ರಯೋಜನದಿಂದ ಗ್ರಾಮೀಣ ಬಡ ಮತ್ತು ಕೂಲಿ ಕಾರ್ಮಿಕ ಕುಟುಂಬಗಳ ಜೀವನೋಪಾಯಕ್ಕೆ ಭದ್ರತೆ ದೊರೆಯುವುದರ ಜೊತೆಗೆ ಆರ್ಥಿಕ ಸ್ವಾವಲಂಬನೆ ಸಾಧಿಸಲು ಅವಕಾಶ ಕಲ್ಪಿಸುತ್ತದೆ ಎಂದು ಅರಿವು ಮೂಡಿಸಲಾಯಿತು.

ಈ ಸಂದರ್ಭದಲ್ಲಿ ತಾಲ್ಲೂಕು ಐಈಸಿ ಸಂಯೋಜಕ ಶಿವಕುಮಾರ್, ಡಿಇಓ ಗಂಗಣ್ಣ, ಗ್ರಾಮ ಪಂಚಾಯಿತಿ ಸಿಬ್ಬಂದಿ ಉಪಸ್ಥಿತರಿದ್ದು ಫಲಾನುಭವಿಗಳಿಗೆ ಯೋಜನೆಯ ಕುರಿತು ಮಾಹಿತಿ ಮತ್ತು ಮಾರ್ಗದರ್ಶನ ನೀಡಿದರು.

ತಾಲ್ಲೂಕು ಮಟ್ಟದ ಕ್ರೀಡಾಕೂಟದಲ್ಲಿ ಭುವನೇಶ್ವರಿ ಪ್ರೌಢಶಾಲೆ ವಿದ್ಯಾರ್ಥಿಗಳ ಸಾಧನೆ

ಸೂರ್ಯಪ್ರಗತಿನ್ಯೂಸ್.ಕಾಂ

ತಿಪಟೂರು: ಮಣಕೀಕೆರೆ ಗ್ರಾಮದ ಭುವನೇಶ್ವರಿ ಪ್ರೌಢಶಾಲೆಯಲ್ಲಿ ನಡೆದ 14 ಮತ್ತು 17 ವಯೋಮಿತಿಯ ತಾಲ್ಲೂಕು ಮಟ್ಟದ ಕ್ರೀಡಾಕೂಟದಲ್ಲಿ ಶಾಲೆಯ ವಿದ್ಯಾರ್ಥಿಗಳು ವಿವಿಧ ಕ್ರೀಡಾ ವಿಭಾಗಗಳಲ್ಲಿ ಉತ್ತಮ ಸಾಧನೆ ಮಾಡಿ ಜಿಲ್ಲಾ ಮಟ್ಟದ ಕ್ರೀಡಾಕೂಟಕ್ಕೆ ಆಯ್ಕೆಯಾಗಿದ್ದಾರೆ. ಬಾಲಕಿಯರ ವಿಭಾಗದಲ್ಲಿ ಕಬ್ಬಡ್ಡಿಯಲ್ಲಿ ಪ್ರಥಮ, ಬಾಲ್ ಬ್ಯಾಡ್ಮಿಂಟನ್‌ನಲ್ಲಿ ದ್ವಿತೀಯ, 4*400 ಮೀಟರ್ ರಿಲೇಯಲ್ಲಿ ಪ್ರಥಮ ಹಾಗೂ 4*100 ಮೀಟರ್ ರಿಲೇಯಲ್ಲಿ ದ್ವಿತೀಯ ಸ್ಥಾನ ಪಡೆದಿದ್ದಾರೆ. ವೈಯಕ್ತಿಕ ವಿಭಾಗದಲ್ಲಿ ತನ್ಮಯಿ 110 ಮೀಟರ್ ಹರ್ಡಲ್ಸ್ ಹಾಗೂ 400 ಮೀಟರ್ ಹರ್ಡಲ್ಸ್‌ನಲ್ಲಿ ಪ್ರಥಮ ಮತ್ತು 400 ಮೀಟರ್ ಓಟದಲ್ಲಿ ತೃತೀಯ ಸ್ಥಾನ ಪಡೆದಿದ್ದಾರೆ. ಕಿರಣಶ್ರೀ ಎತ್ತರ ಜಿಗಿತದಲ್ಲಿ ದ್ವಿತೀಯ, ತನುಶ್ರೀ ತ್ರಿವಿಧ ಜಿಗಿತದಲ್ಲಿ ದ್ವಿತೀಯ, ಸುಮಿತ್ರ 800 ಮೀಟರ್ ಓಟದಲ್ಲಿ ದ್ವಿತೀಯ ಹಾಗೂ 3000 ಮೀಟರ್ ಓಟದಲ್ಲಿ ತೃತೀಯ ಸ್ಥಾನ ಗಳಿಸಿದ್ದಾರೆ.

ಬಾಲಕರ ವಿಭಾಗದಲ್ಲಿ ಪ್ರದೀಪ್ 1500 ಮೀಟರ್ ಓಟದಲ್ಲಿ ಪ್ರಥಮ ಸ್ಥಾನ ಪಡೆದಿದ್ದಾರೆ. ಪವನಜ್ಞ 800 ಮೀಟರ್ ಓಟದಲ್ಲಿ ಪ್ರಥಮ, 400 ಮೀಟರ್ ಹರ್ಡಲ್ಸ್ ಹಾಗೂ 110 ಮೀಟರ್ ಹರ್ಡಲ್ಸ್‌ನಲ್ಲಿ ದ್ವಿತೀಯ ಸ್ಥಾನ ಗಳಿಸಿದ್ದಾರೆ. ಬಾಲಕರ 4*400 ಮೀಟರ್ ರಿಲೇ ತಂಡ ದ್ವಿತೀಯ ಸ್ಥಾನ ಪಡೆದಿದ್ದು, ಉಲ್ಲಾಸ್ 3000 ಮೀಟರ್ ಹಾಗೂ 1500 ಮೀಟರ್ ಓಟದಲ್ಲಿ ತೃತೀಯ ಸ್ಥಾನ ಗಳಿಸಿದ್ದಾರೆ. ವಿವಿಧ ಕ್ರೀಡಾ ವಿಭಾಗಗಳಲ್ಲಿ ಉತ್ತಮ ಪ್ರದರ್ಶನ ನೀಡಿ ಶಾಲೆಗೆ ಕೀರ್ತಿ ತಂದಿರುವ ವಿದ್ಯಾರ್ಥಿಗಳು ಇದೀಗ ಜಿಲ್ಲಾ ಮಟ್ಟದ ಕ್ರೀಡಾಕೂಟಕ್ಕೆ ಆಯ್ಕೆಯಾಗಿದ್ದಾರೆ.

ವಿಜೇತ ಕ್ರೀಡಾಪಟುಗಳನ್ನು ಸಂಸ್ಥೆಯ ಅಧ್ಯಕ್ಷ ಎಂ.ಡಿ. ರವಿಕುಮಾರ್, ಕಾರ್ಯದರ್ಶಿ ಅಮರ್ ಸಿಂಗ್, ಮುಖ್ಯ ಶಿಕ್ಷಕಿ ಪವಿತ್ರಾ ಬಿ.ಆರ್., ಶಾಲೆಯ ಸಿಬ್ಬಂದಿ ವರ್ಗ ಹಾಗೂ ಸುತ್ತಮುತ್ತಲಿನ ಗ್ರಾಮಸ್ಥರು ಅಭಿನಂದಿಸಿ, ಜಿಲ್ಲಾ ಮಟ್ಟದಲ್ಲಿಯೂ ಉತ್ತಮ ಸಾಧನೆ ಮಾಡುವಂತೆ ಶುಭ ಹಾರೈಸಿದರು.

ವಿಧಾನಸಭೆಯಲ್ಲಿ ಕಸ್ತೂರಿ ರಂಗನ್ ವರದಿ ಕುರಿತು ಸಿಎಂ ಡಿಕೆ ಶಿವಕುಮಾರ್ ವಿವರ

ಕಸ್ತೂರಿ ರಂಗನ್ ವರದಿ ಕುರಿತು ಕೇಂದ್ರ ಸರ್ಕಾರದ 7ನೇ ಕರಡು ಅಧಿಸೂಚನೆಯನ್ನು ಯಥಾವತ್ತಾಗಿ ಒಪ್ಪುವುದಿಲ್ಲ ಎಂದಿರುವ ಕರ್ನಾಟಕ ಸರ್ಕಾರ, ನಿವೃತ್ತ ನ್ಯಾಯಾಧೀಶರ ನೇತೃತ್ವದಲ್ಲಿ ಉನ್ನತ ಮಟ್ಟದ ಸಮಿತಿ ರಚಿಸಿ ಭೌತಿಕ ಸರ್ವೇಗೆ 1 ವರ್ಷದ ಕಾಲಾವಕಾಶ ಕೋರಿ ವಿಧಾನಸಭೆಯಲ್ಲಿ ಸರ್ವಾನುಮತದ ನಿರ್ಣಯ ಅಂಗೀಕರಿಸಿದೆ. ವರದಿ ಕುರಿತು ರಾಜ್ಯ ಸರ್ಕಾರದ ನಿರ್ಣಯಕ್ಕೆ ವಿಪಕ್ಷದಿಂದಲೂ ಬೆಂಬಲ ನೀಡಲಾಗಿದೆ. ಕಸ ್ತೂರಿ ರಂಗನ್ ವರದಿಯ ನ್ಯೂನತೆಗಳನ್ನು ಸರಿಪ'ಡಿಸಲು ಕರ್ನಾಟಕ ರಾಜ್ಯ ಸರ್ಕಾರ ನಿವೃತ್ತ ನ್ಯಾಂಯಾಧೀಶರ ಅಧ್ಯಕ್ಷತೆಯಲ್ಲಿ ಉನ್ನತ ಮಟ್ಟದ ಸಮಿತಿ ರಚಿಸಲಿದೆ ಎಂದು ಸಿಎಂ ಡಿಕೆ ಶಿವಕುಮಾರ್ ಘೋ ಷಿಸಿದ್ದಾರೆ. ಅಲ್ಲದೆ ಭೌತಿಕ ಸರ್ವೇಗೆ ಒಂದು ವರ್ಷದ ಕಾಲಾವಕಾಶ ಕೊಡಬೇಕು. ಕಸ್ತೂರಿ ರಂಗನ್ ವರದಿ ಕುರಿತು ಕೇಂದ್ರ ಸರ್ಕಾರ ಹೊರಡಿಸಿರುವ 7ನೇ ಕರಡು ಅಧಿಸೂಚನೆಯನ್ನು ಯಥಾವತ್ತಾಗಿ ಒಪ್ಪುವುದಿಲ್ಲ ಮತ್ತುಅಧಿಸೂಚನೆಂಯನ್ನು ಮರು ಪರಿಶೀಲಿಸಬೇಕೆಂದು ವಿಧಾನಸಭೆಯಲ್ಲಿ ಅವರು ನಿರ್ಣಯ ಮಂಡಿಸಿದ್ದಾರೆ.

ಕರ್ನಾಟಕ ರಾಜ್ಯ ಸರ್ಕಾರದ ನಿರ್ಣಯಗಳೇನು?

ಯ ಥಾವತ್ತಾಗಿ 7ನೇ ಅಧಿಸೂಚನೆ ಒಪ್ಪಿರುವುದಿಲ್ಲ, ವರದಿಯ ನ್ಯೂನ್ಯತೆಗಳನ್ನು ಸರಿಪಡಿಸಬೇಕು

ಇಎ ವ್ಯಾಪ್ತಿಯಲ್ಲಿ ಕೇವಲ ಅಧಿಸೂಚಿತ ಅರಣ್ಯ ಪ್ರದೇಶ, ಇತರೆ ಅರಣ್ಯಪ್ರದೇಶ ಮಾತ್ರ ಸೇರಿಸಬೇಕು. ಕೃಷಿ ಭೂಮಿ, ತೋಟ, ಜನವಸತಿ ಭೂಮಿ ಸೇರಿಸಬಾರದು

ಬಗರ ಹುಕುಂ, ಅರಣ್ಯ ಹಕ್ಕು, ಡೀಮ್ಡ್ ಫಾರೆಸ್ಟ್, ಭೂ ಮಂಜೂರಾತಿ, ಮೇಲ್ಮನವಿ, ನ್ಯಾಯಾಂಗ ಪ್ರಕರಣ ಪರಿಗ 'ಣಿಸಬೇಕು, ಭೌತಿಕವಾಗಿ ಸರ್ವೇ ಮಾಡಿ ಗುರುತಿಸಬೇಕು

ರಾಜ್ಯ ಸರ್ಕಾರಿಂದ ನಿವೃತ್ತ ನ್ಯಾಯಾಧೀಶರ ಅಧ್ಯಕ್ಷತೆಯಲ್ಲಿ ಕಂದಾಯ ಅಧಿಕಾರಿಗಳು, ರೈತ ಪ್ರತಿನಿಧಿ, ಕೈಗಾರಿಕಾ ಉದ್ಯಮ ಪ್ರತಿನಿಧಿ, ವಿಷಯ ಪರಿಣಿತರು, ಶೈಕ್ಷಣಿಕ ತಜ್ಞರು, ವಿಜ್ಞಾನಿಗಳನ್ನು ಒಳಗೊಂಡ ಸಮಿತಿ ರಚನೆ ಭೌತಿಕ ಸರ್ವೇ ಸೇರಿದಂತೆ ಕಸ್ತೂರಿ ರಂಗನ್ ವರದಿಯ ನ್ಯೂನ್ಯತೆ ಸರಿಪಡಿಸಲು ಒಂದು ವರ್ಷದ ಕಾಲಾವಕಾಶಕ್ಕೆ ಕೇಂದ್ರ ಸರ್ಕಾರಕ್ಕೆ ಮನವಿಗೆ ನಿರ್ಧಾರ

ಈಅವಧಿಯಲ್ಲಿರಾಜ್ಯಕ್ಕೆಸಂಬಂಧಿಸಿದಅಧಿಸೂಚನೆಯನ್ನು ಕೇಂದ್ರ ಸರ್ಕಾರ ಅಂತಿಮಗೊಳಿಸಬಾರದು ಮತ್ತು ರಾಜ್ಯ ಸರ್ಕಾರದ ವಿಷಯದ ಬಗ್ಗೆ ಚರ್ಚೆ ನಡೆಸಿಯೇ ಅಂತಿಮ ನಿರ್ಧಾರ ಕೈಗೊಳ್ಳಬೇಕು

ರಾಜ್ಯ ಸರ್ಕಾರದ ನಿರ್ಣಯಕ್ಕೆ ವಿಪಕ್ಷದ ಬೆಂಬಲ

ಕಸ್ತೂರಿ ರಂಗನ್ ವರದಿ ಕುರಿತು ರಾಜ್ಯ ಸರ್ಕಾರದ ನಿರ್ಣಯಕ್ಕೆ ವಿಪಕ್ಷ ನಾಯಕ ಆರ್. ಅಶೋಕ್ ಬೆಂಬಲ ಸೂಚಿಸಿದ್ದಾರೆ. ಇದರಲ್ಲಿ ನಾವು ಯಾವುದೇ ರಾಜಕಾರಣ ಬೆರೆಸುವುದಿಲ್ಲ. ನಾವೆಲ್ಲರೂ ಸರ್ವಾನುಮತದಿಂದ ಒಪ್ಪಿಗೆ ಕೊಡುತ್ತೇವೆ ಎಂದು ವಿಧಾನಸಭೆಯಲ್ಲಿಯೇ ಅವರು ಹೇಳಿದ್ದಾರೆ.

ನಾಲ್ಕು ಇಲಾಖೆಗಳಲ್ಲೇ 36,136 ಕೋಟಿ ಬಿಲ್ ಬಾಕಿ!

ಕಫಳಿ, ಜಲಸಂಪನ್ಮೂಲ, ಸಣ್ಣ ನೀರಾವರಿ ಹಾಗೂ ಖಆಕಖ ಇಲಾಖೆಗಳಲ್ಲಿ ಒಟ್ಟು 36,136 ಕೋಟಿ ಬಿಲ್ ಬಾಕಿಯಿದೆ. ಈಗಿರುವ ಬಾಕಿ ಪಾವತಿಗಳ ನಡುವೆಯೇ ಹೊಸ ಯೋಜನೆಗಳಿಗೆ ಹಣ ಹೊಂದಿಸುವ ಸವಾಲು ಎದುರಾಗಿದೆ. ಹೀಗಾಗಿ ಹೊಸ ಕಾಮಗಾರಿಗಳಿಗಿಂತ ಮೊದಲು ಹಣಕಾಸಿನ ಲಭ್ಯತೆ ಖಚಿತಪಡಿಸಿಕೊಳ್ಳಲು ಹಣಕಾಸು ಇಲಾಖೆ ಸಲಹೆ ನೀಡಿದೆ. 2026–27ರ ಮೊದಲ ಆರು ತಿಂಗಳಲ್ಲೇ 5,000 ಕೋಟಿಗೂ ಹೆಚ್ಚು ಮೊತ್ತದ ಯೋಜನೆಗಳಿಗೆ ಅನುಮೋದನೆ ನೀಡಲಾಗಿದ್ದು, ಖಇ–1 ಅಡಿಯ ಕಾಮಗಾರಿಗಳೂ ಇದರಲ್ಲಿ ಸೇರಿವೆ. ಆದರೆ ಈ ಕಾಮಗಾರಿಗಳಿಗೆ ಹೆಚ್ಚುವರಿ ಹಣಕಾಸಿನ ಮೂಲ ಇನ್ನೂ ಗುರುತಿಸಿಲ್ಲ ಎಂದು ಇಲಾಖೆ ಉಲ್ಲೇಖಿಸಿದೆ. ಈ ನಡುವೆ ಜಲಸಂಪನ್ಮೂಲ, ಇಂಧನ, ವಾಣಿಜ್ಯ ಮತ್ತು ಕೈಗಾರಿಕೆ, ನಗರಾಭಿವೃದ್ಧಿ ಹಾಗೂ ಸಾರಿಗೆ ಇಲಾಖೆಗಳಿಂದ ಹೆಚ್ಚುವರಿ ಅನುದಾನಕ್ಕೆ ಬೇಡಿಕೆ ಇದೆ. ಬೃಹತ್ ಪ್ರಮಾಣದ ಹೆಚ್ಚುವರಿ ಅನುದಾನದ ಪ್ರಸ್ತಾವನೆಗಳು ಹಣಕಾಸು ಇಲಾಖೆ ಮುಂದೆ ಬಾಕಿ ಇರುವ ನಡುವೆಯೇ ಹೊಸ ಯೋಜನೆಗಳಿಗೆ ಹಣ ಒದಗಿಸುವುದು ಕಷ್ಟ ಎಂಬ ಅಭಿಪ್ರಾಯ ಹಣಕಾಸು ಇಲಾಖೆಯದ್ದಾಗಿದೆ.

ಬರದಿಂದ ಬೊಕ್ಕಸಕ್ಕೆ ಮತ್ತಷ್ಟು ಹೊರೆ?

ತೀವ್ರ ಬರ ಪರಿಸ್ಥಿತಿಯಿಂದ ಸರ್ಕಾರದ ವೆಚ್ಚ ಮತ್ತಷ್ಟು ಹೆಚ್ಚಾಗುವ ಸಾಧ್ಯತೆ ಇದೆ. ಬರ ಪರಿಹಾರಕ್ಕೆ ಎಷ್ಟು ಹೆಚ್ಚುವರಿ ಹಣ ಬೇಕಾಗಬಹುದು ಎಂಬುದು ಕೇಂದ್ರದ ಪ್ರತಿಕ್ರಿಯೆಯ ಮೇಲೆ ಅವಲಂಬಿತವಾಗಿದ್ದು, ಬರದ ಪರಿಣಾಮ ಖಕ–ಖಇಖ ವಿದ್ಯುತ್ ಸಬ್ಸಿಡಿ ಹೊರೆ ಭಾರೀ ಪ್ರಮಾಣದಲ್ಲಿ ಹೆಚ್ಚುವ ಸಾಧ್ಯತೆ ಇದೆ. ಇದಕ್ಕೆ ಹೆಚ್ಚುವರಿ 4,000–5,000 ಕೋಟಿ ಬೇಕಾಗಬಹುದೆಂದು ಅಂದಾಜಿಸಲಾಗಿದೆ.

ಆರ್ಥಿಕ ಇಲಾಖೆ ಎಚ್ಚರಿಕೆ ಬಗ್ಗೆ ಸಿಎಂ ಹೇಳಿದ್ದೇನು?

ಇನ್ನು ಆರ್ಥಿಕ ಇಲಾಖೆಯ ಎಚ್ಚರಿಕೆ ಬಗ್ಗೆ ಪ್ರತಿಕ್ರಿಯಿಸಿರುವ ಸಿಎಂ ಡಿಕೆಶಿ, ಅವರು ಸಲಹೆ ನೀಡಿರುವುದರಲ್ಲಿ ತಪ್ಪೇನಿಲ್ಲ. ಸರ್ಕಾರದ ಹಿತದೃಷ್ಟಿಯಿಂದ ಹುಷಾರಾಗಿರಿ ಎಂದಿದ್ದಾರೆ. ಅಧಿಕಾರದಲ್ಲಿರುವ ನಮಗೆ ಹೇಗೆ ನಡೆಸಬೇಕು ಎನ್ನುವ ಅರಿವಿದ್ದು, ನಾವು ಮಾಡುತ್ತೇವೆ. ಈ ಬಗ್ಗೆ ಮಾತಾಡೋರೆಲ್ಲ ಕೇಂದ್ರ ಸರ್ಕಾರ ನಮಗೆ ಕೊಡಬೇಕಿರುವ ಪಾಲು ಕೊಡಿಸಲಿ ಎಂದು ತಿಳಿಸಿದ್ದಾರೆ.

ಪ್ರೀತಿಯ ನೆಚ್ಚಿನ ಓದುಗ ಮಿತ್ರರೇ ಸೂರ್ಯಪ್ರಗತಿ ಕನ್ನಡ ದಿನಪತ್ರಿಕೆಯು ಮಾಧ್ಯಮ ಪಟ್ಟಿಗೆ ಸೇರಿ ಪ್ರತಿ ನಿತ್ಯ ಸ್ಥಳೀಯ ಸುದ್ದಿಗಳ ಜೀವಾಳವಾಗಿದ್ದು ಕ್ಷಣ ಕ್ಷಣದ ಸುದ್ದಿಗಳನ್ನ ಅಂತರ್ಜಾಲ ತಾಣ ವೆಬ್ ಆವೃತ್ತಿ https://suryapragathi.com ನಲ್ಲಿ ಹಾಗೂ https://epaper.suryapragathi.com ನಲ್ಲಿ ಓದಬಹುದು – ನೋಡಬಹುದು ಹೆಚ್ಚಿನ ಮಾಹಿತಿಗಾಗಿ 9901010109

ಮುಂದಿನ ಮೂರು ದಿನ ಕರ್ನಾಟಕದ ಹಲವೆಡೆ ಭಾರಿ ಮಳೆ

ಮುಂದಿನ ಮೂರು ದಿನಗಳಲ್ಲಿ ಕರ್ನಾಟಕದ ಕೆಲವು ಭಾಗಗಳಲ್ಲಿ ಭಾರಿ ಮಳೆಯಾಗುವ ಸಾಧ್ಯತೆ ಇದೆ. ಭಾರತೀಯ ಹವಾಮಾನ ಇಲಾಖೆ ಬುಧವಾರ ಇಡೀ ರಾಜ್ಯಕ್ಕೆ ಆರೆಂಜ್ ಅಲರ್ಟ್ ಘೋಷಿಸಿದ್ದು, ಗುರುವಾರ ಕರಾವಳಿ ಕರ್ನಾಟಕಕ್ಕೆ ರೆಡ್ ಅಲರ್ಟ್ ಹಾಗೂ ದಕ್ಷಿಣ ಒಳನಾಡು ಕರ್ನಾಟಕಕ್ಕೆ ಆರೆಂಜ್ ಅಲರ್ಟ್ ನೀಡಲಾಗಿದೆ. ಶುಕ್ರವಾರವೂ ದಕ್ಷಿಣ ಒಳನಾಡು ಮತ್ತು ಕರಾವಳಿ ಕರ್ನಾಟಕದಲ್ಲಿ ಮಳೆ ಮುಂದುವರಿಯಲಿದ್ದು, ಕೆಲವು ಪ್ರದೇಶಗಳಲ್ಲಿ ಅತಿ ತೀವ್ರ ಮಳೆಯಾಗುವ ಸಾಧ್ಯತೆ ಇದೆ.

ಸೆಪ್ಟೆಂಬರ್‌ನಲ್ಲಿ ಮಳೆ ಕೊರತೆ ಅತ್ಯಧಿಕ

ಕರ್ನಾಟಕ ರಾಜ್ಯ ನೈಸರ್ಗಿಕ ವಿಕೋಪ ನಿರ್ವಹಣಾ ಕೇಂದ್ರದ (ಏಖಓಆಒಖ) ಅಂಕಿಅಂಶಗಳ ಪ್ರಕಾರ, ರಾಜ್ಯವು ಇತ್ತೀಚಿನ ವರ್ಷಗಳಲ್ಲೇ ಅತ್ಯಂತ ಕಳಪೆ ಮುಂಗಾರು ಋತುವನ್ನು ಎದುರಿಸುತ್ತಿದೆ. ಹಿಂದಿನ ಮುಂಗಾರು ತಿಂಗಳ ಮಳೆ ಕೊರತೆಗೆ ಹೋಲಿಸಿದರೆ ಸೆಪ್ಟೆಂಬರ್‌ನಲ್ಲಿ ಮಳೆ ಕೊರತೆ ಅತ್ಯಧಿಕವಾಗಿದ್ದು, ಆತಂಕ ಹೆಚ್ಚಿಸಿದೆ. ಪ್ರಸ್ತುತ ಸೆಪ್ಟೆಂಬರ್‌ನಲ್ಲಿ ಮಳೆ ಕೊರತೆ 67% ಇದೆ. ಸಾಮಾನ್ಯವಾಗಿ 107 ಮಿ.ಮೀ. ಮಳೆಯಾಗಬೇಕಿತ್ತಾದರೂ ಇದುವರೆಗೆ ರಾಜ್ಯದಲ್ಲಿ ಕೇವಲ 35 ಮಿ.ಮೀ. ಮಳೆಯಾಗಿದೆ. ಜೂನ್‌ನಲ್ಲಿ ಸಾಮಾನ್ಯ 199 ಮಿ.ಮೀ. ಬದಲಿಗೆ 116 ಮಿ.ಮೀ. ಅಂದರೆ 42% ಮಳೆ ಕೊರತೆ ದಾಖಲಾಗಿತ್ತು. ಜುಲೈನಲ್ಲಿ 29% ಕೊರತೆ ಇದ್ದು, ಸಾಮಾನ್ಯ 271 ಮಿ.ಮೀ. ಬದಲಿಗೆ 192 ಮಿ.ಮೀ. ಮಳೆಯಾಗಿತ್ತು. ಆಗಸ್ಟ್‌ನಲ್ಲಿ 23% ಕೊರತೆ ದಾಖಲಾಗಿದ್ದು, ಸಾಮಾನ್ಯ 220 ಮಿ.ಮೀ. ಬದಲಿಗೆ ಇದರ ಪ್ರಮಾಣ 169 ಮಿ.ಮೀ. ಆಗಿತ್ತು.

ಶಿಕ್ಷಣ ಸಂವಾದ ಯುವ ಸಂವಾದ

ಸೂರ್ಯಪ್ರಗತಿನ್ಯೂಸ್.ಕಾಂ

ಆನೇಕಲ್ ಕಾಲೇಜಿನಲ್ಲಿ ಯುವ ಸಂವಾದ

ಯುವಜನರಲ್ಲಿ ಶಿಕ್ಷಣದ ಮಹತ್ವ, ನಾಯಕತ್ವ ಗುಣಗಳು ಹಾಗೂ ಸಮುದಾಯದ ಅಭಿವೃದ್ಧಿಯಲ್ಲಿ ಯುವಜನರ ಪಾತ್ರದ ಕುರಿತು ಚರ್ಚಿಸುವ ಉದ್ದೇಶದಿಂದ ಮಂತ್ರ ಫಾರ್ ಚೇಂಜ್ ಸಂಸ್ಥೆಯ ಶಿಕ್ಷಾ ಗ್ರಹ ಆಂದೋಲನದಡಿ ಶಿಕ್ಷಣ ಸಂವಾದ ಯುವ ಸಂವಾದ ಕಾರ್ಯಕ್ರಮವನ್ನು ಎ.ಎಸ್.ಬಿ. ಸರ್ಕಾರಿ ಪದವಿ ಪೂರ್ವ ಕಾಲೇಜಿನ ಸ್ವರ್ಣ ಭವನದಲ್ಲಿ ಆಯೋಜಿಸಲಾಗಿತ್ತು.

ಕಾರ್ಯಕ್ರಮದಲ್ಲಿ ಕಾಲೇಜಿನ ಪ್ರಾಂಶುಪಾಲ ಜಿ. ಗಿರೀಶ್, ಸರ್ಕಾರಿ ನೌಕರರ ಸಂಘದ ಅಧ್ಯಕ್ಷ ಮಂಜುನಾಥ್, ಕಾನೂನು ತಜ್ಞ ಪುರುಷೋತ್ತಮ್ ಚಿಕ್ಕ ಹೆಗಡೆ, ಸಾಮಾಜಿಕ ಹೋರಾಟಗಾರ್ತಿ ಮಮತಾ ಹಾಗೂ ಡಾ. ಎನ್. ಗಂಗಾಧರ ರೆಡ್ಡಿ ಭಾಗವಹಿಸಿದ್ದರು.

'ಆನೇಕಲ್ ತಾಲೂಕಿನ ಶಿಕ್ಷಣ, ಸಮಾನತೆ ಮತ್ತು ಸಮುದಾಯದ ಅಭಿವೃದ್ಧಿ' ವಿಷಯದ ಕುರಿತು ಪ್ಯಾನಲ್ ಚರ್ಚೆ ನಡೆಯಿತು. ಗ್ರಾಮೀಣ ಮತ್ತು ನಗರ ಪ್ರದೇಶಗಳ ಶೈಕ್ಷಣಿಕ ಅವಕಾಶಗಳು, ಉನ್ನತ ಶಿಕ್ಷಣ, ಕೌಶಲ್ಯಾಭಿವೃದ್ಧಿ, ಮಹಿಳಾ ಸಬಲೀಕರಣ, ಕಾನೂನು ಅರಿವು, ಪರಿಸರ ಸಂರಕ್ಷಣೆ ಹಾಗೂ ಯುವ ನಾಯಕತ್ವದ ಕುರಿತು ಚರ್ಚಿಸಲಾಯಿತು.

ಕಾನೂನು ತಜ್ಞ ಪುರುಷೋತ್ತಮ್ ಚಿಕ್ಕ ಹೆಗಡೆ ಮಾತನಾಡಿ, ಯುವಜನರು ತಮ್ಮ ಹಕ್ಕು ಮತ್ತು ಕರ್ತವ್ಯಗಳ ಬಗ್ಗೆ ಕಾನೂನು ಅರಿವು ಹೊಂದಬೇಕು. ಸಾಮಾಜಿಕ ಸಮಸ್ಯೆಗಳಿಗೆ ಕಾನೂನಿನ ಚೌಕಟ್ಟಿನಲ್ಲಿ ಪರಿಹಾರ ಕಂಡುಕೊಳ್ಳಬೇಕು ಎಂದು ತಿಳಿಸಿದರು.

ಸೆಂಟ್ ಫಿಲೋಮಿನಾ ಕಾಲೇಜಿನ ಎನ್‌ಎಸ್‌ಎಸ್ ಅಧಿಕಾರಿ ಮಂಜುಳಾ, ರಾಮು, ಶಿಕ್ಷಾಗ್ರಹ ಸಂಸ್ಥೆಯ ಸಂಯೋಜಕರಾದ ವೆಂಕಟೇಶ, ಬಿ. ಸಿದ್ದರಾಜು, ರಾಧಾ, ಮಂತ್ರ ಫಾರ್ ಚೇಂಜ್ ಸಂಸ್ಥೆಯ ಬಾಲಕೃಷ್ಣ, ಶಿಲ್ಪಾ, ಗಣಪತಿ, ಗಮನ ಸಂಸ್ಥೆ ಹಾಗೂ ನವಸಹಯೋಗ್ ಸಂಸ್ಥೆಗಳ ಪ್ರತಿನಿಧಿಗಳು, ವಿವಿಧ ಕಾಲೇಜುಗಳ ವಿದ್ಯಾರ್ಥಿಗಳು, ಶಿಕ್ಷಾಗ್ರಹ ಹಾಗೂ ಮಂತ್ರ ಫಾರ್ ಚೇಂಜ್ ಸಂಸ್ಥೆಯ ಪ್ರತಿನಿಧಿಗಳು ಉಪಸ್ಥಿತರಿದ್ದರು.

ಹೈಕೋರ್ಟ್ ತರಾಟೆ ಬಳಿಕ ಬಿಜೆಪಿ ಶಾಸಕ ಸುರೇಶ್‌ಗೌಡ ಪುತ್ರಿ ಕ್ಷಮೆಯಾಚನೆ

ಸೂರ್ಯಪ್ರಗತಿನ್ಯೂಸ್.ಕಾಂ

ಕರ್ತವ್ಯನಿರತ ಮಹಿಳಾ ಪಿಎಸ್‌ಐಗೆ ಕಪಾಳ ಮೋಕ್ಷ ಮಾಡಿದ ಪ್ರಕರಣಕ್ಕೆ ಸಂಬಂಧಿಸಿದಂತೆ ಬಿಜೆಪಿ ಶಾಸಕ ಸುರೇಶ್‌ಗೌಡ ಅವರ ಪುತ್ರಿ ಐಶ್ವರ್ಯ ಗೌಡ ಅವರಿಗೆ ಮಂಗಳವಾರ ಹೈಕೋರ್ಟ್ ನಿರೀಕ್ಷಣಾ ಜಾಮೀನು ಮಂಜೂರು ಮಾಡಿದೆ. ಮಹಿಳಾ ಪೊಲೀಸ್ ಅಧಿಕಾರಿ ಬಳಿ ಕ್ಷಮೆ ಕೇಳಿದರೆ ಮಾತ್ರ ನಿರೀಕ್ಷಣಾ ಜಾಮೀನು ಅರ್ಜಿ ವಿಚಾರಣೆ ನಡೆಸುವುದಾಗಿ ನ್ಯಾಯಾಲಯ ಹೇಳಿತ್ತು. ಹೀಗಾಗಿ ಐಶ್ವರ್ಯ ಗೌಡ ಅವರು ಇಂದು ವಿಡಿಯೋ ಮೂಲಕ ಪೊಲೀಸ್ ಅಧಿಕಾರಿ ಬಳಿ ಕ್ಷಮೆ ಕೇಳಿದ ನಂತರ ಜಾಮೀನು ನೀಡಲಾಗಿದೆ.

ಐಶ್ವರ್ಯಾ ಅವರು ಮಹಿಳಾ ಪಿಎಸ್‌ಐ ಸವಿತಾ ಅವರಿಗೆ ಕ್ಷಮೆ ಕೇಳಿದ್ದಾರೆ. ನ್ಯೂಸ್ ಚಾನಲ್‌ಗಳಲ್ಲೂ ಕ್ಷಮೆಯಾಚನೆ ಸುದ್ದಿ ಪ್ರಸಾರವಾಗಿದೆ ಎಂದು ಹೈಕೋರ್ಟ್‌ಗೆ ಐಶ್ವರ್ಯಾ ಪರ ವಕೀಲರಿಂದ ಮಾಹಿತಿ ನೀಡಿದ್ದು, ಆರೋಪಕ್ಕೆ ಕೇವಲ 2 ವರ್ಷದವರೆಗೆ ಮಾತ್ರ ಶಿಕ್ಷೆ ಇದೆ. ಐಶ್ವರ್ಯಾ ಹಾಗೂ ಆಕೆಯ ತಂದೆ ಈಗಾಗಲೇ ಕ್ಷಮೆಯಾಚಿಸಿದ್ದಾರೆ ಎಂದು ತಿಳಿಸಿದರು.

ಇದನ್ನು ಆಲಿಸಿದ ನ್ಯಾಯಮೂರ್ತಿ ಎಸ್. ವಿಶ್ವಜಿತ್ ಶೆಟ್ಟಿ ಅವರಿದ್ದ ಪೀಠ ಐಶ್ವರ್ಯಾಗೆ ನಿರೀಕ್ಷಣಾ ಜಾಮೀನು ಮಂಜೂರು ಮಾಡಿ ಆದೇಶ ಹೊರಡಿಸಿದೆ. ಆ ಘಟನೆ ನಡೆಯಬಾದಿತ್ತು ಆಗಸ್ಟ್ 12ರಂದು ಭೀಮನ ಅಮಾವಾಸ್ಯೆಯಂದು ನಾನು ಮತ್ತು ನನ್ನ ಇಬ್ಬರು ಮಕ್ಕಳು ಪಾಂಡವಪುರದ ಉಕ್ಕಡಮ್ಮ ದೇವಸ್ಥಾನಕ್ಕೆ ತೆರಳಿದ್ದೆವು. ಅಂದು ದೇಗುಲದಲ್ಲಿ ಹೆಚ್ಚು ಜನಸಂದಣಿ ಇದ್ದಿದ್ದರಿಂದ ಹಾಗೂ ನನ್ನ ಮಕ್ಕಳಿಗೆ 'ಅಮ್ಮ' ಆಗಿದ್ದ ಕಾರಣ ದೇವರ ದರ್ಶನ ಪಡೆಯುವ ಸಂದರ್ಭದಲ್ಲಿ ನನ್ನ ಮತ್ತು ಮಹಿಳಾ ಪಿಎಸ್‌ಐ ನಡುವೆ ಸಣ್ಣ ಮಾತಿನ ಚಕಮಕಿ ನಡೆಯಿತು. ಉದ್ವೇಗದಿಂದ ಅಹಿತಕರ ಘಟನೆ ನಡೆದಿದೆ. ಈ ಘಟನೆ ನಡೆಯಬಾರದಿತ್ತು ಎಂದು ಐಶ್ವರ್ಯ ವಿಡಿಯೋದಲ್ಲಿ ಹೇಳಿದ್ದಾರೆ.

ಈ ಘಟನೆ ಬಗ್ಗೆ ನಾನು ವಿಷಾದ ವ್ಯಕ್ತಪಡಿಸುತ್ತೇನೆ. ಈ ಘಟನೆಯಿಂದ ಕರ್ತವ್ಯದಲ್ಲಿದ್ದ ಪಿಎಸ್‌ಐ ಸವಿತಾ ಪಾಟೀಲ್ ಅವರಿಗೆ ನೋವಾಗಿದ್ದರೆ, ಬೇಷರತ್ ಆಗಿ ಕ್ಷಮೆ ಯಾಚಿಸುತ್ತೇನೆ ಎಂದು ವೀಡಿಯೋ ಮೂಲಕ ಐಶ್ವರ್ಯ ಕ್ಷಮೆಯಾಚಿಸಿದ್ದಾರೆ. ಇದರ ಬೆನ್ನಲ್ಲೇ ಕರ್ನಾಟಕ ಹೈಕೋರ್ಟ್ ಇಂದು ಐಶ್ವರ್ಯಾಗೆ ನಿರೀಕ್ಷಣಾ ಜಾಮೀನು ನೀಡಿ ಆದೇಶ ಹೊರಡಿಸಿದೆ.

ಕರ್ತವ್ಯನಿರತ ಮಹಿಳಾ ಪೊಲೀಸ್ ಸಬ್ ಇನ್‌ಸ್ಪೆಕ್ಟರ್‌ಗೆ ಕಪಾಳಮೋಕ್ಷ ಮಾಡಿದ ಆರೋಪ ಎದುರಿಸುತ್ತಿರುವ ತುಮಕೂರು ಗ್ರಾಮಾಂತರ ಕ್ಷೇತ್ರದ ಶಾಸಕ ಬಿ. ಸುರೇಶ್ ಗೌಡ ಅವರ ಪುತ್ರಿ ಐಶ್ವರ್ಯಾ ಅವರು ಮಹಿಳಾ ಪಿಎಸ್‌ಐ ಬಳಿ ಕ್ಷಮೆ ಯಾಚಿಸಿದರೆ ಅವರ ನಿರೀಕ್ಷಣಾ ಜಾಮೀನು ಅರ್ಜಿಯನ್ನು ಪರಿಗಣಿಸಬಹುದು ಎಂದು ಹೈಕೋರ್ಟ್ ಸ್ಪಷ್ಟಪಡಿಸಿತ್ತು.

ಅಕ್ರಮ ಗನ್ ದಂಧೆಗೆ ಬ್ರೇಕ್:
ಆನೇಕಲ್ ಪೊಲೀಸರಿಂದ ಏಳು ಮಂದಿ ಬಂಧನ

ಸೂರ್ಯಪ್ರಗತಿನ್ಯೂಸ್.ಕಾಂ

ಆನೇಕಲ್: ಅಕ್ರಮವಾಗಿ ಕಂಟ್ರಿಮೇಡ್ ಪಿಸ್ತೂಲ್‌ಗಳನ್ನು ಮಾರಾಟ ಮಾಡುತ್ತಿದ್ದ ಆರೋಪದ ಮೇಲೆ ಆನೇಕಲ್ ಪೊಲೀಸರು ಏಳು ಮಂದಿಯನ್ನು ಬಂಧಿಸಿ, ಐದು ಕಂಟ್ರಿಮೇಡ್ ಪಿಸ್ತೂಲ್ ಹಾಗೂ 10 ಗುಂಡುಗಳನ್ನು ವಶಕ್ಕೆ ಪಡೆದಿದ್ದಾರೆ.

ಬಂಧಿತರನ್ನು ಪ್ರದೀಪ್ ರಮೇಶ್, ಮನೋಜ್ ಅಲಿಯಾಸ್ ಜಾಕಿ, ರಿಜ್ವಾನ್ ಪಾಷ ಅಲಿಯಾಸ್ ಕುಳ್ಳ ರಿಜ್ವಾನ್, ನಂಜಪ್ಪ ಅಲಿಯಾಸ್ ಡೆಡ್ಲಿ ನಂಜ, ವೆಂಕಟರಾಜು ಅಲಿಯಾಸ್ ತುಕಡಿ, ಗೋಪಿ ಅಲಿಯಾಸ್ ಸುಣವಾರ ಗೋಪಿ ಹಾಗೂ ಶಿವರಾಜ್ ಎಂದು ಗುರುತಿಸಲಾಗಿದೆ. ಬಂಧಿತರ ಪೈಕಿ ಐವರು ರೌಡಿ ಶೀಟರ್‌ಗಳಾಗಿದ್ದಾರೆ ಎಂದು ಪೊಲೀಸರು ತಿಳಿಸಿದ್ದಾರೆ.

ಆನೇಕಲ್ ಇನ್ಸ್‌ಪೆಕ್ಟರ್ ಪ್ರಕಾಶ್ ಹಾಗೂ ಸಬ್ ಇನ್ಸ್‌ಪೆಕ್ಟರ್ ಸಿದ್ದನಗೌಡ ನೇತೃತ್ವದ ತಂಡ ಕಾರ್ಯಾಚರಣೆ ನಡೆಸಿ ಆರೋಪಿಗಳನ್ನು ಬಂಧಿಸಿದೆ. ಪ್ರಕರಣಕ್ಕೆ ಸಂಬಂಧಿಸಿದಂತೆ ಏಳು ಆರೋಪಿಗಳ ವಿರುದ್ಧ ಕರ್ನಾಟಕ ಸಂಘಟಿತ ಅಪರಾಧ ನಿಯಂತ್ರಣ ಕಾಯ್ದೆ (ಕೋಕಾ) ಅಡಿ ಪ್ರಕರಣ ದಾಖಲಿಸಲಾಗಿದೆ.

ಡಿವೈಎಸ್ಪಿ ಗೋಪಾಲ್ ನಾಯಕ್ ಹಾಗೂ ಇನ್ಸ್‌ಪೆಕ್ಟರ್ ಪ್ರಕಾಶ್ ನೇತೃತ್ವದಲ್ಲಿ ತನಿಖೆ ಮುಂದುವರಿದಿದ್ದು, ಅಕ್ರಮ ಶಸ್ತ್ರಾಸ್ತ್ರಗಳ ಜಾಲದ ಹಿಂದೆ ಇನ್ನೂ ಯಾರಾದರೂ ಇರುವುದೇ ಎಂಬುದರ ಕುರಿತು ಪೊಲೀಸರು ತನಿಖೆ ನಡೆಸುತ್ತಿದ್ದಾರೆ.

ಬರಪೀಡಿತ ತಾಲೂಕುಗಳ ಸಂಖ್ಯೆ ಸುಮಾರು 200ರವರೆಗೆ ತಲುಪಬಹುದು

ಅನುಸರಿಸಿ ಮೊದಲ ಹಂತದಲ್ಲಿ 101 ತಾಲೂಕುಗಳನ್ನು ಬರಪೀಡಿತ ಎಂದು ಘೋಷಿಸಲಾಗಿತ್ತು. ನಿರಂತರ ಪರಿಶೀಲನೆಯ ಬಳಿಕ ಮತ್ತೂ 23 ತಾಲೂಕುಗಳನ್ನು ಸೇರ್ಪಡೆ ಮಾಡಲಾಗಿದ್ದು, ಇದೀಗ ಮತ್ತೆ 53 ತಾಲೂಕುಗಳನ್ನು ಪಟ್ಟಿಗೆ ಸೇರಿಸಲಾಗುತ್ತಿದೆ. ಇದರೊಂದಿಗೆ ಒಟ್ಟು 177 ತಾಲೂಕುಗಳು ಬರಪೀಡಿತ ಪ್ರದೇಶಗಳಾಗಿ ಘೋಷಣೆಯಾಗಲಿವೆ ಎಂದು ತಿಳಿಸಿದರು.

ಇಷ್ಟಕ್ಕೇ ಪ್ರಕ್ರಿಯೆ ಮುಗಿಯುವುದಿಲ್ಲ. ನೆಲಮಟ್ಟದ ಪರಿಸ್ಥಿತಿ, ಮಳೆ ಕೊರತೆ, ಬೆಳೆ ಹಾನಿ ಸೇರಿದಂತೆ ನಿಗದಿತ ಮಾನದಂಡಗಳ ಆಧಾರದಲ್ಲಿ ನಿರಂತರ ಮೌಲ್ಯಮಾಪನ ನಡೆಸಲಾಗುವುದು. ಮುಂದಿನ ಹಂತದಲ್ಲಿ ಮತ್ತಷ್ಟು ತಾಲೂಕುಗಳು ಪಟ್ಟಿಗೆ ಸೇರ್ಪಡೆಯಾಗುವ ಸಾಧ್ಯತೆಯಿದ್ದು, ಬರಪೀಡಿತ ತಾಲೂಕುಗಳ ಸಂಖ್ಯೆ ಸುಮಾರು 200ರವರೆಗೆ ತಲುಪಬಹುದು ಎಂದು ಹೇಳಿದರು. ಕೇಂದ್ರ ಸರ್ಕಾರವೇ ಬರ ಘೋಷಣೆ ಮತ್ತು ಪರಿಹಾರಕ್ಕೆ ಸಂಬಂಧಿಸಿದ ಮಾನದಂಡಗಳನ್ನು ರೂಪಿಸಿರುವುದರಿಂದ, ರಾಜ್ಯ ಸರ್ಕಾರವು ಆ ನಿಯಮಗಳ ಚೌಕಟ್ಟಿನಲ್ಲಿಯೇ ಕ್ರಮ ಕೈಗೊಳ್ಳಬೇಕಾಗಿದೆ. ಮಾನದಂಡಗಳನ್ನು ಮೀರಿ ರಾಜ್ಯದ ಎಲ್ಲ ತಾಲೂಕುಗಳನ್ನು ಏಕಾಏಕಿ ಬರಪೀಡಿತ ಎಂದು ಘೋಷಿಸಿದರೆ ಕೇಂದ್ರದಿಂದ ಪರಿಹಾರ ಪಡೆಯುವ ಪ್ರಕ್ರಿಯೆಗೆ ತೊಡಕು ಉಂಟಾಗಬಹುದು ಎಂದು ಸ್ಪಷ್ಟಪಡಿಸಿದರು.

ಕೇಂದ್ರ ಸರ್ಕಾರ ರೂಪಿಸಿರುವ ನಿಯಮಗಳ ಪ್ರಕಾರವೇ ನಾವು ನಡೆದುಕೊಳ್ಳುತ್ತಿದ್ದೇವೆ. ಆ ನಿಯಮಗಳಡಿ ರಾಜ್ಯಕ್ಕೆ ದೊರೆಯಬೇಕಾದ ಬರ ಪರಿಹಾರವನ್ನು ಕೇಂದ್ರ ಸರ್ಕಾರ ನೀಡಬೇಕು. ಅದೇ ವೇಳೆ ರಾಜ್ಯ ಸರ್ಕಾರವೂ ತನ್ನ ಜವಾಬ್ದಾರಿಯಿಂದ ಹಿಂದೆ ಸರಿಯದೆ, ಪರಿಸ್ಥಿತಿಯನ್ನು ನಿರಂತರವಾಗಿ ಪರಿಶೀಲಿಸಿ ರೈತರಿಗೆ ಪರಿಹಾರ ತಲುಪಿಸುವ ಕೆಲಸ ಮಾಡಲಿದೆ ಎಂದು ಹೇಳಿದರು.

ಕಸ್ತೂರಿ ರಂಗನ್ ವರದಿ ಮತ್ತು ಬರಗಾಲ ಎರಡೂ ರಾಜ್ಯದ ಹಿತಾಸಕ್ತಿಗೆ ಸಂಬಂಧಿಸಿದ ಮಹತ್ವದ ವಿಷಯಗಳಾಗಿವೆ. ಹೀಗಾಗಿ ಆಡಳಿತ ಮತ್ತು ವಿರೋಧ ಪಕ್ಷಗಳು ಪಕ್ಷಭೇದ ಮರೆತು ಸದನದಲ್ಲಿ ಸಮಗ್ರವಾಗಿ ಚರ್ಚಿಸಿ, ರಾಜ್ಯದ ಹಿತಾಸಕ್ತಿಯನ್ನು ಕಾಪಾಡುವ ನಿಟ್ಟಿನಲ್ಲಿ ಒಗ್ಗಟ್ಟಿನ ನಿಲುವನ್ನು ಕೇಂದ್ರ ಸರ್ಕಾರದ ಮುಂದೆ ಮಂಡಿಸಬೇಕಿದೆ ಎಂದು ಎಂದು ಉಪಮುಖ್ಯಮಂತ್ರಿ ಡಾ. ಜಿ. ಪರಮೇಶ್ವರ ಅವರು ಸದನಕ್ಕೆ ಮನವಿ ಮಾಡಿದರು.

ಸೂರ್ಯ ಪ್ರಗತಿ ಕನ್ನಡ ದಿನ ಪತ್ರಿಕೆ

ಐತಿಹಾಸಿಕ ಕುರುಹುಗಳೇ ನಮ್ಮ ನೆಲದ ಚರಿತ್ರೆಯ ಜೀವಂತ ಸಾಕ್ಷ್ಯ

ವರದಿ ಗುಬ್ಬಿ ಭರತ್

ಪಾರಂಪರಿಕ ಸಂಪತ್ತು ಮುಂದಿನ ಪೀಳಿಗೆಗೆ ಉಳಿಸುವುದು ಪ್ರತಿಯೊಬ್ಬರ ಹೊಣೆ: ಡಾ. ಎ.ಜಿ. ಶ್ರೀನಿವಾಸ್

ಗುಬ್ಬಿ: ಪೂರ್ವಜರು ಬಿಟ್ಟುಹೋದ ಐತಿಹಾಸಿಕ ಕುರುಹುಗಳು ನಮ್ಮ ನೆಲದ ಚರಿತ್ರೆ ಹಾಗೂ ಪರಂಪರೆಯನ್ನು ಪ್ರತಿಬಿಂಬಿಸುವ ಜೀವಂತ ಸಾಕ್ಷ್ಯಗಳಾಗಿವೆ. ಇಂತಹ ಅಮೂಲ್ಯ ಪರಂಪರೆಯನ್ನು ಸಂರಕ್ಷಿಸಿ, ಮುಂದಿನ ಪೀಳಿಗೆಗೆ ಪರಿಚಯಿಸುವ ಜವಾಬ್ದಾರಿ ಪ್ರತಿಯೊಬ್ಬರ ಮೇಲಿದೆ ಎಂದು ಇತಿಹಾಸ ಸಂಶೋಧಕ ಡಾ. ಎ.ಜಿ. ಶ್ರೀನಿವಾಸ್ ಹೇಳಿದರು.

ಪಟ್ಟಣದ ಶ್ರೀ ಚಿದಂಬರಾಶ್ರಮದ ಸೇವಾ ಸದನ ಪ್ರೌಢಶಾಲೆಯಲ್ಲಿ ತುಮಕೂರು ಸಂಶೋಧಕರ ತಂಡ, ಇತಿಹಾಸ ಸಂಕಲನ ಸಮಿತಿ ಹಾಗೂ ಬೆಂಗಳೂರು ಕರ್ನಾಟಕ ಇತಿಹಾಸ ಅಕಾಡೆಮಿ ವತಿಯಿಂದ ಆಯೋಜಿಸಿದ್ದ ಇತಿಹಾಸ ದಿವಸ ಹಾಗೂ ಐತಿಹಾಸಿಕ ಪರಂಪರೆ ಉಳಿಸಿ ಜಾಗೃತಿ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಶಾಸನಗಳು, ಪ್ರಾಚೀನ ದಾಖಲೆಗಳು, ಪತ್ರಗಳು ಹಾಗೂ ಐತಿಹಾಸಿಕ ವಸ್ತುಗಳು ನಮ್ಮ ಹಿಂದಿನ ಕಾಲದ ಜೀವನಶೈಲಿ ಮತ್ತು ಚರಿತ್ರೆಗೆ ಸಾಕ್ಷಿಯಾಗಿವೆ. ಇಂತಹ ದಾಖಲೆಗಳು ಹಾಗೂ ಕುರುಹುಗಳು ಎಲ್ಲೆಲ್ಲಿ ದೊರೆತರೂ ಅವುಗಳನ್ನು ಸಂರಕ್ಷಿಸಿ, ಶಾಶ್ವತವಾಗಿ ಉಳಿಸುವ ಕಾರ್ಯವನ್ನು ಎಲ್ಲರೂ ಒಗ್ಗಟ್ಟಿನಿಂದ ಮಾಡಬೇಕು ಎಂದು ಕರೆ ನೀಡಿದರು.

ಗುಬ್ಬಿಯ ಸ್ಥಳನಾಮ, ಲಕ್ಷ್ಮೀಧರ ಅಮಾತ್ಯರ ಶಾಸನ, ಬೆಣಚಿಗೆರೆ ಬಮ್ಮಲಾದೇವಿ ಶಾಸನ, ಬಿದರೆ ಕಮಲಾದೇವಿ ಉಲ್ಲೇಖಿತ ಶಾಸನ ಹಾಗೂ ಪುರದ ಎರಡನೇ ನರಸಿಂಹನ ಶಾಸನ ಸೇರಿದಂತೆ ಹಲವು ಐತಿಹಾಸಿಕ ದಾಖಲೆಗಳು ಗುಬ್ಬಿ ತಾಲ್ಲೂಕಿನ ಶ್ರೀಮಂತ ಇತಿಹಾಸವನ್ನು ಪರಿಚಯಿಸುತ್ತವೆ. ಕೋಟೆಗಳು, ವೀರಗಲ್ಲುಗಳು, ಮಾಸ್ತಿಗಲ್ಲುಗಳು, ತ್ರಿಮೂರ್ತಿ ಶಾಸನ ಶಿಲ್ಪಗಳು ಹಾಗೂ ಪ್ರಾಗೈತಿಹಾಸಿಕ ನೆಲೆಗಳು ನಮ್ಮ ಹಿಂದಿನ ಬದುಕಿನ ಕಥೆಯನ್ನು ಸಾರುತ್ತಿವೆ ಎಂದರು.

ಗುಬ್ಬಿ ಪಟ್ಟಣದಲ್ಲಿರುವ ಪ್ರಾಚೀನ ದೇವಾಲಯಗಳು, ಚರ್ಚ್‌ಗಳು ಹಾಗೂ ಜೈನ ಬಸದಿಗಳು ಇಲ್ಲಿನ ಧಾರ್ಮಿಕ ಮತ್ತು ಸಾಂಸ್ಕೃತಿಕ ಸಾಮರಸ್ಯದ ಪರಂಪರೆಗೆ ಸಾಕ್ಷಿಯಾಗಿವೆ. ಇವುಗಳನ್ನು ಕೇವಲ ಕಲ್ಲು–ಶಿಲ್ಪಗಳೆಂದು ನೋಡುವ ಬದಲು ನಮ್ಮ ಇತಿಹಾಸದ ಅಮೂಲ್ಯ ಸಂಪತ್ತಾಗಿ ಪರಿಗಣಿಸಿ ಸಂರಕ್ಷಿಸಬೇಕು ಎಂದು ಹೇಳಿದರು.

ಮುಖ್ಯಶಿಕ್ಷಕ ಎ.ಬಿ. ಜಗದೀಶ್ ಮಾತನಾಡಿ, ಪ್ರತಿಯೊಂದು ವಿಷಯಕ್ಕೂ ತನ್ನದೇ ಆದ ಇತಿಹಾಸವಿದೆ. ನಮ್ಮ ಸಂಸ್ಕೃತಿ ಮತ್ತು ಪರಂಪರೆಯನ್ನು ಉಳಿಸಿ ಬೆಳೆಸಲು ಎಲ್ಲರ ಸಹಕಾರ ಅಗತ್ಯ. ಪಾರಂಪರಿಕ ಕೃಷಿ ಪದ್ಧತಿಯನ್ನು ನಿರ್ಲಕ್ಷಿಸಿದ ಪರಿಣಾಮ ಆಹಾರ ಪದ್ಧತಿಯಲ್ಲೂ ಹಲವು ಬದಲಾವಣೆಗಳಾಗಿವೆ. ಇದೀಗ ಮತ್ತೆ ಹಿರಿಯರು ಅನುಸರಿಸುತ್ತಿದ್ದ ಕೃಷಿ ಪದ್ಧತಿಗಳತ್ತ ಮರಳುವ ಪ್ರಯತ್ನ ನಡೆಯುತ್ತಿದೆ. ನಮ್ಮ ಜೀವನ ಪದ್ಧತಿಯಲ್ಲೂ ಇತಿಹಾಸದ ಮಹತ್ವವಿದೆ ಎಂದರು.

ಡಾ. ರಶ್ಮಿ ಮಾತನಾಡಿ, ಇತಿಹಾಸವನ್ನು ಮರೆತರೆ ನಮ್ಮ ಭವಿಷ್ಯದ ಪೀಳಿಗೆಗೆ ಅದರ ನೈಜ ಅರಿವು ಮೂಡಿಸಲು ಸಾಧ್ಯವಾಗುವುದಿಲ್ಲ. ಆದ್ದರಿಂದ ಐತಿಹಾಸಿಕ ಘಟನೆಗಳು ಮತ್ತು ಪರಂಪರೆಯ ಕುರುಹುಗಳನ್ನು ಸೂಕ್ತ ಸಾಕ್ಷ್ಯಗಳೊಂದಿಗೆ ಸಂರಕ್ಷಿಸಿ, ಮುಂದಿನ ಪೀಳಿಗೆಗೆ ಪರಿಚಯಿಸುವ ಕೆಲಸ ಆಗಬೇಕು ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಮಲ್ಲಿಕಾರ್ಜುನ್, ಶಶಿಕಲಾ, ಸಹನ, ಪದ್ಮ, ಮಮತಾ, ರಶ್ಮಿ, ಶ್ರೀನಿವಾಸ್ ಸೇರಿದಂತೆ ಬಿಇಡ್ ಪ್ರಶಿಕ್ಷಣಾರ್ಥಿಗಳು ಉಪಸ್ಥಿತರಿದ್ದರು.

ಸಿರಿಗೆರೆ ಶ್ರೀಮಠಕ್ಕೆ 21 ಸಾವಿರ ಕೊಬ್ಬರಿ ಮಿಠಾಯಿ

ಸೂರ್ಯಪ್ರಗತಿನ್ಯೂಸ್.ಕಾಂ

ತಿಪಟೂರು : ಚಿತ್ರದುರ್ಗ ಜಿಲ್ಲೆಯ ಸಿರಿಗೆರೆಯಲ್ಲಿ ಸೆಪ್ಟೆಂಬರ್ 24ರಂದು ನಡೆಯಲಿರುವ ತರಳಬಾಳು ಜಗದ್ಗುರು ಲಿಂಗೈಕ್ಯ ಶ್ರೀ ಶಿವಕುಮಾರ ಶಿವಾಚಾರ್ಯ ಮಹಾಸ್ವಾಮೀಜಿಯವರ 35ನೇ ವರ್ಷದ ಶ್ರದ್ಧಾಂಜಲಿ ಕಾರ್ಯಕ್ರಮದ ಅಂಗವಾಗಿ ತಿಪಟೂರು ತಾಲ್ಲೂಕಿನ ಸಾಧು ವೀರಶೈವ ಸಮಾಜದ ವತಿಯಿಂದ ವಿಶೇಷ ಸೇವಾ ಕಾರ್ಯ ಕೈಗೊಳ್ಳಲಾಗಿದೆ.

ತಾಲ್ಲೂಕಿನ ಹಾಲ್ಕುರಿಕೆ ಗ್ರಾಮದ ತರಳಬಾಳು ಶ್ರೀಮಠದ ವತಿಯಿಂದ ಎರಡು ಕ್ವಿಂಟಲ್ ಸಕ್ಕರೆ, ಒಂದು ಕ್ವಿಂಟಲ್ ತೆಂಗಿನಕಾಯಿ ಪೌಡರ್ ಹಾಗೂ 15 ಕೆಜಿ ತುಪ್ಪ ಬಳಸಿ 21,000 ಕೊಬ್ಬರಿ ಮಿಠಾಯಿಗಳನ್ನು ತಯಾರಿಸಿ ಸಿರಿಗೆರೆಯ ಶ್ರೀಮಠಕ್ಕೆ ರವಾನಿಸಲಾಯಿತು.

ಈ ಸಂದರ್ಭದಲ್ಲಿ ಮಾತನಾಡಿದ ತಿಪಟೂರು ತಾಲ್ಲೂಕಿನ ಸಾಧು ವೀರಶೈವ ಸಮಾಜದ ಅಧ್ಯಕ್ಷ ಪಿ.ಬಿ. ನಂಜಪ್ಪ ಪಟ್ರೆಹಳ್ಳಿ ಲಿಂಗೈಕ್ಯ ಶ್ರೀ ಶಿವಕುಮಾರ ಶಿವಾಚಾರ್ಯ ಮಹಾಸ್ವಾಮೀಜಿಯವರು ಧಾರ್ಮಿಕ, ಶೈಕ್ಷಣಿಕ ಹಾಗೂ ಸಾಮಾಜಿಕ ಕ್ಷೇತ್ರಗಳಿಗೆ ಅಪಾರ ಕೊಡುಗೆ ನೀಡಿದ ಮಹಾನ್ ಜಗದ್ಗುರುಗಳು. ಅವರ ಆದರ್ಶ, ವಿಚಾರಧಾರೆ ಹಾಗೂ ಸಮಾಜಮುಖಿ ಸೇವೆಯನ್ನು ಸ್ಮರಿಸುವುದು ನಮ್ಮೆಲ್ಲರ ಕರ್ತವ್ಯವಾಗಿದೆ. ಅವರ 35ನೇ ವರ್ಷದ ಶ್ರದ್ಧಾಂಜಲಿ ಕಾರ್ಯಕ್ರಮದಲ್ಲಿ ತಿಪಟೂರು ತಾಲ್ಲೂಕಿನ ಸಾಧು ವೀರಶೈವ ಸಮಾಜವೂ ತನ್ನ ಸೇವೆಯನ್ನು ಸಲ್ಲಿಸುತ್ತಿರುವುದು ಹೆಮ್ಮೆಯ ಸಂಗತಿ" ಎಂದರು.

ಸಮಾಜದ ಅಭಿವೃದ್ಧಿಗೆ ಸಂಘಟನೆ ಮತ್ತು ಸೇವಾ ಮನೋಭಾವ ಅತ್ಯಂತ ಅಗತ್ಯ. ಶ್ರೀಮಠದ ಧಾರ್ಮಿಕ ಹಾಗೂ ಸಾಮಾಜಿಕ ಕಾರ್ಯಗಳಿಗೆ ಸಮಾಜದ ಪ್ರತಿಯೊಬ್ಬರೂ ಕೈಜೋಡಿಸಬೇಕು. ಶ್ರದ್ಧಾಂಜಲಿ ಕಾರ್ಯಕ್ರಮಕ್ಕೆ ಆಗಮಿಸುವ ಭಕ್ತರಿಗೆ ಪ್ರಸಾದ ರೂಪದಲ್ಲಿ ವಿತರಿಸಲು 21 ಸಾವಿರ ಕೊಬ್ಬರಿ ಮಿಠಾಯಿಗಳನ್ನು ಸಿದ್ಧಪಡಿಸಿ ಕಳುಹಿಸಲಾಗುತ್ತಿದೆ. ಇದು ನಮ್ಮ ಸಮಾಜದ ಭಕ್ತಿ, ಶ್ರದ್ಧೆ ಹಾಗೂ ಸೇವಾ ಮನೋಭಾವದ ಪ್ರತೀಕವಾಗಿದೆ ಎಂದರು.

ಈ ಸೇವಾ ಕಾರ್ಯದಲ್ಲಿ ಸಮಾಜದ ಮುಖಂಡರು, ಹಾಲ್ಕುರಿಕೆ ಗ್ರಾಮದ ಶ್ರೀಮಠದ ಭಕ್ತರು ಹಾಗೂ ಸಮಾಜದ ವಿವಿಧ ಪದಾಧಿಕಾರಿಗಳು ಭಾಗವಹಿಸಿದ್ದರು.

ಸೂರ್ಯ ಪ್ರಗತಿ ಕನ್ನಡ ದಿನ ಪತ್ರಿಕೆ
ಜಾಹೀರಾತಿಗಾಗಿ ಸಂಪರ್ಕಿಸಿ: 9901010109

SP NEWS ಸಣ್ ಸುದ್ದಿ

ಕನ್ನಡದ ಖ್ಯಾತ ನಟ ಅನಂತ್ ನಾಗ್ ಅವರಿಗೆ
ದಾದಾಸಾಹೇಬ್ ಫಾಲ್ಕೆ ಪ್ರಶಸ್ತಿ

ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ಮಂಗಳವಾರ ಕನ್ನಡದ ಖ್ಯಾತ ನಟ ಅನಂತ್ ನಾಗ್ ಅವರಿಗೆ ಭಾರತೀಯ ಚಲನಚಿತ್ರ ರಂಗದ ಅತ್ಯುನ್ನತ ಗೌರವವಾದ 'ದಾದಾಸಾಹೇಬ್ ಫಾಲ್ಕೆ ಪ್ರಶಸ್ತಿ'ಯನ್ನು ನೀಡಿ ಗೌರವಿಸಿದರು. ಇದಕ್ಕು ಮುನ್ನ ಪ್ರಶಸ್ತಿ ಸಮಾರಂಭಕ್ಕೆ ಆಗಮಿಸಿದ ಅನಂತ್ ನಾಗ್ ಅವರಿಗೆ ಸ್ಟ್ಯಾಂಡಿಂಗ್ ಒವೇಶನ್ ನೀಡಲಾಯಿತು.

ಗುಜರಾತ್‌ನ ನರ್ಮದಾ ಜಿಲ್ಲೆಯ ಏಕ್ತಾ ನಗರದಲ್ಲಿ ನಡೆದ 72ನೇ ರಾಷ್ಟ್ರೀಯ ಚಲನಚಿತ್ರ ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ ರಾಷ್ಟ್ರಪತಿಗಳು, ಅನಂತ್ ನಾಗ್ ಅವರಿಗೆ ಪ್ರತಿಷ್ಠಿತ ದಾದಾಸಾಹೇಬ್ ಫಾಲ್ಕೆ ಪ್ರಶಸ್ತಿ ಪ್ರದಾನ ಮಾಡಿದರು. ಐದು ದಶಕಗಳಿಗೂ ಹೆಚ್ಚು ಕಾಲ ಭಾರತೀಯ ಚಿತ್ರರಂಗಕ್ಕೆ ನೀಡಿದ ಕೊಡುಗೆಯನ್ನು ಗುರುತಿಸಿ ಅನಂತ್ ನಾಗ್ ಅವರಿಗೆ ಈ ಪ್ರಶಸ್ತಿ ನೀಡಲಾಗಿದೆ.

ಏಕ್ತಾ ನಗರದಲ್ಲಿರುವ 'ಸ್ಟ್ಯಾಚ್ಯೂ ಆಫ್ ಯೂನಿಟಿ'ಯಲ್ಲಿ ನಡೆಯುತ್ತಿರುವ ಚಲನಚಿತ್ರ ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು, 2024ನೇ ಸಾಲಿನ ಸಿನಿಮಾ ಸಾಧಕರಿಗೆ ಪ್ರಶಸ್ತಿಗಳನ್ನು ಪ್ರದಾನ ಮಾಡಿದರು. ವಿವಿಧ ವಿಭಾಗಗಳಲ್ಲಿ ಒಟ್ಟು 92 ಮಂದಿ ಪ್ರಶಸ್ತಿಗಳನ್ನು ಸ್ವೀಕರಿಸಿದ್ದಾರೆ.

ದೇಶದ ಅತ್ಯಂತ ಜನಪ್ರಿಯ ನಟರಲ್ಲಿ ಒಬ್ಬರಾದ ಅನಂತ್ ನಾಗ್, ಐದು ದಶಕಗಳ ಸುದೀರ್ಘ ಹಾಗೂ ಗಮನಾರ್ಹ ವೃತ್ತಿಜೀವನದಲ್ಲಿ 300ಕ್ಕೂ ಹೆಚ್ಚು ಚಲನಚಿತ್ರಗಳಲ್ಲಿ ನಟಿಸಿದ್ದು, ಕನ್ನಡ ಹಾಗೂ ಭಾರತೀಯ ಚಲನಚಿತ್ರ ರಂಗಕ್ಕೆ ಅಪಾರ ಕೊಡುಗೆ ನೀಡಿದ್ದಾರೆ. ಅನಂತ್ ನಾಗ್ ಅವರು ಜನಪ್ರಿಯ ಟೆಲಿವಿಷನ್ ಸರಣಿ 'ಮಾಲ್ಗುಡಿ ಡೇಸ್'ನಲ್ಲಿನ ತಮ್ಮ ಅಭಿನಯಕ್ಕೂ ಹೆಸರುವಾಸಿಯಾಗಿದ್ದಾರೆ. ಈ ಜನಪ್ರಿಯ ನಟನಿಗೆ 2025ರಲ್ಲಿ ಪದ್ಮಭೂಷಣ ಪ್ರಶಸ್ತಿಯನ್ನು ನೀಡಿ ಗೌರವಿಸಲಾಗಿತ್ತು.

ರಕ್ಷಿತ್ ಶೆಟ್ಟಿ ನಿರ್ಮಾಣದ 'ಮಿಥ್ಯ'ಗೆ 3 ರಾಷ್ಟ್ರ ಪ್ರಶಸ್ತಿ!

ಇನ್ನು ರಕ್ಷಿತ್ ಶೆಟ್ಟಿ ನಿರ್ಮಾಣದ ಕನ್ನಡದ 'ಮಿಥ್ಯ' 3 ಪ್ರಶಸ್ತಿಗಳನ್ನು, ತುಳುವಿನ 'ಇಂಬು' 1 ಪ್ರಶಸ್ತಿಯನ್ನು ಪಡೆದುಕೊಂಡಿದ್ದು, ಇಂದು ಚಿತ್ರತಂಡದವರು ರಾಷ್ಟ್ರಪತಿಗಳಿಂದ ಪ್ರಶಸ್ತಿಯನ್ನು ಸ್ವೀಕರಿಸಿದರು. ಕನ್ನಡ ಚಿತ್ರರಂಗದ ಅತ್ಯಂತ ಜನಪ್ರಿಯ ನಟ ರಕ್ಷಿತ್ ಶೆಟ್ಟಿ ಮಾಲೀಕತ್ವದ ಪರಂವಃ ಸ್ಟುಡಿಯೋಸ್ ಮತ್ತು ಪ್ರಸಿದ್ಧ ಕೆಆರ್ ಜಿ ಸ್ಟುಡಿಯೋಸ್ ಜಂಟಿಯಾಗಿ ನಿರ್ಮಾಣ ಮಾಡಿರುವ ಮಿಥ್ಯ ಸಿನಿಮಾ 3 ಪ್ರಶಸ್ತಿಗೆ ಪಾತ್ರವಾಗಿದೆ.

"ಜಿಲ್ಲೆಯ ಎಲ್ಲಾ 10 ತಾಲೂಕುಗಳು ಬರಪೀಡಿತ

"ಜಿಲ್ಲೆಯ ಎಲ್ಲಾ 10 ತಾಲೂಕುಗಳನ್ನು ಬರಪೀಡಿತ ಎಂದು ಘೋಷಿಸಲಾಗಿದೆ. ರೈತರ ಜಾನುವಾರುಗಳಿಗೆ ಮೇವಿನ ಕೊರತೆಯಾಗದಂತೆ ತುಮುಲ್ ಮೂಲಕ 1 ಲಕ್ಷ ಮಿನಿ ಕಿಟ್‌ಗಳನ್ನು ವಿತರಿಸಲಾಗಿದೆ. ಪ್ರಸ್ತುತ 10 ವಾರಗಳಿಗೆ ಸಾಕಾಗುವಷ್ಟು ಮೇವಿನ ಲಭ್ಯತೆಯಿದ್ದು, ಅಗತ್ಯವಿದ್ದರೆ ಎನ್‌ಡಿಆರ್‌ಎಫ್ (NDRF) ಅನುದಾನದಡಿ ಒಣ ಹುಲ್ಲು ತರಿಸಿ ವಿತರಿಸಲು ಕ್ರಮ ಕೈಗೊಳ್ಳಲಾಗುವುದು" ಎಂದು ಜಿಲ್ಲಾಧಿಕಾರಿಗಳು ಸ್ಪಷ್ಟಪಡಿಸಿದರು.

CAP ಯೋಜನೆಯಡಿ ಕೊರೆಯಲಾದ ನೂತನ ಕೊಳವೆಬಾವಿಯ ಸ್ಥಳವನ್ನು ಪರಿಶೀಲಿಸಿದರು.ಜಿಲ್ಲಾಧಿಕಾರಿಗಳ ಸಮ್ಮುಖದಲ್ಲಿ ಪಂಪ್‌ಸೆಟ್ ಚಾಲನೆಗೊಳಿಸಿ, ಕೊಳವೆಬಾವಿಯಿಂದ ನೀರು ಲಭ್ಯವಾಗುತ್ತಿರುವುದನ್ನು ಪರಿಶೀಲಿಸಲಾಯಿತು. ಅಲ್ಲದೆ, ಅವರ ಸಮ್ಮುಖದಲ್ಲಿಯೇ ನೀರಿನ ಮಟ್ಟವನ್ನು ಪರಿಶೀಲಿಸಿ, ಕೊಳವೆಬಾವಿಯ ನೀರಿನ ಲಭ್ಯತೆ ಹಾಗೂ ಬಳಕೆಯ ಸಾಧ್ಯತೆ ಕುರಿತು ಸಂಬಂಧಪಟ್ಟ ಅಧಿಕಾರಿಗಳಿಂದ ಮಾಹಿತಿ ಪಡೆದುಕೊಳ್ಳಲಾಯಿತು. ನಂತರ ಸ್ಥಳೀಯ ಸಾರ್ವಜನಿಕರೊಂದಿಗೆ ಸಂವಾದ ನಡೆಸಿ, ಗ್ರಾಮದಲ್ಲಿ ಎದುರಾಗುತ್ತಿರುವ ಕುಡಿಯುವ ನೀರಿನ ಸಮಸ್ಯೆಗಳು ಹಾಗೂ ಇತರೆ ಸ್ಥಳೀಯ ಸಮಸ್ಯೆಗಳು ಮತ್ತು ಅಗತ್ಯತೆಗಳನ್ನು ಆಲಿಸಿದರು. ಸಾರ್ವಜನಿಕರು ತಿಳಿಸಿದ ಸಮಸ್ಯೆಗಳ ಕುರಿತು ಅಧಿಕಾರಿಗಳಿಂದ ಮಾಹಿತಿ ಪಡೆದು, ಕುಡಿಯುವ ನೀರಿನ ಸೌಲಭ್ಯವನ್ನು ಸಮರ್ಪಕವಾಗಿ ಒದಗಿಸಲು ಹಾಗೂ ಸಾರ್ವಜನಿಕರ ಅಗತ್ಯಗಳಿಗೆ ಅನುಗುಣವಾಗಿ ಅಗತ್ಯ ಕ್ರಮಗಳನ್ನು ಕೈಗೊಳ್ಳುವಂತೆ ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚಿಸಿದರು.

ಈ ಸಂದರ್ಭದಲ್ಲಿ ಉಪ ವಿಭಾಗಾಧಿಕಾರಿಗಳಾದ ಸಪ್ತ ಶ್ರೀ, ತಹಶೀಲ್ದಾರ್ ಮಮತಾ ಎಂ ಸೇರಿದಂತೆ ತಾಲೂಕು ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು

ಕುಡಿಯುವ ನೀರಿನ ಸಮಸ್ಯೆ : ಪರ್ಯಾಯ ಮೂಲ ಗುರ್ತಿಸಲು ಜಿಲ್ಲಾಧಿಕಾರಿಗಳ ಸೂಚನೆ

ಸೂರ್ಯಪ್ರಗತಿನ್ಯೂಸ್.ಕಾಂ

ತುಮಕೂರು: ಕುಡಿಯುವ ನೀರಿನ ಸಮಸ್ಯೆ ಎದುರಾಗಿರುವ ಪ್ರದೇಶಗಳಲ್ಲಿ ಪರ್ಯಾಯ ನೀರಿನ ಮೂಲಗಳನ್ನು ಗುರುತಿಸಿ, ಅಗತ್ಯವಿರುವ ಕಡೆ ಟ್ಯಾಂಕರ್ ಮೂಲಕ ಕುಡಿಯುವ ನೀರು ಪೂರೈಸಲು ಕ್ರಮ ಕೈಗೊಳ್ಳಬೇಕು ಎಂದು ಜಿಲ್ಲಾಧಿಕಾರಿ ಶುಭ ಕಲ್ಯಾಣ್ ಅಧಿಕಾರಿಗಳಿಗೆ ಸೂಚಿಸಿದರು.

ಜಿಲ್ಲಾಧಿಕಾರಿಗಳ ಕಚೇರಿ ಕೇಸ್ವಾನ್ ಸಭಾಂಗಣದಲ್ಲಿ ಸೋಮವಾರ ಸಂಜೆ ವಿಡಿಯೋ ಕಾನ್ಫರೆನ್ಸ್ ಮೂಲಕ ಜರುಗಿದ ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರದ ಸಭೆಯ ಅಧ್ಯಕ್ಷತೆವಹಿಸಿ ಮಾತನಾಡಿದ ಅವರು, ಅಂಕ ಯೋಜನೆಯಡಿ ಕೊರೆಯಲಾದ ವಿಫಲ ಬೋರ್‌ವೆಲ್‌ಗಳ ಕುರಿತು ಸುದೀರ್ಘವಾಗಿ ಪರಿಶೀಲನೆ ನಡೆಸಿದರು.

ಸಭೆಯಲ್ಲಿ ಜಿಲ್ಲೆಯ ಗ್ರಾಮೀಣ ಹಾಗೂ ನಗರ ಪ್ರದೇಶಗಳಲ್ಲಿನ ಪ್ರಸ್ತುತ ಕುಡಿಯುವ ನೀರಿನ ಸರಬರಾಜಿನ ಸ್ಥಿತಿ–ಗತಿ ಕುರಿತು ಅಧಿಕಾರಿಗಳಿಂದ ತಾಲೂಕುವಾರು ಮಾಹಿತಿ ಪಡೆದು ಪರಿಶೀಲಿಸಿದರು.

ತಾಲೂಕು ಪಂಚಾಯಿತಿಗಳ ಕಾರ್ಯನಿರ್ವಾಹಕ ಅಧಿಕಾರಿಗಳು ವಿಫಲ ಬೋರ್‌ವೆಲ್‌ಗಳ ಸ್ಥಳ ಪರಿಶೀಲನೆ ನಡೆಸಿ, ಉಕಖ ಛಾಯಾಚಿತ್ರಗಳೊಂದಿಗೆ ಸಮಗ್ರ ತಾಂತ್ರಿಕ ವರದಿಯನ್ನು ಸಲ್ಲಿಸಬೇಕೆಂದು ಸೂಚಿಸಿದರು.

ತಾಂತ್ರಿಕವಾಗಿ ಸಾಧ್ಯವಿರುವ ಕಡೆಗಳಲ್ಲಿ ಬೋರ್‌ವೆಲ್ ಪುನಶ್ಚೇತನ ಅಥವಾ ಅಗತ್ಯವಿದ್ದಲ್ಲಿ ಆಳಗೊಳಿಸುವ ಕುರಿತು ಪರಿಶೀಲಿಸಿ ಕ್ರಮ ಕೈಗೊಳ್ಳಬೇಕು. ತಾಂತ್ರಿಕವಾಗಿ ಪುನಶ್ಚೇತನಗೊಳಿಸಲು ಸಾಧ್ಯವಾಗದ ಬೋರ್‌ವೆಲ್‌ಗಳಿದ್ದಲ್ಲಿ ಪರ್ಯಾಯ ಸ್ಥಳ ಗುರುತಿಸಿ ಹೊಸ ಬೋರ್‌ವೆಲ್ ಕೊರೆಯಲು ಅಗತ್ಯ ಪ್ರಸ್ತಾವನೆ ಸಲ್ಲಿಸಬೇಕೆಂದು ನಿರ್ದೇಶನ ನೀಡಿದರು.

ವಿಫಲ ಬೋರ್‌ವೆಲ್‌ಗಳಿಂದ ಸಾರ್ವಜನಿಕರಿಗೆ ಕುಡಿಯುವ ನೀರಿನ ಸಮಸ್ಯೆ ಉಂಟಾಗದಂತೆ, ಅಗತ್ಯವಿರುವ ಪ್ರದೇಶಗಳಲ್ಲಿ ತಕ್ಷಣವೇ ಪರ್ಯಾಯ ಕುಡಿಯುವ ನೀರಿನ ವ್ಯವಸ್ಥೆ ಕಲ್ಪಿಸುವಂತೆ ಸೂಚಿಸಿದರು. ಅಲ್ಲದೆ, ವಿಫಲ ಬೋರ್‌ವೆಲ್‌ಗಳ ಸುರಕ್ಷಿತ ಮುಚ್ಚುವಿಕೆ, ಸ್ಥಳದ ದಾಖಲೀಕರಣ ಹಾಗೂ ಕೈಗೊಂಡ ಕ್ರಮಗಳ ವರದಿಯನ್ನು ಉಕಖ ಛಾಯಾಚಿತ್ರದೊಂದಿಗೆ ವರದಿ ಸಲ್ಲಿಸುವಂತೆ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಮೇವಿನ ಲಭ್ಯತೆ ಪರಿಶೀಲನೆ:

ಜಿಲ್ಲೆಯ ವಿವಿಧ ತಾಲೂಕುಗಳಲ್ಲಿ ಮೇವಿನ ಲಭ್ಯತೆ ಮತ್ತು ಬೇಡಿಕೆ ಕುರಿತು ಮಾಹಿತಿ ಪಡೆದ ಅವರು, ಜಾನುವಾರುಗಳಿಗೆ ಅಗತ್ಯ ಪ್ರಮಾಣದಲ್ಲಿ ಮೇವು ಲಭ್ಯವಾಗುವಂತೆ ಕ್ರಮ ಕೈಗೊಳ್ಳಬೇಕು. ಯಾವುದೇ ಪ್ರದೇಶದಲ್ಲಿ ಮೇವು ಕೊರತೆ ಉಂಟಾಗದಂತೆ ತಾಲೂಕು ಮಟ್ಟದಲ್ಲಿ ನಿರಂತರ ಮೇಲ್ವಿಚಾರಣೆ ನಡೆಸುವಂತೆ ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚಿಸಿದರು.

ಮಿನಿ ಕಿಟ್ ಹಾಗೂ ಬಿತ್ತನೆ ಪ್ರಗತಿ

ಸಭೆಯಲ್ಲಿ ಮಿನಿ ಕಿಟ್‌ಗಳ ವಿತರಣೆ ಹಾಗೂ ಬಿತ್ತನೆ ಪ್ರಗತಿ ಕುರಿತು ಸಹ ಪರಿಶೀಲನೆ ನಡೆಸಲಾಯಿತು. ಬಾಕಿ ಇರುವ ಮಿನಿ ಕಿಟ್‌ಗಳ ವಿತರಣೆ ಮತ್ತು ಬಿತ್ತನೆ ಕಾರ್ಯವನ್ನು ತ್ವರಿತವಾಗಿ ಪೂರ್ಣಗೊಳಿಸಿ, ಅರ್ಹ ಫಲಾನುಭವಿಗಳಿಗೆ ಯೋಜನೆಯ ಸೌಲಭ್ಯ ಸಮರ್ಪಕವಾಗಿ ತಲುಪುವಂತೆ ಸೂಚಿಸಿದರು.

ಬೆಳೆ ನಷ್ಟದ ಪರಿಶೀಲನೆ

ಜಿಲ್ಲೆಯ ವಿವಿಧ ತಾಲೂಕುಗಳ ಬೆಳೆ ನಷ್ಟದ ತಾಲೂಕುವಾರು ವರದಿಯನ್ನು ಪರಿಶೀಲಿಸಿದ ಜಿಲ್ಲಾಧಿಕಾರಿಗಳು, ಬೆಳೆ ಹಾನಿಯ ವಾಸ್ತವಿಕ ಸ್ಥಿತಿಯನ್ನು ಕ್ಷೇತ್ರಮಟ್ಟದಲ್ಲಿ ಪರಿಶೀಲಿಸಬೇಕು. ಬೆಳೆ ಹಾನಿಗೆ ಸಂಬಂಧಿಸಿದ ಅಗತ್ಯ ದಾಖಲೆ ಹಾಗೂ ವರದಿಗಳನ್ನು ನಿಯಮಾನುಸಾರ ಮತ್ತು ಸಮರ್ಪಕವಾಗಿ ಸಿದ್ಧಪಡಿಸುವಂತೆ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಎಲ್ಲಾ ತಹಶೀಲ್ದಾರರು, ಕಾರ್ಯನಿರ್ವಾಹಕ ಅಧಿಕಾರಿಗಳು, ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು ಹಾಗೂ ವಾಟರ್ ಮನ್‌ಗಳು ತಮ್ಮ ವ್ಯಾಪ್ತಿಯಲ್ಲಿ ಕುಡಿಯುವ ನೀರು, ಮೇವು ಹಾಗೂ ಇತರೆ ಮೂಲಭೂತ ಸೌಲಭ್ಯಗಳ ಕುರಿತು ನಿರಂತರ ನಿಗಾ ವಹಿಸಬೇಕು. ಇದೇ ಶುಕ್ರವಾರ ಎಲ್ಲಾ ತಾಲೂಕುಗಳಲ್ಲಿ ಮತ್ತು ಗ್ರಾಮ ಪಂಚಾಯಿತಿ ಮಟ್ಟದಲ್ಲಿ ಗ್ರಾಮಸಭೆಯನ್ನು ಏರ್ಪಡಿಸಲು ನಿರ್ದೇಶನ ನೀಡಿದರು.

ಸಾರ್ವಜನಿಕರಿಂದ ಬರುವ ಸಮಸ್ಯೆಗಳಿಗೆ ತ್ವರಿತವಾಗಿ ಸ್ಪಂದಿಸಿ, ಕ್ಷೇತ್ರಮಟ್ಟದಲ್ಲಿ ಪರಿಣಾಮಕಾರಿ ಸಮನ್ವಯದೊಂದಿಗೆ ಅಗತ್ಯ ಕ್ರಮ ಕೈಗೊಳ್ಳಬೇಕು. ಯಾವುದೇ ಗಂಭೀರ ಸಮಸ್ಯೆ ಅಥವಾ ತುರ್ತು ಪರಿಸ್ಥಿತಿ ಕಂಡುಬಂದಲ್ಲಿ ತಕ್ಷಣವೇ ಮೇಲಾಧಿಕಾರಿಗಳ ಗಮನಕ್ಕೆ ತಂದು, ವಿಳಂಬವಿಲ್ಲದೆ ಪರಿಹಾರ ಕ್ರಮ ಕೈಗೊಳ್ಳುವಂತೆ ಜಿಲ್ಲಾಧಿಕಾರಿಗಳು ಸೂಚಿಸಿದರು.

ಸಭೆಯಲ್ಲಿ ಅಪರ ಜಿಲ್ಲಾಧಿಕಾರಿ ಡಾ. ಎನ್. ತಿಪ್ಪೇಸ್ವಾಮಿ ಮಾತನಾಡಿ, ತಾಲೂಕು ಮಟ್ಟದ ಸಹಾಯವಾಣಿಗಳ ಕುರಿತು ವ್ಯಾಪಕ ಪ್ರಚಾರ ಮಾಡಬೇಕು ಮತ್ತು ಸಹಾಯವಾಣಿ ಮೂಲಕ ಸ್ವೀಕರಿಸಲಾಗುತ್ತಿರುವ ಕರೆ ಹಾಗೂ ಸಾರ್ವಜನಿಕರಿಂದ ಬಂದಿರುವ ಕುಡಿಯುವ ನೀರಿಗೆ ಸಂಬಂಧಿಸಿದ ಸಮಸ್ಯೆಗಳ ಕುರಿತು ಮಾಹಿತಿ ಪಡೆದು, ಸಮಸ್ಯಾತ್ಮಕ ಗ್ರಾಮಗಳಲ್ಲಿ ಸಮರ್ಪಕ ಕುಡಿಯುವ ನೀರು ಸರಬರಾಜು ಮಾಡುವಂತೆ ಸೂಚಿಸಿದರು. ಟ್ಯಾಂಕರ್ ಮೂಲಕ ನೀರು ಸರಬರಾಜು ಮಾಡಲಾಗುತ್ತಿರುವ ಗ್ರಾಮಗಳ ವಿವರ ಹಾಗೂ ಕೈಗೊಳ್ಳಲಾಗುತ್ತಿರುವ ಕ್ರಮಗಳ ಕುರಿತು ಪರಿಶೀಲಿಸಿದರು.

ಅಲ್ಲದೆ, ಈಗಾಗಲೇ ನೀರು ಸರಬರಾಜು ಮಾಡಿರುವ ಟ್ಯಾಂಕರ್‌ಗಳ ಬಿಲ್‌ಗಳ ಹಣ ಪಾವತಿ ಪ್ರಕ್ರಿಯೆಯ ಬಗ್ಗೆ ಮತ್ತು ಬರಗಾಲ ಘೋಷಣೆಯ ಹಿನ್ನೆಲೆಯಲ್ಲಿ ಸರ್ಕಾರದ ಆದೇಶ ಹಾಗೂ ನಿಯಮಾನುಸಾರ ಬಾಕಿ ಇರುವ ಟ್ಯಾಂಕರ್‌ಗಳ ಹಣವನ್ನು ತ್ವರಿತವಾಗಿ ಪಾವತಿಸುವಂತೆ ತಹಶೀಲ್ದಾರ್‌ಗಳಿಗೆ ನಿರ್ದೇಶನ ನೀಡಿದರು.

ಸಭೆಯಲ್ಲಿ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ ಕಾರ್ಯಪಾಲಕ ಅಭಿಯಂತರ ವಾಸುದೇವ್ ಬಿ.ಎಚ್. ಪಶುಪಾಲನ ಮತ್ತು ಪಶುವೈದ್ಯ ಸೇವಾ ಇಲಾಖೆ ಉಪನಿರ್ದೇಶಕರು ಶಿವಪ್ರಸಾದ್ ಎಚ್.ಎಂ. ಜಂಟಿ ಕೃಷಿ ನಿರ್ದೇಶಕ ಲಕ್ಷ್ಮಣ್ ಎಸ್. ಕಳ್ಳಣ್ಣನವರ್, ತೋಟಗಾರಿಕೆ ಇಲಾಖೆ ಜಂಟಿ ನಿರ್ದೇಶಕಿ ಶಾರದಮ್ಮ ಹಾಗೂ ಜಿಲ್ಲಾ ಮತ್ತು ತಾಲೂಕು ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು

ಸೂರ್ಯ ಪ್ರಗತಿ ಕನ್ನಡ ದಿನ ಪತ್ರಿಕೆ
ಜಾಹೀರಾತಿಗಾಗಿ ಸಂಪರ್ಕಿಸಿ: 9901010109

ಕೆರೆ ಪುನಶ್ಚೇತನ ಕಾಮಗಾರಿ ಮಾಡಿದ ಕೂಲಿ ಕಾರ್ಮಿಕರಿಗೆ ಹಣ ಬಿಡುಗಡೆ ಮಾಡಿಸಿ

ಸೂರ್ಯಪ್ರಗತಿನ್ಯೂಸ್.ಕಾಂ

ಪಾವಗಡ: ತಾಲ್ಲೂಕಿನ ಗ್ರಾ.ಪಂ ಮಟ್ಟದಲ್ಲಿ ವಿಬಿಜಿ ರಾಮ್ ಜಿ ಯೋಜನೆಯಡಿ ಕೆರೆ ಪುನಶ್ಚೇತನ ಕಾಮಗಾರಿ ಮಾಡಿದ ಕೂಲಿ ಕಾರ್ಮಿಕರಿಗೆ ಒಂದುವರೆ ತಿಂಗಳಿಂದ ಹಣ ಬಿಡುಗಡೆಯಾಗದೆ ಸಮಸ್ಯೆಯಾಗಿದ್ದು, ತಕ್ಷಣ ಕೂಲಿ ಹಣ ಬಿಡುಗಡೆ ಮಾಡಿಸಿಕೊಡುವಂತೆ ತಾ.ಪಂ ಕಛೇರಿ ಬಳಿ ತಮಟೆ ಗ್ರಾಮೀಣ ಕೂಲಿ ಕಾರ್ಮಿಕರ ಸಂಘದ ಪದಾಧಿಕಾರಿಗಳು ತಾ.ಪಂ ಇಒ ಮಧುಸೂದನ್ ರವರಿಗೆ ಮನವಿ ಪತ್ರ ಸಲ್ಲಿಸಿದರು.



ಸಂಘದ ಖಜಾಂಚಿ ವೆಂಕಟೇಶ್ ಮಾತನಾಡಿ ಮುಂಜಾನೆಯೇ ಕೂಲಿ ಕಾರ್ಮಿಕರು ರಾತ್ರಿ ಉಳಿದ ತಂಗಳನ್ನ ಬುತ್ತಿ ಕಟ್ಟಿಕೊಂಡು ಕಿ.ಮೀ ಗಟ್ಟಲೆ ನಡೆದುಕೊಂಡು ಬಂದು ಕೆರೆಗಳಲ್ಲಿ ಹೂಳೆತ್ತುವ ಕೆಲಸ ಮಾಡುತ್ತಿದ್ದಾರೆ.ವಿಬಿಜಿ ರಾಮ್ ಜಿ ಯೋಜನೆ ಪ್ರಾರಂಭವಾದಾಗಿನಿಂದ ಸುಮಾರು ಒಂದುವರೆ ತಿಂಗಳಿಂದ ಕೂಲಿ ಹಣ ಬಿಡುಗಡೆಯಾಗಿಲ್ಲಾ. ಅಧಿಕಾರಿಗಳಿಗೆ ಕೇಳಿದರೆ ಆರ್.ಬಿ.ಐ ಬ್ಯಾಂಕ್ ಅನುಮೋದನೆಗೆ ಕಾಯುತ್ತಿದೆ. ಎರಡು ಮೂರು ದಿನಗಳಲ್ಲಿ ಕೂಲಿ ಬರಲಿದೆ ಎಂದು ಕಳೆದ ಐದು ವಾರದಿಂದ ಹೇಳುತ್ತಿದ್ದಾರೆ ಇಲ್ಲಿಯವರೆಗೆ ಒಂದು ನಯಾ ಪೈಸೆಯೂ ಬಂದಿಲ್ಲಾ. ಇದರಿಂದ ಕೂಲಿ ಕಾರ್ಮಿಕರಾಗಿ ದುಡಿಯುತ್ತಿರುವ ಕಾರ್ಮಿಕರಿಗೆ ಕೂಲಿ ಹಣ ಬಿಡುಗಡೆ ವಿಳಂಬವಾಗಿದ್ದು, ಕೂಲಿಯನ್ನೆ ನಂಬಿ ಬದುಕು ನಡೆಸುತ್ತಿರುವವರಿಗೆ ಹಣ ಬಾರದೇ ಸಮಸ್ಯೆ ಉಂಟಾಗಿದೆ. ಈ ಹಣದಿಂದಲೇ ಅವರ ಕುಟುಂಬದ ಜೀವನ ನಡೆಯುತ್ತಿದೆ. ಇಂತಹ ಪರಿಸ್ಥಿಯಲ್ಲಿ ಒಂದು ತಿಂಗಳಿಗೂ ಹೆಚ್ಚು ಕಾಲದ ಕೂಲಿ ಹಣ ಪಾವತಿಸಿಲ್ಲ ಅದರೆ ಬಡ ಕುಟುಂಬಗಳು ತುಂಬ ಸಂಕಷ್ಟಕ್ಕೆ ಒಳಗಾಗುತ್ತಿದ್ದಾರೆ. ತಕ್ಷಣ ಜಿಲ್ಲಾಮಟ್ಟದ ಅಧಿಕಾರಿಗಳು ಮಧ್ಯಸ್ಥಿಕೆವಹಿಸಿ ಕೂಲಿ ಹಣ ಬಿಡುಗಡೆಯ ಸಮಸ್ಯೆಗೆ ಪರಿಹಾರ ನೀಡಿ ಕೂಲಿ ಕಾರ್ಮಿಕರ ಖಾತೆಗೆ ಕೂಲಿ ಹಣ ಜಮೆ ಮಾಡಬೇಕು ಇಲ್ಲಿದಿದ್ದಲ್ಲಿ ತಾ.ಪಂ ಕಛೇರಿ ಮುಂದೆ ಪ್ರತಿಭಟನೆ ನಡೆಸಲಾಗುವುದೆಂದು ಎಚ್ಚರಿಸಿದರು.

ತಾ.ಪಂ ಇಒ ಮಧುಸೂದನ್ ಮನವಿ ಪತ್ರ ಸ್ವೀಕರಿಸಿ ಮಾತನಾಡಿ ವಿಬಿಜಿರಾಮ್ ಜಿ ಯೋಜನೆಯಡಿಯ ಕಾಮಗಾರಿಗಳಿಗೆ ಅನೇಕ ಗ್ರಾಮ ಪಂಚಾಯತಿ ಮಟ್ಟದ ಕೂಲಿ ಕಾರ್ಮಿಕರ ಹಣ ಟ್ರಜರಿಯಲ್ಲಿ ಅನುಮೋದನೆಯಾಗಿದ್ದು, ಹಣ ಖಾತೆಗೆ ಜಮೆ ಆಗಿಲ್ಲಾ ತಾಂತ್ರಿಕ ಸಮಸ್ಯೆ ಬಗೆಹರಿಸಿ ಆದಷ್ಟು ಬೇಗ ಕೂಲಿ ಹಣ ಬಿಡುಗಡೆ ಮಾಡಿಕೊಡಲಾಗುವುದೆಂದು ಭರವಸೆ ನೀಡಿದರು.

ರಕ್ತದಾನಕ್ಕಿಂತ ಶ್ರೇಷ್ಠ ಸೇವೆ ಮತ್ತೊಂದಿಲ್ಲ; ಹಳ್ಳಿಕಾರ್ ಎತ್ತುಗಳ ಪ್ರದರ್ಶನ

ಸೂರ್ಯಪ್ರಗತಿನ್ಯೂಸ್.ಕಾಂ

ವರದಿ ಗುಬ್ಬಿ ಭರತ್

ಗುಬ್ಬಿ: ರಕ್ತದಾನ ಮಾಡುವ ಮೂಲಕ ಅಮೂಲ್ಯವಾದ ಜೀವವೊಂದನ್ನು ಉಳಿಸಬಹುದಾಗಿದ್ದು, ಇದು ಮಾನವೀಯತೆಯ ಪ್ರತೀಕವಾದ ಮಹತ್ಕಾರ್ಯವಾಗಿದೆ. ಪ್ರತಿಯೊಬ್ಬರೂ ರಕ್ತದಾನಕ್ಕೆ ಮುಂದಾಗಬೇಕು. ವಿಶೇಷವಾಗಿ ಯುವಕರು ಇಂತಹ ಸಮಾಜಮುಖಿ ಕಾರ್ಯಗಳಿಗೆ ಹೆಚ್ಚಿನ ಬೆಂಬಲ ನೀಡಬೇಕು ಎಂದು ಬೆಟ್ಟದಹಳ್ಳಿ ಮಠದ ಶ್ರೀ ಚಂದ್ರಶೇಖರ ಸ್ವಾಮೀಜಿ ಕರೆ ನೀಡಿದರು.

ಪಟ್ಟಣದ ಗೋಸಲ ಎಂಟರ್‌ಪ್ರೈಸಸ್‌ನ ದಶಮಾನೋತ್ಸವದ ಅಂಗವಾಗಿ ನೂತನ ಮಳಿಗೆ ಪ್ರಾರಂಭೋತ್ಸವದ ಸಂದರ್ಭದಲ್ಲಿ ಬೆಂಗಳೂರು ಕೆಂಪೇಗೌಡ ಆಸ್ಪತ್ರೆಯ ಸಹಯೋಗದಲ್ಲಿ ಆಯೋಜಿಸಿದ್ದ ರಕ್ತದಾನ ಶಿಬಿರಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ದಾನಧರ್ಮ ಮಾಡಲು ಹಣ ಅಥವಾ ವಸ್ತುಗಳೇ ಇರಬೇಕೆಂದಿಲ್ಲ. ನಮ್ಮ ದೇಹದಲ್ಲಿರುವ ರಕ್ತವನ್ನು ದಾನ ಮಾಡುವ ಮೂಲಕವೂ ಮತ್ತೊಂದು ಜೀವಕ್ಕೆ ನೆರವಾಗಬಹುದು. ರಕ್ತದಾನವು ಅತ್ಯಂತ ಶ್ರೇಷ್ಠವಾದ ದಾನವಾಗಿದ್ದು, ಶಿಬಿರದಲ್ಲಿ ಯುವಕರು ಉತ್ಸಾಹದಿಂದ ಪಾಲ್ಗೊಂಡು ರಕ್ತದಾನ ಮಾಡುತ್ತಿರುವುದು ಶ್ಲಾಘನೀಯ ಎಂದರು.

ಕಾಮಿಡಿ ಕಿಲಾಡಿ ನಟ ಮಡೆನೂರು ಮನು ಮಾತನಾಡಿ, ಆಧುನಿಕತೆಗೆ ತಕ್ಕಂತೆ ಮೊಬೈಲ್ ಶಾಪ್ ಆರಂಭಿಸಿ ವ್ಯಾಪಾರ ನಡೆಸುವುದರ ಜೊತೆಗೆ ಸಮಾಜಮುಖಿ ಚಿಂತನೆಯನ್ನೂ ಹೊಂದಿರುವ ಮಲ್ಲೇಶ್ ಅವರು ರಕ್ತದಾನ ಶಿಬಿರ ಆಯೋಜಿಸಿರುವುದು ಮೆಚ್ಚುವಂತಹ ಕಾರ್ಯವಾಗಿದೆ ಎಂದರು.

ಕೃಷಿಕ ಕುಟುಂಬದ ಹಿನ್ನೆಲೆಯನ್ನು ಹೊಂದಿರುವ ಅವರು ನೂತನ ಮಳಿಗೆ ಉದ್ಘಾಟನೆಯೊಂದಿಗೆ ಹಳ್ಳಿಕಾರ್ ತಳಿಯ ಎತ್ತುಗಳ ಪ್ರದರ್ಶನ ಆಯೋಜಿಸಿರುವುದು ಕಾರ್ಯಕ್ರಮಕ್ಕೆ ವಿಶೇಷ ಮೆರುಗು ನೀಡಿದೆ. ಇದರಿಂದ ರೈತರು ಹಾಗೂ ಕೃಷಿ ಸಂಸ್ಕೃತಿಯೊಂದಿಗೆ ಕಾರ್ಯಕ್ರಮವನ್ನು ಬೆಸೆದಂತಾಗಿದೆ ಎಂದು ಹೇಳಿದರು.

ಬಿಜೆಪಿ ಮುಖಂಡ ಎಸ್.ಡಿ. ದಿಲೀಪ್ ಕುಮಾರ್ ಮಾತನಾಡಿ, ಉದ್ಯಮ ಮತ್ತು ಉದ್ಯೋಗದ ಮೂಲಕ ದುಡಿಮೆಗೆ ಆದ್ಯತೆ ನೀಡುತ್ತಿರುವ ಇಂದಿನ ಯುವಕರ ನಡುವೆ ಸಮಾಜ ಸೇವೆಯನ್ನೂ ತಮ್ಮ ಬದುಕಿನ ಭಾಗವನ್ನಾಗಿಸಿಕೊಂಡಿರುವ ಮಲ್ಲೇಶ್ ಅವರು ಯುವಜನತೆಗೆ ಮಾದರಿಯಾಗಿದ್ದಾರೆ ಎಂದರು.

ನೂತನ ಮಳಿಗೆ ಉದ್ಘಾಟನೆಗಿಂತಲೂ ರಕ್ತದಾನ ಶಿಬಿರ ಹಾಗೂ ಹಳ್ಳಿಕಾರ್ ತಳಿಯ ಎತ್ತುಗಳ ಪ್ರದರ್ಶನ ಸಾರ್ವಜನಿಕರ ಗಮನ ಸೆಳೆದಿದ್ದು, ಸಾಮಾಜಿಕ ಕಾಳಜಿಯೊಂದಿಗೆ ಕಾರ್ಯಕ್ರಮ ಆಯೋಜಿಸಿರುವುದು ವಿಶೇಷವಾಗಿದೆ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ತೊರೆ ಮಠದ ಶ್ರೀ ಅಟವಿ ಚನ್ನಬಸವ ಸ್ವಾಮೀಜಿ, ಗೊಲ್ಲಹಳ್ಳಿ ಮಠದ ಶ್ರೀ ವಿಭವ ವಿದ್ಯಾಶಂಕರ ಸ್ವಾಮೀಜಿ, ಪಪಂ ಮಾಜಿ ಸದಸ್ಯ ಜಿ.ಆರ್. ಶಿವಕುಮಾರ್, ಶ್ರೀ ಗೋಸಲ ಚನ್ನಬಸವೇಶ್ವರ ಪತ್ತಿನ ಸೌಹಾರ್ದ ಸಹಕಾರ ಸಂಘದ ಸಂಸ್ಥಾಪಕ ಅಧ್ಯಕ್ಷ ಹೊಸಹಳ್ಳಿ ಗಿರೀಶ್, ಗೋಸಲ ಎಂಟರ್‌ಪ್ರೈಸಸ್ ಮಾಲೀಕ ಮಲ್ಲೇಶ್, ಕೆಂಪೇಗೌಡ ಆಸ್ಪತ್ರೆಯ ನೌಕರರ ಸಂಘದ ಗಿರೀಶ್ ಸೇರಿದಂತೆ ಹಲವರು ಉಪಸ್ಥಿತರಿದ್ದರು.

ಸೂರ್ಯ ಪ್ರಗತಿ ಕನ್ನಡ ದಿನ ಪತ್ರಿಕೆ

ದೀಕ್ಷಾಭೂಮಿ ಯಾತ್ರೆಗಾಗಿ ಅರ್ಜಿ ಆಹ್ವಾನ

ತುಮಕೂರು ಮಹಾರಾಷ್ಟ್ರದ ನಾಗಪುರದಲ್ಲಿ ನಡೆಯಲಿರುವ ದೀಕ್ಷಾ ಭೂಮಿ ಯಾತ್ರೆಯನ್ನು ಕೈಗೊಳ್ಳಲಿಚ್ಛಿಸುವ ಡಾ: ಬಿ.ಆರ್. ಅಂಬೇಡ್ಕರ್ ಅವರ ಅನುಯಾಯಿಗಳಿಂದ ಆನ್ ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ ಎಂದು ಮಧುಗಿರಿ ತಾಲ್ಲೂಕು ಸಮಾಜ ಕಲ್ಯಾಣ ಇಲಾಖೆ ಸಹಾಯಕ ನಿರ್ದೇಶಕ(ಗ್ರೇಡ್–1) ಡಾ: ದಿನೇಶ್ ಬಿ.ಎಂ. ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಸಮಾಜ ಕಲ್ಯಾಣ ಇಲಾಖೆ ವತಿಯಿಂದ ಡಾ: ಬಿ.ಆರ್. ಅಂಬೇಡ್ಕರ್ ಅನುಯಾಯಿಗಳನ್ನು ಅಕ್ಟೋಬರ್ 19 ರಿಂದ 22ರವರೆಗೆ ದೀಕ್ಷಾ ಭೂಮಿ ಯಾತ್ರೆಗೆ ಕಳುಹಿಸಿಕೊಡಲು ಬಸ್/ರೈಲಿನ ವ್ಯವಸ್ಥೆ ಕಲ್ಪಿಸುವ ಸಂಬಂಧ ಅರ್ಹ ಯಾತ್ರಾರ್ಥಿಗಳನ್ನು ಆಯ್ಕೆ ಮಾಡಲು ಈ ಅರ್ಜಿ ಆಹ್ವಾನಿಸಲಾಗಿದೆ.

ಆಸಕ್ತ ಡಾ: ಬಿ.ಆರ್. ಅಂಬೇಡ್ಕರ್ ಅನುಯಾಯಿಗಳು ಸಮಾಜ ಕಲ್ಯಾಣ ಇಲಾಖೆಯ ವೆಬ್‌ಸೈಟ್ https://swd.karnataka.gov.in/ ಮೂಲಕ ಅಕ್ಟೋಬರ್ 9ರೊಳಗಾಗಿ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಲು ಅವಕಾಶ ಕಲ್ಪಿಸಲಾಗಿದೆ. ಹೆಚ್ಚಿನ ಮಾಹಿತಿಗಾಗಿ ಮಧುಗಿರಿ ತಾಲ್ಲೂಕು ಸಮಾಜ ಕಲ್ಯಾಣ ಇಲಾಖೆ ಅಥವಾ ದೂ.ವಾ.ಸಂ. 08137–200579ನ್ನು ಸಂಪರ್ಕಿಸಬೇಕೆಂದು ಅವರು ತಿಳಿಸಿದ್ದಾರೆ.

ಇಂದಿನಿಂದ ವಿದ್ಯುತ್ ವ್ಯತ್ಯಯ

ತುಮಕೂರು: ಬೆಸ್ಕಾಂ ಕ್ಯಾತ್ಸಂದ್ರ ಉಪವಿಭಾಗ ವ್ಯಾಪ್ತಿಯಲ್ಲಿ ರೈಲ್ವೇಗೇಟ್ ನಿರ್ಮಾಣ ಕಾಮಗಾರಿ ಕೈಗೊಂಡಿರುವುದರಿಂದ ಸೆಪ್ಟೆಂಬರ್ 23 ರಿಂದ 27ರವರೆಗೆ ಬೆಳಗ್ಗೆ 10 ರಿಂದ ಸಂಜೆ 5 ಗಂಟೆಯವರೆಗೆ ಗಿರಿನಗರ, ಶಿವರಾಮಕಾರಂತ ನಗರ, ಬಡ್ಡಿಹಳ್ಳಿ, ಗೋಕುಲ ಬಡಾವಣೆ, ಸಿದ್ದರಾಮೇಶ್ವರ ಬಡಾವಣೆ ಹಾಗೂ ಸುತ್ತಮುತ್ತಲಿನ ಪ್ರದೇಶಗಳಲ್ಲಿ ವಿದ್ಯುತ್ ವ್ಯತ್ಯಯ ಉಂಟಾಗಲಿದ್ದು, ಗ್ರಾಹಕರು ಸಹಕರಿಸಬೇಕೆಂದು ಸಹಾಯಕ ಕಾರ್ಯನಿರ್ವಾಹಕ ಇಂಜಿನಿಯರ್ ಮನವಿ ಮಾಡಿದ್ದಾರೆ.

ಹೊಸ ಪಿ.ಎಫ್ ನೀತಿಯಲ್ಲಿನ ಕಾಮಿಕ ವಿರೋಧಿ ಬದಲಿಸಲು ಗಾರ್ಮೆಂಟ್ಸ್ ಕಾರ್ಮಿಕರ ಪ್ರತಿಭಟನೆ

ಸೂರ್ಯಪ್ರಗತಿನ್ಯೂಸ್.ಕಾಂ

ಕೇಂದ್ರ ಸರ್ಕಾರವು ಭವಿಷ್ಯ ನಿಧಿ ಹಿಂಪಡೆಯುವಲ್ಲಿ ಹೊಸ ನಿಯಮಗಳ ಜಾರಿಗೆ ತಂದಿದ್ದು, ಅದರ ಪ್ರಕಾರ: ಪಿ.ಎಫ್. ಹಣ ಡ್ರಾ ಮಾಡಿಕೊಳ್ಳಲು 12 ತಿಂಗಳು, ಪೆನ್ಷನ್ ಹಣ ಡ್ರಾ ಮಾಡಿಕೊಳ್ಳಲು 36 ತಿಂಗಳು ಕಾಯಬೇಕಾದ ಹೊಸ ನಿಯಮವನ್ನು ಜಾರಿಗೆ ತಂದಿದೆ.ಈ ಹೊಸ ನಿಯಮವು ಗಾರ್ಮೆಂಟ್ಸ್ ಕಾರ್ಮಿಕರ ಸಂಕಷ್ಟಗಳನ್ನು ಹೆಚ್ಚಿಸುತ್ತವೆ. ಇವು ಯಾವುದೇ ರೀತಿಯಲ್ಲೂ ಕಾರ್ಮಿಕರಿಗೆ ಅನುಕೂಲ ಕರವಾಗಿಲ್ಲ. ದಿನನಿತ್ಯದ ಕೂಲಿ ಕೆಲಸದಲ್ಲಿ ಬದುಕು ಸಾಗಿಸುವ ನಮಗೆ, ದೀರ್ಘಾವಧಿ ಕಾಯುವುದು ಆರ್ಥಿಕವಾಗಿ ತೀವ್ರ ಸಂಕಷ್ಟವನ್ನು ತಂದೊಡ್ಡಿದೆ ಎಂದು ಒತ್ತಾಯಿಸಿ ಗಾರ್ಮೆಂಟ್ಸ್ ಕಾರ್ಮಿಕರ ಜಂಟಿ ಹೋರಾಟ ಸಮಿತಿ ಮತ್ತು ಸಿಐಟಿಯು, ಸಂರಕ್ಷಣ ವೇದಿಕೆ ಕಾರ್ಯ ಕರ್ತ ಬೆಂಬಲದ ದೊಂದಿಗೆ ದಿನಾಂಕ; 22–09–2026 ರಂದು ಕೆಲಸ ಬಹಿಷ್ಕರಿಸಿ ಬೃಹತ್ ಪತಿಭಟನೆಯನ್ನು ನಡೆಸಿದರು.

ನಗರ ಗುಬ್ಬಿ ಗೇಟ್ ರಿಂಗ್ ರಸ್ತೆಯಿಂದ ಹೋರಾಟ ಸಾವಿರಾರು ಮಹಿಳಾ ಕಾರ್ಮಿಕರು

ಮೆರವಣಿಗೆಯಲ್ಲಿ ಸಾಗಿ ಜಿಲ್ಲಾಧಿಕಾರಿಗಳ ಕಛೇರಿ ಎದುರು ಸಮಾವೇಶಗೊಂಡು ತಮ್ಮ ಅಕ್ರೋಶವನ್ನು ವ್ಯಕ್ತಪಡಿಸಿದರು. ತಾವು ಉಳಿಸಿದ ತಮ್ಮದೆ ಗಳಿಕೆ ತಮ್ಮ ಕಷ್ಟಕ್ಕೆ ಪಡೆಯಲು 12 ತಿಂಗಳು ಕಾಯುವುದು ಯಾವ ನ್ಯಾಯ ಎಂದು ಉಗ್ರವಾಗಿ ಪ್ರತಿಭಟಿಸಿದರು.

ಪ್ರತಿಭಟನೆಯನ್ನು ಉದ್ದೇಶಿಸಿ ಗಾರ್ಮೆಂಟ್ಸ್ ಕಾರ್ಮಿಕರಾದ ರಾಧಿಕ, ಅಶಾ, ಎಸ್. ನೇತ್ರವಾತಿ. ಶರ್ಮಿಮ್ ಉನ್ನಿಸಾ ಅವರು ಮಾತಾಡಿ ನಮ್ಮ ಹಣ – ನಮ್ಮ ಕಷ್ಟಕ್ಕೆ ಸಿಗದಿರುವುದು ಯಾವ ನ್ಯಾಯ ಎಂದು ಪ್ರಶ್ನಿಸಿದರು. ಸಂರಕ್ಷಣಾ ವೇದಿಕೆಯ ಯೋಗಿಶ್ ಮಾತನಾಡಿ ಬೆಂಬಲಿಸಿದರು. ಸಿಐಟಯು ಜಿಲ್ಲಾ ಕಾರ್ಯದರ್ಶಿ ಎನ್. ಕೆ. ಸುಬ್ರಮಣ್ಯ ಅವರು ಮಾತನಾಡಿ ಗಾರ್ಮೆಂಟ್ಸ್ ಕಾರ್ಮಿಕರು ನಿತ್ಯ ಬೆಲೆಏರಿಕೆಯಲ್ಲಿ ಬಳಲುತ್ತಿದ್ದಾರೆ. ಕನಿಷ್ಟ ಕೂಲಿಯ ನಿಗಧಿಯಲ್ಲಿ ಗಾರ್ಮೆಂಟ್ಸ್ ಕಾರ್ಮಿಕರಿಗೆ ಅನ್ಯಾಯಗಿದೆ. ಕಾರ್ಮಿಕರು ಒಗ್ಗಟಿನಿಂದ ಅನ್ಯಾಯಗಳ ವಿರುದ್ದ ಹೋರಾಟ ಮಾಡಬೇಕೆಂದರು. ಸಿಐಟಿಯು ಜಿಲ್ಲಾ ಅಧ್ಯಕ್ಷ ಸೈಯದ್ ಮುಜೀಬ್ ಮಾತನಾಡಿ ಭವಿಷ್ಯ ನಿಧಿ ಕಾಯಿದೆ 1952 ಇಲ್ಲದಂತೆ ಮಾಡಿ ಸಾಮಾಜಿಕ ಸುರಕ್ಷತಾ ಸಂಹಿತೆಯನ್ನು ಕೇಂದ್ರ ಸರ್ಕಾರ ತಂದಿದೆ. ಈ ಸಂಹಿತೆಯು ಎಲ್ಲಾ ದುಡಿಯು ಜನರಿಗೆ ಸಾಮಾಜಿಕ ಭದ್ರತೆ ನೀಡುವ ಬದಲು ಇದ್ದ ಅಲ್ಪ ಸ್ವಲ್ಪ ಭದ್ರತೆಯನ್ನು ಇಲ್ಲವಾಗಿಸುತ್ತಿದೆ. ಇದರ ಭಾಗವಾಗಿಯೆ ಕಾಮಿಕರ ಭವಿಷ್ಯ ನೀಧಿ ಯಲ್ಲಿ 2026 ಬದಲಾವಣೆಗಳನ್ನು ತರಲಾಗಿದೆ. ಈ ಬದಲಾವಣೆಗಳು ಕಾರ್ಮಿಕ ವಿರೋಧಿಯಾಗಿವೆ ಇದರ ಸಮಗ್ರ ಹಿಂಪಡೆಯುವಂತಹ ಹೋರಾಟಕ್ಕೆ ಗಾರ್ಮೆಂಟ್ಸ್ ಕಾರ್ಮಿಕರು ಕೈ ಜೋಡಿಸಲು ವಿನಂತಿಸಿ, ಗಾರ್ಮೆಂಟ್ಸ್ ಕಾರ್ಮಿಕರ ಹೋರಾಟಕ್ಕೆ ಬಂಬಲ ಸೂಚಿಸಿದರು.

ಪ್ರತಿಭಟನಾ ನಿರತರಿಂದ ಮನವಿ ಸ್ವಿಕರಿಸಿದ ಅಪರ ಜಿಲ್ಲಾಧಿಕಾರಿಗಳಾದ ಶ್ರೀ ತಿಪ್ಪೆಸ್ವಾಮಿ ಅವರು ಇದು ಕೇಂದ್ರ ಸರ್ಕಾರದ ನೀತಿಯಾಗಿದೆ ತಮ್ಮ ಅಹವಾಲನ್ನು ಕೇಂದ್ರ ಸರ್ಕಾರಕ್ಕೆ ತಕ್ಷಣ ಕಳುಹಿಸುವುದಾಗಿ ತಿಳಿಸಿದರು. ಪಿ.ಎಫ್ ಆಯುಕ್ತರಾದ ಅವರು ಸಹ ಮನವಿ ಸ್ವಿಕರಿಸಿದರು

ಸೂರ್ಯ ಪ್ರಗತಿ ಕನ್ನಡ ದಿನ ಪತ್ರಿಕೆ
ಜಾಹೀರಾತಿಗಾಗಿ ಸಂಪರ್ಕಿಸಿ: 9901010109

EDITOR: RAVI KUMAR.C.H, CHIMPUGANAHALLI (VILLEGE), KODALAHALLI (POST), KORATGERE TALUK - 572121, TUMAKURU DISTRICT, KARNATAKA PRINTED BY: T.S.KRISHNAMURTHY, ANJANADRI PRINTERS, 4th CROSS, VINAYAKA NAGARA, TUMAKURU-572101. KARNATAKA, PUBLISHED BY: RAVI KUMAR.C.H, CHIMPUGANAHALLI (VILLEGE), KODALAHALLI (POST), KORATGERE TALUK - 572121, TUMAKURU DISTRICT, KARNATAKA. OWNED BY: RAVI KUMAR.C.H, CHIMPUGANAHALLI (VILLEGE), KODALAHALLI (POST), KORATGERE TALUK - 572121, TUMAKURU DISTRICT, KARNATAKA PRNTED AT: ANJANADRI PRINTERS, 4th CROSS, VINAYAKANAGARA, TUMAKURU-572101. KARNATAKA, PUBLISHED AT: TUMAKURU, CHIMPUGANAHALLI (VILLEGE), KODALAHALLI (POST), KORATGERE TALUK - 572121, TUMAKURU DISTRICT, KARNATAKA. GMAIL: suryapragathi2021@gmail.com.